ಸಂಪುಟ: ೦೭/ ಸಂಚಿಕೆ: ೧೯೧/ ಗುರುವಾರ ದಿನಾಂಕ : ೧೮-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 191/ THURSDAY Date : 18-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ಭಾರತೀಯ ಸೈನಿಕರ ಮುಂದೆ ಮಂಡಿಯೂರಿದ ಪಾಕ್

**ಭೋಪಾಲ್:** ಇದು ಪರಮಾಣು ಬೆದರಿಕೆಗೆ ಹೆದರದ ನವ ಭಾರತ, ಭಾರತೀಯ ಸೈನಿಕರು ಪಾಕಿಸ್ತಾನವನ್ನು ಕ್ಷಣಾರ್ಧದಲ್ಲಿ ಮಂಡಿಯೂರುವಂತೆ ಮಾಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

75ನೇ ಹುಟ್ಟುಹಬ್ಬದ ದಿನದಂದು ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿ ನಡೆದ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ನಿನ್ನೆಯಷ್ಟೇ, ರಾಷ್ಟ್ರ ಮತ್ತು ಜಗತ್ತು ಮತ್ತೊರ್ವ ಪಾಕಿಸ್ತಾನಿ ಭಯೋತ್ಪಾದಕ ಅಳುವುದನ್ನು ನೋಡಿದೆ. ಇದು ಹೊಸ ಭಾರತ, ಯಾರು ಕೂಡ ಪರಮಾಣು ಬೆದರಿಕೆಗಳಿಗೆ ಹೆದರುವುದಿಲ್ಲ ಎಂದು ಹೇಳಿದ್ದಾರೆ. ಭಾರತೀಯ ಸೈನಿಕರು ಪಾಕಿಸ್ತಾನವನ್ನು ಕ್ಷಣಾರ್ಧದಲ್ಲಿ ಮಂಡಿಯೂರುವಂತೆ ಮಾಡಿದ್ದಾರೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಭಯೋತ್ಪಾದಕರ ಕೇಂದ್ರಗಳನ್ನು ನಾಶಪಡಿಸಲಾಗಿದೆ ಎಂದು ಹೇಳಿದರು.

ಧಾರ್ ಜಿಲ್ಲೆಯಿಂದ 'ಸ್ವಸ್ಥ ನಾರಿ ಸಶಕ್ತ ಪರಿವಾರ್' ಮತ್ತು 'ರಾಷ್ಟ್ರೀಯ ಪೋಷಣ್ ಮಾಹ್' ಅಭಿಯಾನಕ್ಕೆ ಪ್ರಧಾನಿ ಇದೇ ವೇಳೆ ಚಾಲನೆ ನೀಡಿದರು.

## ಮೇಘಸ್ಫೋಟ: ಪ್ರವಾಹದಿಂದ 13ಮಂದಿ ಸಾವು

**ಡೆಹ್ರಾಡೂನ್/ಮಿಸ್ಸೋರಿ:** ಡೂನ್ ಕಣಿವೆ ಪ್ರದೇಶದಲ್ಲಿ ಇತ್ತೀಚಿಗೆ ಸಂಭವಿಸಿದ ವಿಕೋಪಗಳಲ್ಲೇ ಅತ್ಯಂತ ಭೀಕರ ಎನ್ನಲಾದ ಮೇಘಸ್ಫೋಟ ಮತ್ತು ಪ್ರವಾಹದಲ್ಲಿ ಕನಿಷ್ಠ 13 ಮಂದಿ ಮೃತಪಟ್ಟಿದ್ದು, ಇತರ 16 ಮಂದಿ ನಾಪತ್ತೆಯಾಗಿದ್ದಾರೆ. ಜಿಲ್ಲೆಯಾದ್ಯಂತ ಸೋಮವಾರ ರಾತ್ರಿ ಮತ್ತು ಮಂಗಳವಾರ ಬಿದ್ದ ವ್ಯಾಪಕ ಮಳೆಗೆ ಸೇತುವೆಗಳು ಮತ್ತು ಮಾರುಕಟ್ಟೆಗಳು ಕೊಚ್ಚಿಕೊಂಡು ಹೋಗಿದ್ದು, ಪ್ರಮುಖ ರಸ್ತೆಗಳು ಹಾನಿಗೀಡಾಗಿವೆ. ಉತ್ತರಾಖಂಡ ಹಾಗೂ ಹಿಮಾಚಲ ಪ್ರದೇಶದಲ್ಲಿ ಬಿದ್ದ ವ್ಯಾಪಕ ಮಳೆಯಿಂದ ದಿಢೀರ್ ಪ್ರವಾಹ ಪರಿಸ್ಥಿತಿ ಹಾಗೂ ಭೂಕುಸಿತದ ಪ್ರಕರಣಗಳು ವರದಿಯಾಗಿದ್ದು, ಎರಡು ರಾಜ್ಯಗಳಲ್ಲಿ ಒಂದೇ ದಿನ 18 ಮಂದಿ ಜೀವ ಕಳೆದುಕೊಂಡಿದ್ದಾರೆ. ಡೆಹ್ರಾಡೂನ್ ಹೊರವಲಯದ ಸಹಸ್ರಧಾರಾ ಮತ್ತು ಮಾಲದೇವತಾ ಪ್ರದೇಶಗಳಲ್ಲಿ ವ್ಯಾಪಕ ಹಾನಿ ಸಂಭವಿಸಿದೆ.

ಸಹಸ್ರಧಾರಾದಲ್ಲಿ ಕನಿಷ್ಠ 70 ಮಂದಿ ಗ್ರಾಮಸ್ಥರನ್ನು ರಾಜ್ಯ ವಿಪತ್ತು ಸ್ಪಂದನಾ ಪಡೆ ರಕ್ಷಿಸಿದೆ. ಈ ಭಾಗದ ಪ್ರಮುಖ ಮಾರುಕಟ್ಟೆ ಸಂಪೂರ್ಣ ಕೊಚ್ಚಿಕೊಂಡು ಹೋಗಿದ್ದು, ಪ್ರವಾಸಿಗರಿಗಾಗಿ ನಿರ್ಮಿಸಲಾಗಿದ್ದ ಹಲವು ಅಂಗಡಿ ಮಳಿಗೆಗಳು ಮತ್ತು ಅಡುಗೆಮನೆಗಳು ನಾಶವಾಗಿವೆ. ಸಹಸ್ರಧಾರಾ-ಕಾರ್ಲಿಗಡ್ ರಸ್ತೆಯಲ್ಲಿ ಒಂಬತ್ತಕ್ಕೂ ಹೆಚ್ಚು ಕಡೆಗಳಲ್ಲಿ ಭೂಕುಸಿತದಿಂದಾಗಿ ರಸ್ತೆಗೆ ಹಾನಿಯಾಗಿದ್ದು, ಸಾಂಗ್ ನದಿಯ ಪ್ರವಾಹವು ಮಾಲದೇವತಾ ಪ್ರದೇಶದಲ್ಲಿ ರಸ್ತೆಯನ್ನು ಕೊಚ್ಚಿಕೊಂಡು ಹೋಗಿದೆ.

## ಜಂಟಿ ಸಮೀಕ್ಷೆ ಮುಗಿಯುತ್ತಿದ್ದಂತೆ ಸಮರ್ಪಕವಾಗಿ ಪರಿಹಾರ ತಲುಪಿಸಿ

**ಕಲಬುರಗಿ:** ಜಂಟಿ ಸಮೀಕ್ಷೆ ಮುಗಿಯುತ್ತಿದ್ದಂತೆ ಬೆಳೆ ಹಾನಿಗೆ ಸಮರ್ಪಕವಾಗಿ ಪರಿಹಾರ ತಲುಪಿಸಿ. ಮಾನವ– ಜಾನವಾರು ಜೀವ ಹಾನಿಗಳಿಗೆ ಶೇ100 ರಷ್ಟು ಪರಿಹಾರ ಒದಗಿಸಿರುವ ರೀತಿಯಲ್ಲೇ ಬೆಳೆ ಹಾನಿಗೂ ಒದಗಿಸಿ ಎಂದು ಸಿ.ಎಂ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಲಬುರಗಿ ಪ್ರವಾಸಿ ಮಂದಿರದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಜೊತೆ ಸಭೆ ನಡೆಸಿ ಅತಿವೃಷ್ಠಿಯಿಂದ ಸಂಭವಿಸಿದ ಬೆಳೆ ಹಾನಿ ಕುರಿತಂತೆ ಮಾಹಿತಿ ಪಡೆದು, ಜಂಟಿ ಸಮೀಕ್ಷೆ ನಡೆದಿರುವ ಪ್ರಮಾಣದ ಬಗ್ಗೆ ಮಾಹಿತಿ ಪಡೆದ ಬಳಿಕ ಬೆಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಸಲಹೆ ಸೂಚನೆಗಳನ್ನು ನೀಡಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಅಜಯ್ ಸಿಂಗ್ ಅವರು ಪರಿಸ್ಥಿತಿಯನ್ನು ವಿವರಿಸಿ, "ಕಳೆದ ಬಾರಿಗಿಂತ ಈ ಬಾರಿ ಉತ್ತಮ ಮಳೆ ಆಗಿದೆ. ವಾಡಿಕೆಗಿಂತ ಶೇ17 ರಷ್ಟು ಮಳೆ ಹೆಚ್ಚಾಗಿದೆ. 37 ಮಾನವ ಜೀವ ಹಾನಿ ಪ್ರಕರಣಗಳು ವರದಿಯಾಗಿದ್ದು ಎಲ್ಲಾ ಪರಿಹಾರ ನೀಡಲಾಗಿದೆ. ಜಾನುವಾರು ಪ್ರಾಣ ಹಾನಿ ಬಗ್ಗೆ 175 ಪ್ರಕರಣಗಳು ವರದಿಯಾಗಿದ್ದು, ಎಲ್ಲದಕ್ಕೂ ಪರಿಹಾರ ನೀಡಲಾಗಿದೆ. ಸಂಪೂರ್ಣ ಮನೆ ಹಾನಿ, ಭಾಗಶಃ ಹಾನಿ ಆಗಿರುವ ಎಲ್ಲಾ ಪ್ರಕರಣಗಳಲ್ಲೂ ಪರಿಹಾರ ನೀಡಲಾಗಿದೆ ಎಂದರು.



ಬೀದರ್, ಕಲ್ಬುರ್ಗಿ, ಕೊಪ್ಪಳ, ಯಾದಗಿರಿ ಜಿಲ್ಲೆಗಳಲ್ಲಿ ಮಳೆಯಿಂದ ಹೆಚ್ಚು ಹಾನಿ ಸಂಭವಿಸಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ನಿರಂತರ ಜೋರು ಮಳೆ ಇರುವುದರಿಂದ ಬೆಳೆ ಹಾನಿಯ ಸಂಪೂರ್ಣ ಜಂಟಿ ಸಮೀಕ್ಷೆಗೆ ಅಡ್ಡಿಯಾಗುತ್ತಿದೆ. ಹೀಗಾಗಿ ನಿಗದಿತ ಅವಧಿಯೊಳಗೆ ಜಂಟಿ ಸಮೀಕ್ಷೆ ಪೂರ್ಣಗೊಳಿಸಲು ಸಾಧ್ಯವಾಗಿಲ್ಲ. ಮಳೆ ನಿಂತ ಬಳಿಕ ಎಂಟತ್ತು ದಿನಗಳ ಹೆಚ್ಚುವರಿ ಅಗತ್ಯ ಬೀಳಬಹುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಅವರು ಮುಖ್ಯಮಂತ್ರಿಗಳಿಗೆ ವಿವರಿಸಿದರು. ಸದ್ಯ ಡ್ರೋನ್ ಕ್ಯಾಮರಾ ಮೂಲಕ ಮಾಡಿರುವ ಬೆಳೆ ಹಾನಿ ವಿಡಿಯೊವನ್ನು ಅಧಿಕಾರಿಗಳು ಮುಖ್ಯಮಂತ್ರಿಗಳಿಗೆ ತೋರಿಸಿ ವಿವರಿಸಿದರು.

## ಮುಂದಿನ ವರ್ಷ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ

**ಬೆಂಗಳೂರು:** ರಾಜ್ಯದಲ್ಲೂ ಮುಂದಿನ ವರ್ಷ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್ಐಆರ್) ನಡೆಯಲಿದೆ. ರಾಜ್ಯ ಮುಖ್ಯ ಚುನಾವಣಾ ಆಯೋಗ ಇದರ ಪೂರ್ವ ಸಿದ್ದತೆ ಆರಂಭಿಸಿದೆ. ಈ ಕುರಿತಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಮಾಹಿತಿ ನೀಡಿದರು.

ರಾಜ್ಯದಲ್ಲಿ 2002ರಲ್ಲಿ ಎಸ್ಐಆರ್ ನಡೆಸಲಾಗಿತ್ತು. ಇದೀಗ 23 ವರ್ಷಗಳ ನಂತರ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಗೆ ನಿರ್ಧರಿಸಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್ಒ) ಪ್ರತಿ ಮತದಾರರ ಮನೆಗೂ ಹೋಗಿ ಮತದಾರರ ಗುರುತಿನ ಚೀಟಿ ಪರಿಶೀಲಿಸಲಿದ್ದಾರೆ. 2002ರ ಮತದಾರರ ವಿಶೇಷ ಪರಿಷ್ಕರಣೆ ಪಟ್ಟಿ ಹಾಗೂ 2025ರ ಮತದಾರರ ಪಟ್ಟಿಯಲ್ಲಿನ ವ್ಯತ್ಯಾಸಗಳನ್ನು ಪರಿಶೀಲಿಸಲಾಗುವುದು. ಬಿಎಲ್ಒಗಳು ಮನೆ ಭೇಟಿಯ ವೇಳೆ ಪ್ರತಿ ಮನೆಗೂ ಎರಡು ನಮೂನೆಗಳನ್ನು ನೀಡಿ ಮಾಹಿತಿ ಪಡೆಯಲಿದ್ದಾರೆ. ಅದರಲ್ಲಿ ಒಂದು ನಮೂನೆಯನ್ನು ಅಧಿಕಾರಿಗಳು ಸಹಿ ಮಾಡಿ ಮತದಾರರಿಗೆ ಹಿಂತಿರುಗಿಸಲಿದ್ದಾರೆ ಎಂದು ತಿಳಿಸಿದರು. ಮನೆಯಲ್ಲಿ ಯಾರೂ ಲಭ್ಯವಿರದಿದ್ದರೆ ಬಿಎಲ್ಒಗಳು ಮೂರು ಬಾರಿ ಭೇಟಿ ನೀಡಲಿದ್ದು, ಪಕ್ಕದ ಮನೆಯವರ ಸಹಾಯದಿಂದ ಸಂಪರ್ಕ ಸಾಧಿಸಲಿದ್ದಾರೆ. ಮತದಾರರ ಗುರುತಿನ ಚೀಟಿಯಲ್ಲಿ ಭಾವಚಿತ್ರ ಸ್ಪಷ್ಟವಾಗಿ ಇರದಿದ್ದರೆ ಮತದಾರರು ಹೊಸ ಫೋಟೋ ನೀಡಬೇಕು.



ಪ್ರತಿಯೊಬ್ಬ ಮತದಾರರು ಆಯೋಗ ಕೇಳಿರುವ ಒಂದು ದಾಖಲೆಯನ್ನು ಕಡ್ಡಾಯವಾಗಿ ನೀಡಬೇಕು. ಪ್ರಸ್ತುತ ಎಸ್ಐಆರ್‌ನಲ್ಲಿ ದಾಖಲೆ ನೀಡಿದರೆ, ಮುಂದಿನ ಪರಿಷ್ಕರಣೆಯಲ್ಲಿ ಮತ್ತೆ ದಾಖಲೆ ಕೇಳುವುದಿಲ್ಲ. ಮನೆಯಲ್ಲಿ ಲಭ್ಯವಿಲ್ಲದವರು ಆನ್‌ಲೈನ್‌ನಲ್ಲೂ ಅರ್ಜಿ ಹಾಕಬಹುದು. ಎರಡು ಕಡೆ ಹೆಸರು ಇದ್ದರೆ ಫೋಟೋ ಸ್ಕ್ಯಾನಿಂಗ್ ಸಿಸ್ಟಮ್ ಮೂಲಕ ಪತ್ತೆ ಹಚ್ಚಿ ಕ್ರಮ ಕೈಗೊಳ್ಳಲಾಗುವುದು. ಒಂದೇ ವ್ಯಕ್ತಿ ಎರಡು ಕಡೆ ಅರ್ಜಿ ಹಾಕಿದರೆ ಪ್ರಕರಣ ದಾಖಲಿಸಲಾಗುವುದು ಎಂದರು.

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ನಂತರವೂ ಮತದಾರರ ಹೆಸರಿಲ್ಲದಿದ್ದರೆ ಬಿಎಲ್ಒಗಳು ನೀಡಿರುವ ಸಹಿ ಮಾಡಿದ ನಮೂನೆ ಮೂಲಕ ಪ್ರಶ್ನಿಸಬಹುದು. ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕುರಿತಂತೆ ನಿನ್ನೆ ಎಲ್ಲ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ ನಡೆಸಲಾಗಿದೆ ಎಂದು ತಿಳಿಸಿದರು.

## ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ನೀಡಿದ ಸಚಿವರು

**ಬೆಳಗಾವಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ತಮ್ಮ ಗೃಹಕಚೇರಿಯಲ್ಲಿ ಬುಧವಾರ ಜನತಾ ದರ್ಶನ ನಡೆಸಿದರು.

ಸಚಿವರ ಬಳಿ ಅಹವಾಲು ಹೇಳಿಕೊಳ್ಳಲು ಬೆಳಗಾವಿ ಗ್ರಾಮೀಣ ಕ್ಷೇತ್ರದ ಜನರು ಸೇರಿದಂತೆ ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದಲೂ ಭಾರಿ ಸಂಖ್ಯೆಯಲ್ಲಿ ಜನರು ಆಗಮಿಸಿದ್ದರು. ಬೆಳಗ್ಗೆ 10 ಗಂಟೆಗೆ ಸರಿಯಾಗಿ ಆರಂಭಗೊಂಡ ಜನತಾ ದರ್ಶನದಲ್ಲಿ ವೈಯಕ್ತಿಕ ಸಮಸ್ಯೆಗಳು, ಗ್ರಾಮದ ಕೆಲಸಗಳು, ಸಮುದಾಯದ ಸಮಸ್ಯೆಗಳು ಸೇರಿದಂತೆ ಹಲವು ಸಮಸ್ಯೆಗಳ ಬಗ್ಗೆ ಜನರು ಸಚಿವರ ಬಳಿ ಮನವಿ ಸಲ್ಲಿಸಿದರು. ಕೆಲವೊಂದು ಸಮಸ್ಯೆಗಳಿಗೆ ಸ್ಥಳದಲ್ಲೇ ಸಚಿವರು ಪರಿಹಾರ ನೀಡಿದರೆ, ಕೆಲವೊಂದು ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ



ಇಲಾಖೆಯ ಅಧಿಕಾರಿಗಳಿಗೆ ಹಾಗೂ ಆಪ್ತ ಸಹಾಯಕರಿಗೆ ಸೂಚನೆ ನೀಡಿದರು.

ಸುಮಾರು 4 ಗಂಟೆಗೂ ಹೆಚ್ಚು ಕಾಲ ನಡೆದ ಜನತಾ ದರ್ಶನದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಸಮಾಧಾನಚಿತ್ತದಿಂದ ಜನರ ಸಮಸ್ಯೆಗಳನ್ನು ಆಲಿಸಿದರು. ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಜನತಾ ದರ್ಶನ ನಡೆಸುತ್ತಿದ್ದ ವೇಳೆ ಅವರ ಪುತ್ರ ಮೃಣಾಲ್ ಹೆಬ್ಬಾಳಕರ್ ಸಾಥ್ ನೀಡಿದರು. ಜನರ ಕೆಲವೊಂದು ಸಮಸ್ಯೆಗಳನ್ನು ಮೃಣಾಲ್ ಹೆಬ್ಬಾಳಕರ್ ಅವರೂ ಅಲಿಸಿ, ಪರಿಹಾರ ನೀಡಿದರು.

## ಮುಂದಿನ ವರ್ಷ ಹೊಸ ಬಿಪಿಎಲ್ ಕಾರ್ಡ್

**ಬೆಂಗಳೂರ:** ಅನರ್ಹ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆಯಾದ ಬಳಿಕ ಮುಂದಿನ ವರ್ಷ ಬಿಪಿಎಲ್ ಕಾರ್ಡ್‌ಗಳಿಗೆ ಅರ್ಜಿ ಸಲ್ಲಿಸಲು ಆನ್‌ಲೈನ್‌ನಲ್ಲಿ ಅವಕಾಶ ಕಲ್ಪಿಸುವುದಾಗಿ ಅಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ದಕ್ಷಿಣ ಭಾರತದಲ್ಲಿ ಅತೀ ಹೆಚ್ಚು ಬಿಪಿಎಲ್ ಕಾರ್ಡ್ ಹೊಂದಿರುವುದು ಕರ್ನಾಟಕ ರಾಜ್ಯ. ಶೇ. 75 ರಷ್ಟು ಮಂದಿ ಬಿಪಿಎಲ್ ಪಟ್ಟಿಯಲ್ಲಿದ್ದಾರೆ.

ಇದನ್ನು ಪರಿಷ್ಕರಣೆ ಮಾಡಲೇಬೇಕು ಎಂದು ಹೇಳಿದರು. ಬಿಪಿಎಲ್ ಹೊಂದಿರುವ ಅನರ್ಹರನ್ನು ಎಪಿಎಲ್ ಪಟ್ಟಿಗೆ ಸೇರಿಸುತ್ತೇವೆ. ಯಾವುದೇ ಕಾರಣಕ್ಕೂ ಪಡಿತರ ಕಾರ್ಡ್‌ಗಳನ್ನು ರದ್ದು ಮಾಡುವುದಿಲ್ಲ.

ಒಂದು ವೇಳೆ ಪರಿಷ್ಕರಣೆಯ ವೇಳೆ ಅರ್ಹರು ತಪ್ಪಿ ಹೋಗಿದ್ದರೆ ಅರ್ಜಿಕೊಡಬಹುದು. 24 ಗಂಟೆಯಲ್ಲೇ ಮತ್ತೆ ಬಿಪಿಎಲ್ ಕಾರ್ಡ್ ಕೊಟ್ಟು ಪಡಿತರ ನೀಡಲು ಆರಂಭಿಸಲಾಗುವುದು ಎಂದರು.

### ರಾಜ್ಯ ಸರ್ಕಾರಕ್ಕೆ ಸಮೀಕ್ಷೆಯ ಅಧಿಕಾರವೇ ಇಲ್ಲ: ಬೊಮ್ಮಾಯಿ


## ಮರುಸಮೀಕ್ಷೆ ದೊಡ್ಡ ಅನಾಹುತ

**ಹಾವೇರಿ:** ರಾಜ್ಯ ಸರ್ಕಾರ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಮರುಸಮೀಕ್ಷೆ ನಡೆಸುತ್ತಿರುವುದೇ ದೊಡ್ಡ ಅನಾಹುತ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಹಾವೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮರು ಸಮೀಕ್ಷೆ ಯಾರಿಗೂ ಅವಶ್ಯಕತೆ ಇರಲಿಲ್ಲ. ಇಂತಹ ಸಮೀಕ್ಷೆ ಈವರೆಗೆ ಇರಲಿಲ್ಲ. ಪ್ರಾಮಾಣಿಕವಾಗಿ ಹೇಳಬೇಕೆಂದ್ರೆ ಇದನ್ನು ಆರಂಭಿಸಿದ್ದೇ ದೊಡ್ಡ ಅನಾಹುತ ಎಂದರು.

ಲಿಂಗಾಯತ, ಪಂಚಮಸಾಲಿ, ಮತ್ತೊಂದು, ಮಗದೊಂದು ಅಂತ ಯಾರು ಯಾರೋ ಏನೇನೋ ಮಾಡುತ್ತಿದ್ದಾರೆ. ಇದರಿಂದ ಭವಿಷ್ಯದಲ್ಲಿ ಸಮಾಜಕ್ಕೆ ದೊಡ್ಡ ಹೊಡೆತ ಬೀಳಲಿದೆ. ಕೆಲವರು ವೀರಶೈವ ಅಂತಾರೆ, ಇನ್ನು ಕೆಲವರು ಲಿಂಗಾಯತ ಅಂತಾರೆ, ಮತ್ತೊಂದಿಷ್ಟು ಜನ ವೀರಶೈವ ಲಿಂಗಾಯತ ಅಂತಾರೆ. ಇದೆಲ್ಲಾ ಏಕೆ ಬೇಕಿತ್ತು? ಇಷ್ಟು ದಿನ ಹೇಗೆ ನಡೆದುಕೊಂಡು ಬಂದಿತ್ತೋ ಹಾಗೆಯೇ ನಡೆಸಿಕೊಂಡು ಹೋಗಬೇಕಿತ್ತು. ಇದೆಲ್ಲ ಜನರ ತಲೆಯಲ್ಲಿ ಬೇರೆ ಬೇರೆ ವಿಚಾರಗಳನ್ನು ಬಿತ್ತುವ ಕೆಲಸ ಎಂದು ಹೊರಟ್ಟಿ ತಿಳಿಸಿದರು.

ಹಿಂದೆ ನಿಜಲಿಂಗಪ್ಪ ಹಾಗೂ ಬಿ.ಡಿ.ಜತ್ತಿಯವರ ಕಾಲಕ್ಕೆ 96ರಿಂದ 98 ಜನ ಲಿಂಗಾಯತ ಶಾಸಕರಿದ್ದರು. ಇವತ್ತು ಪರಿಸ್ಥಿತಿ ಎಲ್ಲಿಗೆ ಬಂದು ನಿಂತಿದೆ ಅಂತ ಎಲ್ಲರಿಗೂ ಗೊತ್ತು. ಗಾಣಿಗ ಬೇರೆ ಅಂತಾರೆ, ಬಣಜಿಗ ಬೇರೆ ಅಂತ ಹೇಳ್ತಾರೆ, ಹೀಗೆ ಮಾಡುವುದರಿಂದ ಏನೂ ಉಪಯೋಗ ಇಲ್ಲ. ಹಿಂದೆ ಇದ್ದ ಪದ್ಧತಿಯನ್ನು ಮುಂದುವರಿಸಿಕೊಂಡು ಹೋದರೆ ಸಾಕಿತ್ತು.



ಹಿಂದೂ ಲಿಂಗಾಯತ ಅಂತ ಹೇಳಿದ್ದರೆ ಮುಗಿದುಹೋಗುತ್ತಿತ್ತು. ಆದರೆ, ಇದನ್ನು ಕೆಲವರು ಪ್ರಸ್ತಾಪಿಸುವ ಮೂಲಕ ತಮ್ಮ ತಮ್ಮ ಸ್ವಾರ್ಥಕ್ಕೆ ಬಳಸಿಕೊಳ್ಳುತ್ತಿದ್ದಾರೆ. ನಾನು ಯಾರು ಅಂತ ಅವರ ಹೆಸರನ್ನು ಹೇಳುವುದಿಲ್ಲ. ಅಲ್ಲದೇ, ನಾನು ಆ ಸಭೆಯಲ್ಲಿ ಭಾಗವಹಿಸಲ್ಲ, ಯಾರ ಬಗ್ಗೆಯೂ ಮಾತಾಡಲ್ಲ. ಏನಾದ್ರೂ ಅನಾಹುತವಾದರೆ ಅದು ಇದರಿಂದಾಗಿಯೇ ಆಗುತ್ತದೆ ಎಂದು ಕಿಡಿಕಾರಿದರು.

ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, ಸಮೀಕ್ಷೆ ಮೂಲಕ ಸಮಾಜ ಒಡೆಯೋದಲ್ಲ, ಸಮಾಜವನ್ನು ಚೂರು ಚೂರು ಮಾಡಿದ್ದಾರೆ. ಇದು ಸದುದ್ದೇಶದಿಂದ ಕೂಡಿಲ್ಲ, ರಾಜಕೀಯ ಉದ್ದೇಶದಿಂದ ಕೂಡಿದೆ. ಇದರ ಪುನರ್ ಬದಲಾವಣೆ ಆಗಬೇಕು. ಕೇಂದ್ರ ಸರ್ಕಾರ ಈಗಾಗಲೇ ಸಮೀಕ್ಷೆ ಮಾಡುವುದಾಗಿ ಹೇಳಿದೆ. ಅಲ್ಲಿವರೆಗೆ ಕಾಯಬೇಕು, ಯಾರನ್ನೋ ಮೆಚ್ಚಿಸಲು ಸಿಎಂ ಸಮೀಕ್ಷೆ ಮಾಡಬಾರದು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮತಾಂತರ ನಿಷೇಧ ಕಾನೂನು ಈಗಾಗಲೇ ಕರ್ನಾಟಕದಲ್ಲಿದೆ. ನಮ್ಮ ಸರ್ಕಾರದಲ್ಲೇ ಇದನ್ನು ಜಾರಿಗೆ ತಂದಿದ್ದೇವೆ. ಒತ್ತಾಯ ಪೂರ್ವಕವಾಗಿ ಮತಾಂತರ, ಆಮಿಷ ಪೂರ್ವಕ ಮತಾಂತರಕ್ಕೆ ಯಾವಾಗಲೂ ನಿಷೇಧ ಇದ್ದೇ ಇದೆ. ರಾಜ್ಯ ಸರ್ಕಾರ ಕಣ್ಣುಮುಚ್ಚಿಕೊಂಡು ದಾರಿ ತಪ್ಪಿಸೋ ಕೆಲಸ ಮಾಡುತ್ತಿದೆ. ರಾಜ್ಯ ಸರ್ಕಾರ ಎಲ್ಲಾ ಸಮುದಾಯಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ನಾನು ಸಿಎಂ ಆಗಿದ್ದ ವೇಳೆ ವಾಲ್ಮೀಕಿ ಸಮಾಜಕ್ಕೆ ಶೇ.3ರಿಂದ 7ರಷ್ಟು ಮೀಸಲಾತಿ ಮಾಡಿದ್ದೆ. ಎಸ್ಸಿಗೆ 15 ರಿಂದ 17 ಮಾಡಿದ್ದೇನೆ. ಈಗ ಅದರ ಪ್ರಕಾರ ನಡೆದಿದೆ. ಮುಂದೆ ಕೇಂದ್ರ ಸರ್ಕಾರ ಸಮೀಕ್ಷೆ ಮಾಡಲಿದೆ. ಅದರ ಆಧಾರದ ಮೇಲೆ ಜನಸಂಖ್ಯೆ ಗೊತ್ತಾಗುತ್ತೆ. ಆ ಮೇಲೆ ಮುಂದೆ ನಿರ್ಧಾರ ಆಗುತ್ತೆ ಎಂದು ಅವರು ತಿಳಿಸಿದರು.

ರಾಜ್ಯ ಸರ್ಕಾರಕ್ಕೆ ಸಮೀಕ್ಷೆ ಮಾಡುವ ಅಧಿಕಾರನೇ ಇಲ್ಲ. ಸ್ಯಾಂಪಲ್ ಸರ್ವೆ ಮಾಡುವ ಅಧಿಕಾರ ಇದೆ. ಕೇಂದ್ರ ಸಮೀಕ್ಷಾ ಕಾಯಿದೆ ಪ್ರಕಾರ ರಾಜ್ಯ ಸರ್ಕಾರಕ್ಕೆ ಮನೆ ಮನೆಗೆ ಹೋಗಿ ಸರ್ವೆ ಮಾಡುವ ಅಧಿಕಾರ ಇಲ್ಲ. ಇವರು ಗೊಂದಲ ಸೃಷ್ಟಿಸುವ ಉದ್ದೇಶದಿಂದ ಹೀಗೆ ಮಾಡುತ್ತಿದ್ದಾರೆ. ವೀರಶೈವ ಲಿಂಗಾಯತ ಅಂತ ಒಂದು ಜಾತಿ ಸೃಷ್ಟಿ ಮಾಡಿದ್ದಾರೆ. ಲಿಂಗಾಯತ ವೀರಶೈವ ಅಂತ ಮತ್ತೊಂದು ಸೃಷ್ಟಿ ಮಾಡಿದ್ದಾರೆ.

ಪ್ರತಿ ಸಮುದಾಯದಲ್ಲಿ 25ರಿಂದ 30 ಹೊಸ ಉಪ ಪಂಗಡಗಳನ್ನು ಸೃಷ್ಟಿಸಿದ್ದಾರೆ. ಕನ್ವರ್ಟೆಡ್ ಕ್ರಿಶ್ಚಿಯನ್ ಅಂತ ಒಂದು ಪ್ರತ್ಯೇಕ ಕಾಲಂ ಮಾಡಿದ್ದಾರೆ. ಎಲ್ಲಾ ಸಮಾಜದಲ್ಲಿ ಕನ್ವರ್ಟೆಡ್ ಕ್ರಿಶ್ಚಿಯನ್ ಇರೋ ರೀತಿಯಲ್ಲಿ ಮಾಡಿದ್ದಾರೆ. ಕನ್ವರ್ಟೆಡ್‌ಗೆ ಯಾವುದೇ ಕಾಲಂ ಏನೂ ಸಂವಿಧಾನದಲ್ಲಿ ಇಲ್ಲ ಎಂದು ಹೇಳಿದರು.

### ರಾಜ್ಯದಲ್ಲಿ ಮತ್ತೆ ಭಾರಿ ಮಳೆ ಮುನ್ಸೂಚನೆ

## 14ಜಿಲ್ಲೆಗಳಲ್ಲಿ ಅಲರ್ಟ್ ಘೋಷಣೆ

**ಬೆಂಗಳೂರು:** ರಾಜ್ಯದಲ್ಲಿ ಮತ್ತೆ ಮಳೆ ಚುರುಕಾಗಲಿದ್ದು, 14 ಜಿಲ್ಲೆಗಳಲ್ಲಿ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**ಅಲರ್ಟ್ ಘೋಷಣೆ:** ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಮೈಸೂರು, ಮಂಡ್ಯ, ಕೊಡಗು, ಹಾಸನ, ಯಾದಗಿರಿ, ವಿಜಯಪುರ, ರಾಯಚೂರು, ಕಲಬುರಗಿ, ಬೀದರ್, ಬೆಳಗಾವಿ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಶಿವಮೊಗ್ಗ, ತುಮಕೂರು, ಚಿಕ್ಕಮಗಳೂರು, ಚಿತ್ರದುರ್ಗ, ಚಿಕ್ಕಬಳ್ಳಾಪುರ, ದಾವಣಗೆರೆ, ಕೋಲಾರ, ಧಾರವಾಡ, ಗದಗ, ಹಾವೇರಿ, ಚಾಮರಾಜನಗರ ಹಾಗೂ ವಿಜಯನಗರ ಜಿಲ್ಲೆಗಳಲ್ಲಿಯೂ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**ಎಲ್ಲೆಲ್ಲಿ ಮಳೆ:** ಕ್ಯಾಸಲ್‌ರಾಕ್, ನೆಲೋಗಿ, ಗಂಗಾಪುರ, ಬಿಳಗಿ, ಆಲಮಟ್ಟಿ, ತಾಳಿಕೋಟೆ, ಸುಳ್ಯ, ರಾಯಲ್ಪಾಡು, ಕೋಲಾರ, ಗುಬ್ಬಿ, ಗೋಕರ್ಣ, ಚಿಕ್ಕಬಳ್ಳಾಪುರ, ಅಥಣಿ, ಯಡ್ರಾಮಿ, ಉಡುಪಿ, ಶಕ್ತಿನಗರ, ಸಂಕೇಶ್ವರ, ಪುತ್ತೂರು, ಪೊನ್ನಂಪೇಟೆ, ಕುಂದಾಪುರ, ಕೊಟ್ಟಿಗೆಹಾರ, ಹುಣಸಗಿ, ಕೆಂಭಾವಿ, ಹೆಚ್.ಡಿ.ಕೋಟೆ, ಧರ್ಮಸ್ಥಳ, ಚಿಂಚೋಳಿ, ಮುದ್ದೇಬಿಹಾಳ, ಕಮಲಾಪುರ, ಬೀದರ್, ಭಾಲ್ಕಿ ಹಾಗೂ ಭಾಗಮಂಡಲದಲ್ಲಿ ಮಂಗಳವಾರ ಹೆಚ್ಚಿನ ಮಳೆಯಾಗಿದೆ.

**ರಾಜಧಾನಿಯ ವಾತಾವರಣ:** ಬೆಂಗಳೂರಿನಲ್ಲೂ ಮೋಡ ಕವಿದ ವಾತಾವರಣವಿದ್ದು, ಅಲ್ಲಲ್ಲಿ



ಮಳೆಯಾಗಲಿದೆ. ನಗರದಲ್ಲಿ 28.5ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.3 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಹೆಚ್ಎಎಲ್‌ನಲ್ಲಿ 29.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ಹಾಗೂ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 30.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ ದಾಖಲಾಗಿದೆ.

**ಅತ್ಯಧಿಕ ಮಳೆ ಎಚ್ಚರಿಕೆ :** ದೇಶದ ಹಲವೆಡೆ ಸೆಪ್ಟಂಬರ್ ತಿಂಗಳಲ್ಲೂ ಸಾಮಾನ್ಯಕ್ಕಿಂತ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಇತ್ತೀಚೆಗೆ ಮುನ್ಸೂಚನೆ ನೀಡಿದೆ. ಸಾಮಾನ್ಯವಾಗಿ, ಪ್ರತಿ ವರ್ಷ ಸೆಪ್ಟಂಬರ್‌ನಲ್ಲಿ 167.9 ಮಿ.ಮೀ ಮಳೆಯಾಗುತ್ತದೆ. ಈ ಬಾರಿ, ಸಾಮಾನ್ಯಕ್ಕಿಂತ ಶೇ.109ರಷ್ಟು ಹೆಚ್ಚಿನ ಮಳೆಯಾಗುವ ಸೂಚನೆಗಳಿವೆ ಎಂದು ತಿಳಿಸಿತ್ತು. ಈಶಾನ್ಯ ಭಾರತ, ಪೂರ್ವ ಭಾರತ, ದಕ್ಷಿಣ ಭಾರತ ಮತ್ತು ವಾಯುವ್ಯ ಭಾರತದ ಅನೇಕ ಭಾಗಗಳಲ್ಲಿ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗುವ ಸಾಧ್ಯತೆ ಇದೆ. ದೇಶದ ಉಳಿದ ಭಾಗಗಳಲ್ಲಿ ಸಾಧಾರಣಕ್ಕಿಂತ ಕಡಿಮೆ ಮಳೆಯಾಗುವ ಸಾಧ್ಯತೆಗಳಿವೆ.

### ಅರ್ಹರು ಸೌಲಭ್ಯ ವಂಚಿತರಾಗಬಾರದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಲಹೆ

## ಅನರ್ಹ ಬಿಪಿಎಲ್ ಫಲಾನುಭವಿಗಳನ್ನು ಕೈಬಿಡಲು ವಿರೋಧ ಇಲ್ಲ

**ಹುಬ್ಬಳ್ಳಿ:** ತಂತ್ರಜ್ಞಾನ ಆಧರಿಸಿ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆ ನಡೆಸಿ, ಅನರ್ಹರನ್ನು ಕೈಬಿಡಲು ಯಾವುದೇ ವಿರೋಧ ಇಲ್ಲ. ಆದರೆ ಅರ್ಹರು ಸೌಲಭ್ಯ ವಂಚಿತರಾಗಬಾರದು ಎಂಬ ಎಚ್ಚರಿಕೆ ವಹಿಸಬೇಕೆಂದು ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಹ್ಲಾದ್ ಜೋಶಿ ಸಲಹೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಅನೇಕ ಕಡೆ ಅನರ್ಹರು ಬಿಪಿಎಲ್ ಪಟ್ಟಿಯಲ್ಲಿರುವುದು ಸತ್ಯ. ಅವರನ್ನು ಸರಿಯಾಗಿ ಪರಿಶೀಲನೆ ಮಾಡಿ ತೆಗೆದು ಹಾಕುವುದಕ್ಕೆ ನಮ ವಿರೋಧ ಇಲ್ಲ. ತಂತ್ರಜ್ಞಾನವನ್ನು ಬಳಕೆ ಮಾಡಿ ಪರಿಷ್ಕರಣೆ ಮಾಡಬೇಕು ಎಂದು ಹೇಳಿದರು.

ರಾಜ್ಯ ಸರ್ಕಾರ ಈ ಮೊದಲು ಕಾರ್ಡ್‌ಗಳ ಪರಿಷ್ಕರಣೆ ಜವಾಬ್ದಾರಿಯನ್ನು ಆಹಾರ ನಿರೀಕ್ಷಕರು (ಫುಡ್ ಇನ್‌ಸಪೆಕ್ಟರ್) ಗಳಿಗೆ ವಹಿಸಿತ್ತು. ಅವರು ಜನರಿಗೆ ತೊಂದರೆ ನೀಡಿದ್ದರು.

ಕೆಲವು ಫುಡ್ ಇನ್‌ಸಪೆಕ್ಟರ್‌ಗಳು ಒಂದೇ ಕಡೆ 20 ರಿಂದ 30 ವರ್ಷ ಉಳಿದುಕೊಂಡಿದ್ದರು ಎಂದು ಹೇಳಿದರು. ದೇಶದ 15ಕ್ಕೂ ಹೆಚ್ಚು ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಇತ್ತೀಚೆಗೂ ತಮನ್ನು ಭೇಟಿ ಮಾಡಿದ್ದರು. ತಂತ್ರಜ್ಞಾನವನ್ನು ಬಳಕೆ ಮಾಡಿಕೊಂಡು ಕಾರ್ಡ್‌ಗಳ ಪರಿಷ್ಕರಣೆ ಮಾಡಿ, ಕೆಳ ಹಂತದ ಅಧಿಕಾರಿಗಳಿಗೆ ವಿವೇಚನಾಧಿಕಾರ ಬಳಸಲು ಅವಕಾಶ ನೀಡಬೇಡಿ ಎಂದು ಸಲಹೆ ನೀಡಿದ್ದೇನೆ ಎಂದರು.

ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆಯನ್ನು ನಾನು ಸಾರಸಗಟಾಗಿ ವಿರೋಧಿಸುವುದಿಲ್ಲ. ಅರ್ಹ ಫಲಾನುಭವಿಗಳನ್ನು ಕೈಬಿಡಲಾಗಿದೆ ಎಂಬ ಕರ್ನಾಟಕ ಬಿಜೆಪಿಯ ಆರೋಪವನ್ನು ಕೂಡ ಪರಿಗಣಿಸಬೇಕಿದೆ ಎಂದರು.



ಕೇಂದ್ರ ಸರ್ಕಾರ ಯಾವುದೇ ಮಾನ ದಂಡಗಳನ್ನು ನಿಗದಿ ಮಾಡುವುದಿಲ್ಲ. ಅರ್ಹತೆ ಆಧಾರದ ಮೇಲೆ 2011ರ ಜನಗಣತಿ ಹಾಗೂ ಆಹಾರ ಭದ್ರತೆ ಕಾಯ್ದೆ ಅನುಸಾರ ನಗರ ಪ್ರದೇಶಗಳಲ್ಲಿ ಶೇ.50 ರಷ್ಟು ಹಾಗೂ ಗ್ರಾಮೀಣ ಭಾಗದಲ್ಲಿ ಶೇ.75 ರಷ್ಟು ಜನಸಂಖ್ಯೆ, ಸರ್ಕಾರದ ರಿಯಾಯಿತಿ ಹಾಗೂ ಉಚಿತ ಪಡಿತರ ಪಡೆಯಲು ಅರ್ಹವಾಗಿದೆ. ಪ್ರಧಾನಮಂತ್ರಿ ನರೇಂದ್ರಮೋದಿ ಅಧಿಕಾರ ವಹಿಸಿಕೊಂಡ ಬಳಿಕ ಬಡವರಿಗೆ ಉಚಿತ ಪಡಿತರ ಪೂರೈಸುವುದನ್ನು ಆದ್ಯತೆಯನ್ನಾಗಿ ಪರಿಗಣಿಸಿದ್ದಾರೆ ಎಂದರು. ಯಾರಿಗೆ ಉಚಿತ ಆಹಾರ ಧಾನ್ಯ ನೀಡಬೇಕೆಂದು ರಾಜ್ಯ ಸರ್ಕಾರ ನಿರ್ಧರಿಸಬೇಕಿದೆ?. 7 ಎಕರೆಗಿಂತಲೂ ಹೆಚ್ಚಿನ ಭೂಮಿ ಹೊಂದಿರುವವರಿಗೆ ಬಿಪಿಎಲ್ ಸೌಲಭ್ಯ ನೀಡಬೇಕೇ? ಬೇಡವೇ? 8 ಎಕರೆ 9 ಎಕರೆ ಇರುವವರಿಗೂ ಉಚಿತ ಪಡಿತರ ನೀಡಬಹುದೇ? ವಾಹನಗಳನ್ನು ಹೊಂದಿದ್ದಾರೆಯೇ, ಇಲ್ಲವೇ ಎಂಬುದನ್ನು ಪರಿಶೀಲಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿ. ಬೆಂಜ ಕಾರು ಇರುವವರಿಗೂ ಬಿಪಿಎಲ್ ನೀಡುತ್ತೇವೆ ಎಂದರೆ ನಮ ವಿರೋಧ ಇಲ್ಲ. ಈ ಎಲ್ಲಾ ಅಂಶಗಳನ್ನು ತಮನ್ನು ಭೇಟಿ ಮಾಡಿದ ಮುಖ್ಯಮಂತ್ರಿಗಳಿಗೆ ವಿವರಿಸಿದ್ದೇನೆ ಎಂದು ತಿಳಿಸಿದರು.

ಈ ವಿಷಯದಲ್ಲಿ ರಾಜಕೀಯ ಮಾಡಲು ನಾನು ಬಯಸುವುದಿಲ್ಲ. ಕೆಲವು ಮುಖ್ಯಮಂತ್ರಿಗಳು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದ್ದಾರೆ. ಜನರಿಗೆ ಒಳ್ಳೆಯದಾಗುವ ನಿಟ್ಟಿನಲ್ಲಿ ಕ್ರಮಕೈಗೊಳ್ಳುವಂತೆ ಕೇಂದ್ರ ಸರ್ಕಾರದ ಆಹಾರ ಇಲಾಖೆ ಕಾರ್ಯದರ್ಶಿಗಳು ರಾಜ್ಯ ಸರ್ಕಾರಗಳ ಮುಖ್ಯ ಕಾರ್ಯದರ್ಶಿಗಳು ಹಾಗೂ ಆಹಾರ ಇಲಾಖೆ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದಾರೆ ಎಂದು ಹೇಳಿದರು. ಐಟಿ ರಿಟರ್ನ್ ಫೈಲ್ ಮಾಡಿದವರನ್ನು ಬಿಪಿಎಲ್‌ನಿಂದ ಕೈಬಿಡಬೇಕೆಂದು ಕೇಂದ್ರ ಸರ್ಕಾರ ಹೇಳಿಲ್ಲ. ಆದಾಯ ತೆರಿಗೆ ಪಾವತಿದಾರರನ್ನು ಬಿಪಿಎಲ್‌ನಿಂದ ಕೈಬಿಡಬೇಕು ಎಂಬ ಮಾನದಂಡವನ್ನು ರಾಜ್ಯಸರ್ಕಾರ ರೂಪಿಸಿಕೊಂಡಿದೆ.

ವರ್ಷಕ್ಕೆ 12 ಲಕ್ಷ ಆದಾಯ ಹೊಂದಿರುವವರು ಈ ವರ್ಷದಿಂದ ಆದಾಯ ತೆರಿಗೆ ಪಾವತಿಸುತ್ತಾರೆ. ಈ ಹಿಂದೆ 6 ಲಕ್ಷ ಆದಾಯ ಮಿತಿ ಇತ್ತು. ಆದಾಯ ತೆರಿಗೆ ಪಾವತಿಯ ಮಿತಿಯನ್ನು ನಿರ್ಧರಿಸುವುದು ಮತ್ತು ಪರಿಶೀಲಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿ ಎಂದರು. ಪ್ರತಿ 5 ವರ್ಷಕ್ಕೊಮೆ ಪರಿಶೀಲನೆ ನಡೆಸುವುದು ಕಾನೂನಿನಲ್ಲಿ ಕಡ್ಡಾಯವಾಗಿದೆ. ಮೃತರ ಹೆಸರಿನಲ್ಲೂ ಕಾರ್ಡ್‌ಗಳು ಮುಂದುವರೆದಿದ್ದು, ಸೌಲಭ್ಯಗಳು ದುರುಪಯೋಗವಾಗುತ್ತಿವೆ ಎಂದು ಹೇಳಿದರು.

ವಿಶ್ವ ಬ್ಯಾಂಕ್ ಅಂತಾರಾಷ್ಟ್ರೀಯ ಹಣಕಾಸು ಸಂಸ್ಥೆಗಳ ವರದಿಗಳ ಪ್ರಕಾರ 25 ಕೋಟಿ ಜನ ಕಡುಬಡತನ ರೇಖೆಯಿಂದ ಹೊರಬಂದಿದ್ದಾರೆ ಎಂಬ ಮಾತಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪರಿಶೀಲನೆ ಮಾಡಬೇಕಿದೆ. ಇದಕ್ಕೆ ತಮ ವಿರೋಧ ಇಲ್ಲ ಎಂದು ಜೋಶಿ ಹೇಳಿದರು.

# ಜಿಲ್ಲೆಯ ಐತಿಹಾಸಿಕ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಒತ್ತು ನೀಡಿ

**ಕೊಪ್ಪಳ:** ಕೊಪ್ಪಳ ಜಿಲ್ಲೆಯು ಐತಿಹಾಸಿಕ ಪ್ರವಾಸಿ ತಾಣಗಳನ್ನು ಹೊಂದಿದ್ದು, ಜಿಲ್ಲೆಯ ಐತಿಹಾಸಿಕ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹೆಚ್ಚಿನ ಒತ್ತು ನೀಡುವಂತೆ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಆಂಜನಾದ್ರಿ ಬೆಟ್ಟದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಸಮಗ್ರ ಅಭಿವೃದ್ಧಿ, ಶ್ರೀ ಹುಲಿಗೆಮ್ಮ ದೇವ ದೇವಸ್ಥಾನದ ಸಮಗ್ರ ಅಭಿವೃದ್ಧಿ ಹಾಗೂ ಕೊಪ್ಪಳ ಜಿಲ್ಲೆಯ ಇತರೆ ಐತಿಹಾಸಿಕ ಪ್ರವಾಸಿ ತಾಣಗಳ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಅಂಜನಾದ್ರಿ ಬೆಟ್ಟವು ಆಂಜನೇಯನ ಜನ್ಮಸ್ಥಳವೆಂದು ಪ್ರಸಿದ್ಧವಾಗಿದ್ದು, ಈ ಬೆಟ್ಟ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿ ದೇಶದಾದ್ಯಂತ ಪ್ರಸಿದ್ಧವಾಗಿದೆ. ಪ್ರವಾಸಿಗರಿಗೆ ಮೂಲಭೂತ ಸೌಕರ್ಯ ಒಳಗೊಂಡಂತೆ ಅಂಜನಾದ್ರಿ ಬೆಟ್ಟದ ಸಮಗ್ರ ಅಭಿವೃದ್ಧಿ ಯೋಜನೆಗೆ ರಾಜ್ಯ ಸರ್ಕಾರವು ಈಗಾಗಲೇ ಅನುದಾನ ಒದಗಿಸಿದ್ದು, ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ತಿರುಪತಿ



ಮಾದರಿಯಲ್ಲಿ ಅಂಜನಾದ್ರಿ ಬೆಟ್ಟವನ್ನು ಅಭಿವೃದ್ಧಿ ಪಡಿಸಲು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು. ಲಭ್ಯವಿರುವ ಭೂಮಿಯಲ್ಲಿ ಟ್ರಿ ಪಾರ್ಕ್, ಶೌಚಗೃಹಗಳು, ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಬೇಕು ಹಾಗೂ ಪ್ರದಕ್ಷಣಾ ಪಥವನ್ನು ಅಚ್ಚುಕಟ್ಟಾಗಿ ಮಾಡಬೇಕು.

ಬೆಟ್ಟಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಗಳ ಅಭಿವೃದ್ಧಿಗೆ ಮತ್ತು ರಸ್ತೆಯುದ್ಧಕ್ಕೂ ವಿದ್ಯುತ್ ದೀಪಗಳ ವ್ಯವಸ್ಥೆಯನ್ನು ಒದಗಿಸಬೇಕು. ಪ್ರತಿ ವರ್ಷ ನಡೆಯುವ ಹನುಮಮಾಲಾ ಕಾರ್ಯಕ್ರಮದ ಸಂದರ್ಭದಲ್ಲಿ ಮಾಲಾಧಾರಿಗಳಿಗೆ ಪ್ರಸಾದಕ್ಕಾಗಿ ತಾತ್ಕಾಲಿಕ ವ್ಯವಸ್ಥೆ ಮಾಡಲಾಗುತ್ತಿದೆ. ಹಾಗಾಗಿ ಅಂಜನಾದ್ರಿಯಲ್ಲಿ ಭೋಜನಾಲಯ ನಿರ್ಮಿಸುವುದು ಅತ್ಯವಶ್ಯಕವಾಗಿದೆ. ಭೋಜನಾಲಯ ನಿರ್ಮಾಣದ ಕುರಿತು ಪ್ರಸ್ತಾವನೆ ತಯಾರಿಸಿ ಸಂಬಂಧಪಟ್ಟ ಇಲಾಖೆಗೆ ಸಲ್ಲಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಕೊಪ್ಪಳ ಜಿಲ್ಲೆಯು ಐತಿಹಾಸಿಕ, ಧಾರ್ಮಿಕ ಕ್ಷೇತ್ರ, ವನ್ಯ ಜೀವಿಗಳು, ಪ್ರಾಣಿಪಕ್ಷಿಗಳು, ಪ್ರವಾಸಿ ತಾಣಗಳು, ಸ್ಮಾರಕಗಳು, ದೇವಸ್ಥಾನಗಳು, ಜೀವವೈವಿದ್ಯ ಅಭಯಾರಣ್ಯ, ವಾಟರ್ ಫಾಲ್ಸ್ ಉದ್ಯಾನವನ ಮುಂತಾದ ಪ್ರವಾಸಿ ತಾಣಗಳಿಂದ ಕೂಡಿದ್ದು, ಪ್ರವಾಸೋದ್ಯಮದಲ್ಲಿ ಹಲವಾರು ಅವಕಾಶಗಳನ್ನು ಹೊಂದಿದೆ. ಆಂಜನಾದ್ರಿ ಬೆಟ್ಟದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಸಮಗ್ರ ಅಭಿವೃದ್ಧಿ, ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಸಮಗ್ರ ಅಭಿವೃದ್ಧಿ ಹಾಗೂ ಕೊಪ್ಪಳ ಜಿಲ್ಲೆಯ ಇತರೆ ಐತಿಹಾಸಿಕ ಪ್ರವಾಸಿ ತಾಣಗಳ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನಕ್ಕೆ ಹೆಚ್ಚಿನ ಆದ್ಯತೆ ನೀಡಿ. ಇದರ ಜೊತೆಗೆ ಜಿಲ್ಲೆಯ ಐತಿಹಾಸಿಕ ಸ್ಮಾರಕಗಳ ಗುರುತಿಸಬೇಕು ಹಾಗೂ ಅವುಗಳ ರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗಂಗಾವತಿ ಶಾಸಕರಾದ ಜಿ.ಜನಾರ್ದನ ರೆಡ್ಡಿ ಅವರು ಮಾತನಾಡಿ, ಅಂಜನಾದ್ರಿ ಬೆಟ್ಟದ ಅಭಿವೃದ್ಧಿಗೆ ಅಗತ್ಯವಿರುವ ಭೂಮಿಗಾಗಿ ಪ್ರಸ್ತಾವನೆ ಸಿದ್ಧಪಡಿಸಿ ಕೇಂದ್ರ ಅರಣ್ಯ ಇಲಾಖೆಗೆ ಸಲ್ಲಿಸಬೇಕು. ಈ ಬಗ್ಗೆ ಸಂಸದರೊಂದಿಗೆ ಸೇರಿ ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿ, ಜಮೀನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಹನುಮಮಾಲ ಪಾದಯಾತ್ರಿಗಳಿಗೆ ಅನುಕೂಲವಾಗುವಂತೆ ಸಂಗಾಪುರದಿಂದ ರಾಂಪುರದವರೆಗೆ ಇರುವ 12 ಕಿ.ಮೀ ರಸ್ತೆಯನ್ನು ಐದು ಮೀಟರ್ ಅಗಲೀಕರಣ ಮಾಡಬೇಕು. ರಾಂಪುರದಿಂದ ಲಕ್ಷ್ಮೀಪುರ ವರೆಗಿನ 1.5 ಕಿ.ಮೀ ರಸ್ತೆಯನ್ನು ಶಾಸಕರ ಅನುದಾನದಲ್ಲಿ ಮಾಡುತ್ತೇನೆ. ಕೆ.ಕೆ.ಆರ್.ಡಿ.ಬಿ ಅನುದಾನವನ್ನು ರಸ್ತೆಗಳ ಅಭಿವೃದ್ಧಿಗಾಗಿ ನೀಡಬೇಕು ಎಂದರು.

ಸಭೆಯಲ್ಲಿ ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಶ್ರೀನಿವಾಸ್ ಗುಪ್ತಾ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ್, ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ನೂತನ ಕೃಷಿ ಮಾರುಕಟ್ಟೆ ಉದ್ಘಾಟನೆ



**ರಾಯಬಾಗ.** ತಾಲೂಕಿನ ಮುಧೋಳ –ನಿಪ್ಪಾಣಿ ಮುಖ್ಯರಸ್ತೆ ಬೆಂಡವಾಡದಲ್ಲಿ ಜರುಗಿದ ಓಂ ಮಾಧವಾ ಮಲ್ಟಿಪರ್ಪಸ ಫಾರ್ಮರ ಪ್ರೊಡ್ಯೂಸರ್ ಕಂಪನಿ ಲಿಮಿಟೆಡ್ ಬೆಂಡವಾಡ ಅಧ್ಯಕ್ಷ ಮಹಾದೇವ ರೇವಪ್ಪ ಶಿವಾನಗೊಳರವರ ಅಧ್ಯಕ್ಷತೆಯಲ್ಲಿ ಬುಧವಾರ ನೂತನ ಕೃಷಿ ಮಾರುಕಟ್ಟೆ ಉದ್ಘಾಟನಾ ಸಮಾರಂಭ ಕಾರ್ಯಕ್ರಮ ಜರುಗಿತು. ಶ್ರೀ ಮ.ನಿ.ಪ್ರ ಗುರುಸಿದ್ದ ಮಹಾಸ್ವಾಮಿಗಳು ಶ್ರೀ ರೇವಣಸಿದ್ದೇಶ್ವರ್ ವೀರಕ್ತ ಮಠ ಬೆಂಡವಾಡ ಇವರ ಸಾನಿಧ್ಯ ವಹಿಸಿದ್ದರು.

ಉದ್ಘಾಟಕರಾಗಿ ಜೆಡಿಎಸ್ ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷ ಪ್ರತಾಪರಾವ ಪಾಟೀಲ ಮಾತನಾಡಿ, ಈ ಭಾಗದ ರೈತರು ತಮ್ಮ ಹೊಲದಲ್ಲಿ ಬೆಳೆದ ತರಕಾರಿಯನ್ನು ಹತ್ತಿರದಲ್ಲೇ ಮಾರಾಟ ಮಾಡಲು ತುಂಬಾ ಅನುಕೂಲವಾಗಲಿದೆ.ಮತ್ತು ರೈತರು ಇದರ ಉಪಯೋಗ ತೆಗೆದುಕೊಳ್ಳಬೇಕು ಎಂದರು. ರೈತರಿಗೆ ಹಾಗೂ ವ್ಯಾಪಾರಸ್ತರಿಗೆ ಅನುಕೂಲವಾಗುವಂತೆ ಎಲ್ಲ ವ್ಯವಸ್ಥೆಯನ್ನು ಮಾಡಿ ಕೊಡಬೇಕೆಂದು ಮಾರುಕಟ್ಟೆಯ ಸಂಸ್ಥೆಯವರಿಗೆ ಹೇಳಿದರು.

ಮುಖ್ಯ ಅತಿಥಿಗಳಾಗಿ ಶಿವರಾಜ ಅಣ್ಣಾ ಪಾಟೀಲ, ಅಂಬುಪ್ರಸಾದ ನರೋಟೆ, ಪ ಪೂ ಧರಿದೇವ ಅಜ್ಜನವರು ಸದಲಗಾ ಅಥಿತಿಗಳಾಗಿ, ಪ್ರಕಾಶ ಹುಕ್ಕೇರಿ ಅಧ್ಯಕ್ಷರು ಪ ಪಂ ಕಂಕಣವಾಡಿ,ಬಾಬುರಾವ ಪಾಟೀಲ, ಮುತ್ತಪ್ಪ ನಾಯಿಕ, ಗಣಪತಿ ಕಪ್ಪಲಗುದ್ದಿ, ಸಾತಪ್ಪ ಮುಗಳಿ, ಮಹಾದೇವ ವಡಗಾವೆ, ಮುತ್ತಪ್ಪ ಕುರಣೆ, ಶಿವಪುತ್ರ ಲಟ್ಟೆ, ಹಾಲಪ್ಪ ನಿಲಜಗಿ, ವಸಂತ ಕಾಂಬಳೆ, ಹಾಗೂ ಊರಿನ ಗಣ್ಯರು, ರೈತರು ವ್ಯಾಪಾರಸ್ಥರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಸರಕಾರಿ ಸೌಲಭ್ಯ ಪಡೆಯಿರಿ

**ಮೂಡಲಗಿ:** ವಿದ್ಯಾರ್ಥಿಗಳು ತಮ್ಮ ವೈಯಕ್ತಿಕ ದಾಖಲೆಗಳಾದ ಆಧಾರ ಕಾರ್ಡ್, ಬ್ಯಾಂಕ್ ಪಾಸ್ ಬುಕ್ಕ ಹಾಗೂ ಜಾತಿ ಆದಾಯ ಪ್ರಮಾಣ ಪತ್ರ ತಮ್ಮ ಮೂಲ ಶಾಲಾ ದಾಖಲೆಗಳಲ್ಲಿ ತಮ್ಮ ಹೆಸರು, ತಂದೆ, ತಾಯಿಯ ಹೆಸರು, ಜನ್ಮ ದಿನಾಂಕ ಹಾಗೂ ಶಾಲಾ ಮಾಹಿತಿಗಳನ್ನು ಸರಿಯಾಗಿ ನಮೂದಾಗಿರುವ ಮಾಹಿತಿಗಳನ್ನು ಹೊಂದಿ ಶೈಕ್ಷಣಿಕವಾಗಿ ಸರಕಾರ ವಿವಿಧ ಇಲಾಖೆಗಳಿಂದ ವಿದ್ಯಾರ್ಥಿಗಳಿಗೆ ನೀಡುವ ಸಹಾಯ ಸೌಲಭ್ಯಗಳನ್ನು ಪಡೆಯಬೇಕು ಎಂದು ಹಿಂದುಳಿದ ವರ್ಗಗಳ ವಸತಿ ನಿಲಯದ ಮೇಲ್ವಿಚಾರಕ ಎಸ್.ಎಸ್. ಸೋರಗಾಂವಿ ಹೇಳಿದರು.

ಪಟ್ಟಣದ ಆರ್.ಡಿ.ಎಸ್. ಕಲಾ, ವಾಣಿಜ್ಯ & ವಿಜ್ಞಾನ ಪದವಿ ಮಹಾವಿದ್ಯಾಲಯದ ಆಯ್‌ಕ್ಯೂಎಸಿ & ಎನ್‌ಎಸ್‌ಎಸ್ ಘಟಕಗಳ ಸಹಯೋಗದಲ್ಲಿ ಬುಧವಾರ ಆಯೋಜಿಸಿದ ಎಸ್.ಸಿ./ಎಸ್.ಟಿ. ವಿದ್ಯಾರ್ಥಿಗಳಿಗೆ ಸರಕಾರದ ಶೈಕ್ಷಣಿಕ ಯೋಜನೆಗಳ ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು. ಅತಿಥಿ ಮೂಡಲಗಿಯ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯದ ಮೇಲ್ವಿಚಾರಕ ಯಲ್ಲಪ್ಪ ಭಜಂತ್ರಿ ಮಾತನಾಡಿದರು, ಎಸ್.ಸಿ/ಎಸ್‌ಟಿ. ಘಟಕಾಧಿಕಾರಿ ಎಸ್.ಎಲ್. ವೆಂಕಟಾಪೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜು ಪ್ರಾಚಾರ್ಯ ಎಸ್.ಬಿ.ಗೋಟೂರೆ ಅಧ್ಯಕ್ಷತೆ ವಹಿಸಿಕೊಂಡು ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕ ಶಿವಾನಂದ ಸತ್ತಿಗೇರಿ, ರಾಜು ಪತ್ತಾರ, ಮಲ್ಲಪ್ಪ ಪಾಟೀಲ, ಸಂಜೀವ ಮಂಟೂರ, ಮುತ್ತಣ್ಣಾ ಒಡೆಯರ, ಸುನೀಲ ಸತ್ತಿ, ಅಶ್ವೀನಿ ಗುರುವ, ನಂದಾ ತಳವಾರ, ಅಕ್ಷತಾ ಹೊಸಮನಿ, ಕವಿತಾ ಮಳಲಿ ಮತ್ತಿತರರು ಹಾಜರಿದ್ದರು. ವಿದ್ಯಾರ್ಥಿನಿ ಲಕ್ಷ್ಮೀ ಗೊರಗುದ್ದಿ ನಿರೂಪಿಸಿದರು ಸೌಭಾಗ್ಯಾ ಸಾಯನ್ನವರ ಸ್ವಾಗತಿಸಿದರು ಪ್ರೀತಿ ಬಂಗೆನ್ನವರ ವಂದಿಸಿದರು.





# ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ

**ಹುಕ್ಕೇರಿ:** ವಿಶ್ವಕರ್ಮರು ವಾಸ್ತುಶಿಲ್ಪ, ಕಂಚುಶಿಲ್ಪ, ಮರಗೆಲಸ, ಚಿನ್ನ ಬೆಳ್ಳಿಯಲ್ಲಿ ಅಲಂಕಾರಿಕ ವಸ್ತುಗಳು ಹಾಗೂ ಒಡವೆಗಳನ್ನು ತಯಾರಿಸುವ ಮೂಲಕ ನಮ್ಮ ಸಂಸ್ಕೃತಿಯನ್ನು ಬೆಳೆಸುವ ಪರಂಪರೆ ಹೊಂದಿದ್ದಾರೆ ಎಂದು ತಹಸಿಲ್ದಾರ್ ಬಲರಾಮ್ ಕಟ್ಟಿಮನಿ ಹೇಳಿದ್ದಾರೆ.

ತಹಶೀಲ್ದಾರ್ ಕಚೇರಿಯಲ್ಲಿ ಹಮ್ಮಿಕೊಂಡ ವಿಶ್ವಕರ್ಮ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಚಿತ್ರಕಲಾ ಶಿಕ್ಷಕರಾದ ಕೆ.ಎ ಬಡಿಗೇರ್ ಮಾತನಾಡಿ ವಿಶ್ವಕರ್ಮರೆಂದರೆ ಪಂಚಾಳ, ಐದು ಗೋತ್ರ ಹಾಗೂ ಐದು ಕುಲ ಕಸಬುಗಳ ಉಳ್ಳ ಶ್ರಮಿಕರ ವರ್ಗವೆಂದರು. ಕಾರ್ಯಕ್ರಮದಲ್ಲಿ ತಾಲೂಕ ಅಧ್ಯಕ್ಷರಾದ ಗಜಾನನ್ ಬಡಿಗೇರ್,ಕೆ. ಬಿ ಬಡಿಗೇರ್, ಮಹಾದೇವ ಬಡಿಗೇರ್, ರಾಜು ಬಡಿಗೇರ್, ಸಂತೋಷ ಬಡಿಗೇರ್, ಗಣಪತಿ ಬಡಿಗೇರ್, ಕೃಷ್ಣ ಕಂಬಾರ್, ಅಜಿತ್ ಬಡಿಗೇರ್, ಬಾಬು ಬಡಿಗೇರ್, ಪ್ರಮೋದ್ ಪತ್ತಾರ್, ಮುರಳಿ ಬಡಿಗೇರ್, ಬಸವರಾಜ ಕಮ್ಮಾರ್, ಶಂಕರ್ ಪತ್ತಾರ್, ಸಂಜು ಬಡಿಗೇರ್ ಮತ್ತಿತ್ತರು ಪಾಲ್ಗೊಂಡಿದ್ದರು.

# ಸಹಕಾರಿ ಕ್ಷೇತ್ರಕ್ಕೆ ಹಿರಿಯರ ಕೊಡುಗೆ ಅಪಾರ

**ಹುಕ್ಕೇರಿ:** ಸಹಕಾರಿ ಸಂಸ್ಥೆಗಳನ್ನು ಉಳಿಸಿ ಬೆಳೆಸುವಲ್ಲಿ ಹುಕ್ಕೇರಿ ತಾಲೂಕಿನ ಹಿರಿಯ ಮಹನೀಯರ ಕೊಡುಗೆ ಅಪಾರ. ಅವರ ಮಾರ್ಗದರ್ಶನದಲ್ಲಿ ನಡೆದು ಅವುಗಳನ್ನು ಉಳಿಸಿ ಕೊಂಡುಹೋಗುವದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಶಾಸಕ ನಿಖಿಲ್ ಕತ್ತಿ ಹೇಳಿದರು.

ಅವರು ಬುಧವಾರ ಪಟ್ಟಣದ ಅಡವಿಸಿದ್ದೇಶ್ವರ ಮಠದಲ್ಲಿ ಹಮ್ಮಿಕೊಂಡು ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಚುಣಾವಣೆಯ ಪ್ರಚಾರ ಸಭೆಯಲ್ಲಿ ಮಾತನಾಡಿದರು. ಉತ್ತಮವಾಗಿ ನಡೆದು ಕ್ಷೇತ್ರದ ಕುಂಟುಂಭಗಳಿಗೆ ಆಧಾರವಾಗಿರುವ ಸಂಘದ ಬಗ್ಗೆ ಸರಿಯಾಗಿ ತಿಳಿದುಕೊಳ್ಳದೆ ಕೇವಲ ಅಪಪ್ರಚಾರ ಮಾಡುತ್ತಿರುವ ವಿರೋಧಿಗಳಿಗೆ ಮತದಾರರು ಉತ್ತರ ನೀಡಲಿದ್ದಾರೆ ಎಂದರು.

ಮುಖಂಡ ವಿನಯ ಪಾಟೀಲ ಮಾತನಾಡಿ ತಾಲೂಕಿನಲ್ಲಿ ದಿ ಅಪ್ಪಣಗೌಡ ಪಾಟೀಲರ ಸ್ಥಾಪಿಸಿದ ಸಹಕಾರಿ ಸಂಸ್ಥೆಗಳನ್ನು ಕತ್ತಿ ಹಾಗೂ ಪಾಟೀಲ, ಕುಟುಂಭದವರು ನೇತ್ರತ್ವದಲ್ಲಿ ಸುಸ್ಥಿತಿಯಲ್ಲಿದ್ದು ಯಾರಿಗೂ ಅನ್ಯಾವಾಗದಂತೆ ಅದೆ ತೆರನಾಗಿ ಕ್ಷೇತದ ಜನತೆಯೂ ಕೂಡ ನಮ್ಮ ಮೇಲೆ ವಿಶ್ವಾಸವಿಟ್ಟು ಅದಕ್ಕೆ ಚ್ಯುತಿ ಬರದಂತೆ ಇಲ್ಲಿಯವರಿಗೂ



ಪಟ್ಟಣದಲ್ಲಿ ಹಮ್ಮಿಕೊಂಡ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಚುಣಾವಣೆಯ ಪ್ರಚಾರ ಸಭೆಯಲ್ಲಿ ಶಾಸಕ ನಿಖಿಲ್ ಕತ್ತಿ ಮುಖಂಡ ವಿನಯ ಪಾಟೀಲ, ಮಹಾವೀರ ನಿಲಜಗಿ ಮತ್ತಿತರರು.

ನೋಡಿಕೊಂಡು ಬಂದಿದ್ದೇವೆ ಎಂದರು.

ಉದ್ಯೋಗ ಸಮೂಹ ಸಂಸ್ಥೆಯ ಅಧ್ಯಕ್ಷ ಮಹಾವೀರ ನಿಲಜಗಿ ಅಧ್ಯಕ್ಷತೆ ವಹಿಸಿದ್ದರು.

ಪುರಸಭೆ ಮಾಜಿ ಅಧ್ಯಕರಾದ ಎ.ಕೆ ಪಾಟೀಲ, ಉದಯ ಹುಕ್ಕೇರಿ, ಬಸವರಾಜ ಪಾಟೀಲ, ರೇಖಾ ಚಿಕ್ಕೋಡಿ ರುಕ್ಮೀಣಿ ಹಳಿಜೋಳ, ಶ್ರೀಶೈಲ್ ಸಂಬಾಳ, ಬಸವರಾಜ ನಾಯಿಕ, ಮೈನೂದಿನ ಮೋಮಿನ. ಇಲಿಯಾಸ ಅತ್ತಾರ, ವಿರುಪಾಕ್ಷಿ ಅಲಗರಾವುತ, ಸುಹಾಸ ನೂಲಿ, ಅಪ್ಪುಷ್ ತುಬಚಿ, ಪ್ರಕಾಶ ಮುತಾಲಿಕ, ಅಶೋಕ ಕುಂಬಾರ, ರವಿ ಜುಟಾಳೆ, ಅಶೋಕ ಡುಮ್ಮಣ್ಣವರ. ಶೀತಲ ಮಠಪತಿ. ಮತ್ತಿತರರು ಉಪಸ್ಥಿತರಿದ್ದರು.

ಪಟ್ಟಣದ ಐದು ಪ್ರಮುಖ ಸ್ಥಳಗಳಲ್ಲಿ ಪ್ರಚಾರ ಸಭೆ ನಡೆಸಿದರು. ಸುರೇಶ ಜಿನರಾಳಿ ಸ್ವಾಗತಿಸಿದರು. ಸುನೀಲ ಬೈರಣ್ಣವರ ಕಾರ್ಯಕ್ರಮ ನಿರೂಪಿಸಿದರು.

# ಸ್ವಚ್ಛತಾ ಹೀ ಸೇವಾ ಅಭಿಯಾನಕ್ಕೆ ಚಾಲನೆ

**ಕಾರವಾರ:** ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಆಶಯದಂತೆ ಸ್ವಚ್ಛ, ಸುಂದರ ಹಾಗೂ ಆರೋಗ್ಯ ಪೂರ್ಣ ಭಾರತವನ್ನು ನಿರ್ಮಿಸಲು ನಾವೆಲ್ಲರೂ ಕೈಜೋಡಿಸೋಣ ಎಂದು ಮುಂಡಗೋಡ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಟಿ.ವಾಯ್. ದಾಸನಕೊಪ್ಪ ಹೇಳಿದರು.

ಅವರು ಬುಧವಾರ ತಾಲೂಕಿನ ಮೈನಳ್ಳಿ ಗ್ರಾಮ ಪಂಚಾಯತಿಯಲ್ಲಿ ಆಯೋಜಿಸಲಾದ "ಸ್ವಚ್ಛತೆಯೇ ಸೇವೆ 2025" ಅಭಿಯಾನದಡಿ ಸ್ವಚ್ಛೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಪ್ರದೇಶಗಳಲ್ಲಿನ ಜನರಲ್ಲಿ ನೈರ್ಮಲ್ಯ ಮತ್ತು ಶುಚಿತ್ವ ಕುರಿತು ಜಾಗೃತಿ ಮೂಡಿಸುವ ಉದ್ದೇಶದೊಂದಿಗೆ ಪ್ರತಿ ವರ್ಷದಂತೆ ಈ ವರ್ಷವೂ ಸೆ.17 ರಿಂದ ಅ.2 ರವರೆಗೆ ಹಮ್ಮಿಕೊಳ್ಳಲಾಗಿದೆ. ಎಲ್ಲರೂ ಸ್ವಯಂ ಪ್ರೇರಣೆಯಿಂದ ಸಾಮೂಹಿಕ ಶ್ರಮದಾನ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಗ್ರಾಮ ಪಂಚಾಯತ್ ಕಾರ್ಯಾಲಯದಿಂದ ಆರಂಭಿಸಿ, ಪಂಚಾಯತ್ ಆದ್ಯಂತ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು. ಸ್ವಚ್ಛ, ಸುಂದರ ಗ್ರಾಮ ಪಂಚಾಯತ್‌ಯನ್ನಾಗಿ ಪರಿವರ್ತಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದರು.

ತಾಲೂಕು ಪಂಚಾಯತಿಯ ಸಹಾಯಕ ನಿರ್ದೇಶಕ



(ಗ್ರಾಉ ಮತ್ತು ಪಂ.ರಾಜ್) ಹಾಗೂ ಅಭಿಯಾನದ ನೋಡಲ್ ಅಧಿಕಾರಿ ಸೋಮಲಿಂಗಪ್ಪ ಛಬ್ಬಿ ಸ್ವಚ್ಛತಾ ಹೀ ಸೇವಾ – 2025ರ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಬಳಿಕ ಗ್ರಾಮ ಪಂಚಾಯತ್ ಆವರಣದಲ್ಲಿ ಕಸ ಸಂಗ್ರಹಿಸಿ, ಕಸ ವಿಲೇವಾರಿ ವಾಹನಕ್ಕೆ ತುಂಬಿಸುವ ಮೂಲಕ ಆವರಣವನ್ನು ಶುಚಿಗೊಳಿಸಲಾಯಿತು.

ಈ ಸಂದರ್ಭದಲ್ಲಿ ಮೈನಳ್ಳಿ ಗ್ರಾಮ ಪಂಚಾಯತಿಯ ಅಧ್ಯಕ್ಷೆ ಸಗ್ಗುಬಾಯಿ ವಾಗು ಪಟಕಾರೆ, ಅಭಿವೃದ್ಧಿ ಅಧಿಕಾರಿಗಳಾದ ಮಂಜುನಾಥ, ಶಿವಾಜಿ ವಾಸಂಬಿ, ತಾಲೂಕು ಪಂಚಾಯತ್ ವಿಷಯ ನಿರ್ವಾಹಕರು, ಗ್ರಾಮ ಪಂಚಾಯತ್ ಸಿಬ್ಬಂದಿ, ಮಹಿಳಾ ಸ್ವ ಸಹಾಯ ಸಂಘದ ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



# ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನಕ್ಕೆ ಚಾಲನೆ

**ತಾಳಿಕೋಟೆ:** 17 ಸಪ್ಟಂಬರ್ 2025 ರಿಂದ ಅಕ್ಟೋಬರ್ 2ರವರೆಗೆ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಜರುಗಲಿರುವ ಸ್ವಸ್ಥ ನಾರಿ ಸಶಕ್ತ ಪರಿವಾರಕ್ಕೆ ಬುಧವಾರರಂದು ಪುರಸಭಾ ಸದಸ್ಯರಾದ ಅಣ್ಣಾಜಿ ಜಗತಾಪ ಅವರು ಚಾಲನೆ ನೀಡಿದರು.

ಸ್ಥಳೀಯ ಶಿವ ಭವಾನಿ ಮಂದಿರದಲ್ಲಿ ಜರುಗಿದ ಈ ಕಾರ್ಯಕ್ರಮದ ವಿವರಣೆ ನೀಡಿದ ಸಮೂದಾಯ ಆರೋಗ್ಯ ಕೇಂದ್ರದ ಕಿರಿಯ ಮಹಿಳಾ ಸಹಾಯಕಿಯಾದ ಶ್ರೀಮತಿ ಮಹಾದೇವಿ ಟಕ್ಕಳಕಿ ಅವರು ಮಾತನಾಡಿ ಗರ್ಭಿಣಿ ಹಾಗೂ ಬಾಣಂತಿಯರಿಗೆ ಮತ್ತು ಮಕ್ಕಳಿಗೆ ಹೇಮೋ ಗ್ಲೋಬಿನ್, ಬಿಪಿ ಶೂಗರ್, ಕ್ಯಾನ್ಸರ್ ಒಳಗೊಂಡಂತಹ ವಿವಿಧ ರೋಗಗಳನ್ನು ತಡೆಗಟ್ಟುವ ಸಲುವಾಗಿ ಈ ಅಭಿಯಾನವನ್ನು ಕೈಕೊಳ್ಳಲಾಗಿದ್ದು ಈ ಅಭಿಯಾನವು ತಾಳಿಕೋಟೆ ಪಟ್ಟಣದ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ನಡೆಯುತ್ತದೆ ಎಂದರು.

ಈ ಸಮಯದಲ್ಲಿ ನಾರಾಯಣ ಘಾಟಗೆ, ಲಕ್ಷ್ಮೀ ಘಾಟಗೆ, ಆಶಾ ಕಾರ್ಯಕರ್ತೆಯರಾದ ವಿಜಯಲಕ್ಷೀ ಲಾಹೋರಕರ, ಇಂದಿರಾಬಾಯಿ ಕದಂ, ಸೌಂದರ್ಯ ನಾಡಕರ್ಣಿ, ಶಿಶು ಮಂದಿರದ ರಾಜೇಶ್ವರಿ ಸುರಪೂರ, ನಾಗಮ್ಮ ನಾರಿ ಮೊದಲಾದವರು ಪಾಲ್ಗೊಂಡಿದ್ದರು.

# ಬಿಮ್ಸ್ ವೈದ್ಯರ ಶ್ರಮಕ್ಕೆ ಶ್ಲಾಘನೆ


## ಬಾಲಕಿಯ ಬೆನ್ನುಹುರಿ ಗಡ್ಡೆ ಯಶಸ್ವಿ ಶಸ್ತ್ರ ಚಿಕಿತ್ಸೆ

**ಬೆಳಗಾವಿ:** ಇಡೀ ಜಿಲ್ಲೆಯಲ್ಲಿಯೇ ಮೊದಲ ಬಾರಿಗೆ ಬಿಮ್ಸ್ ವೈದ್ಯರ ತಂಡವು ಬಾಲಕಿಯ ಬೆನ್ನುಹುರಿ ಗಡ್ಡೆಯನ್ನು ಶಸ್ತ್ರ ಚಿಕಿತ್ಸೆ ಮೂಲಕ ಯಶಸ್ವಿಯಾಗಿ ಹೊರತೆಗೆದಿರುತ್ತದೆ.

ಸೆಪ್ಟೆಂಬರ್ 13 ನೇ ತಾರೀಕಿನ್ನಂದು ಬಿಮ್ಸ್ ಆಸ್ಪತ್ರೆ ಬೆಳಗಾವಿಯಲ್ಲಿ ಬೆನ್ನುಹುರಿ ಗಡ್ಡೆ ಚಿಕಿತ್ಸೆಗಾಗಿ ದಾಖಲಾಗಿದ್ದ ಬೈಲಹೊಂಗಲ ತಾಲೂಕಿನ ತಿಗಡಿ ಗ್ರಾಮದ ಬಸವರಾಜ ಮಾವಿನಕಟ್ಟಿ ಎಂಬಾತನ ಮಂಗಳಾದ ಲಕ್ಷ್ಮೀ ಮಾವಿನಕಟ್ಟಿಯ ಆರೋಗ್ಯ ತೀರ ಹದಗೆಟ್ಟಿತ್ತು. ಒಂದೆರಡು ದಿನಗಳು ಗಮನಿಸಿ, ರೋಗ ಲಕ್ಷಣಗಳನ್ನು ಅಧ್ಯಯನ ಮಾಡಿದ ಬಿಮ್ಸ್‌ನ ನರರೋಗ ಶಸ್ತ್ರ ಚಿಕಿತ್ಸಾ ತಜ್ಞವೈದ್ಯರಾದ ಡಾ. ಬಸವರಾಜ್ ಬಿರಾದರ್ ಪಾಟೀಲ್ ಸೆಪ್ಟೆಂಬರ್ 15 ರಂದು ಶಸ್ತ್ರ ಚಿಕಿತ್ಸೆಗೆ ಸಮಯ ನಿಗದಿಗೊಳಿಸಿದ್ದರು.

ಅದರಂತೆ ತಜ್ಞ ವೈದ್ಯರಾದ ಡಾ.ಬಸವರಾಜ ಬಿರಾದಾರ ಪಾಟೀಲ್, ಡಾ.ಸಂಜೀವ ರಾಥೋಡ್ ಅವರು ನರ್ಸಿಂಗ್ ಸಿಬ್ಬಂದಿ ಮತ್ತು ಅನಸ್ತೇಷಿಯಾ ಸಿಬ್ಬಂದಿ ಜೊತೆಗೂಡಿ ಲಕ್ಷ್ಮೀಯ ಬೆನ್ನುಹುರಿ ಗಡ್ಡೆಯನ್ನು ಶಸ್ತ್ರ ಚಿಕಿತ್ಸೆಯ ಮೂಲಕ ಹೊರತೆಗೆದು, ಗುಣಮುಖಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಮೊದಲ ಬಾರಿಗೆ ಇಂತಹದ್ದೊಂದು ವಿರಳ



ಪ್ರಕಣವನ್ನು ಸವಾಲಾಗಿ ಕೈಗೆತ್ತಿಕೊಂಡಿದ್ದ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ನರರೋಗ ತಜ್ಞ ವೈದ್ಯರು ಅತ್ಯಾಧುನಿಕ ಪರಿಕರಗಳ ಮೂಲಕ ಸಮರ್ಪಕ ಪೂರ್ವಸಿದ್ಧತೆಯೊಂದಿಗೆ 16 ವರ್ಷದ ಬಾಲಕಿಯ ಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

ನರರೋಗ ಶಸ್ತ್ರ ಚಿಕಿತ್ಸಾ ತಜ್ಞವೈದ್ಯರ ಸಮಯಪ್ರಜ್ಞೆ, ಜಾಗೃತೆ, ಕೌಶಲದಿಂದ ಬಾಲಕಿಯ ರೋಗ ಗುಣವಾಗಿದೆ. ಎಲ್ಲರಂತೆ ಬಾಲಕಿ ಲಕ್ಷ್ಮೀ ಕೂಡ ನಡೆದಾಡಲು ಆರಂಭಿಸಿದ್ದಾಳೆ ಈ ಮಗಳ ಚಟುವಟಿಕೆಯನ್ನು ನೋಡಿ ತಂದೆ ತಾಯಿ ಅವರ ಬಂಧು ಬಳಗದೇವರು ತುಂಬಾ ಖುಷಿಪಟ್ಟಿದ್ದಾರೆ ವೈದ್ಯರಿಗೆ ಹಾಗೂ ತಂಡಕ್ಕೆ ಲಕ್ಷ್ಮಿಯ ಬಂಧು ಬಳಗ ಧನ್ಯವಾದಗಳು ಅರ್ಪಿಸಿದ್ದಾರೆ.

ಇಂತಹದ್ದೊಂದು ಸವಾಲಿನ ಪ್ರಕರಣವನ್ನು ಕೈಗೆತ್ತಿಕೊಂಡು ಯಶಸ್ವಿಯಾದ ನರರೋಗ ತಜ್ಞವೈದ್ಯರ ತಂಡಕ್ಕೆ ಬಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ. ಅಶೋಕ ಕುಮಾರ್ ಶೆಟ್ಟಿ ಹಾಗೂ ವೈದ್ಯಕೀಯ ಅಧೀಕ್ಷಕರಾದ ಡಾ. ಈರಣ್ಣ ಪಲ್ಲೇದ ಅಭಿನಂದನೆ ಸಲ್ಲಿಸಿದ್ದಾರೆ.

### ಏನಿದು ಬೆನ್ನುಹುರಿ ಗಡ್ಡೆ

ವೈದ್ಯಕೀಯ ಭಾಷೆಯಲ್ಲಿ Posterior cervical laminectomy and decompression of tumor ಎಂದು ಕರೆಯುವ ಇದನ್ನು ಜನಸಾಮಾನ್ಯರ ಭಾಷೆಯಲ್ಲಿ ಬೆನ್ನುಹುರಿ ಗಡ್ಡೆ ಎಂದು ಕರೆಯಲಾಗುತ್ತದೆ. ಸಹಜವಾಗಿ 16 ವರ್ಷದವರಲ್ಲಿ ಈ ರೀತಿಯ ಬೆನ್ನುಹುರಿ ಗಡ್ಡೆ ವಿರಳವಾಗಿ ಕಾಣಿಸುತ್ತದೆ. ಬೆನ್ನು ಹುರಿ ಗಡ್ಡೆ ಕಾಣಿಸಿಕೊಳ್ಳುವುದರಿಂದ ದೇಹ ಭಾರವಾಗುತ್ತದೆ, ಕೈಕಾಲುಗಳು ಬಲಹೀನಗೊಳ್ಳುತ್ತವೆ. ಇದರಿಂದಾಗಿ ನಡೆದಾಡಲು, ಒಂದೂ ಹೆಜ್ಜೆಯನ್ನೂ ಇಡುವುದಕ್ಕೆ ಕಷ್ಟಸಾಧ್ಯವಾಗುತ್ತದೆ

# ಸೆ.25 ರಂದು ಸಾರಿಗೆ ಆದಾಲತ್

**ಕಾರವಾರ:** ಶಿರಸಿಯ ಬಶೆಟ್ಟಿಕೆರೆಯಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಾದೇಶಿಕ ಸಾರಿಗೆ ಕಚೇರಿಗೆ ಸಂಬಂಧಪಟ್ಟಂತೆ ಸಾರ್ವಜನಿಕರ ಕುಂದು–ಕೊರತೆ ಹಾಗೂ ಸಮಸ್ಯೆಗಳ ಬಗ್ಗೆ "ಸಾರಿಗೆ ಅದಾಲತ್" ನ್ನು ಸೆ.25 ರಂದು ಬೆಳಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು "ಸಾರಿಗೆ ಅದಾಲತ್"ಗೆ ಹಾಜರಾಗಿ ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸುವಂತೆ ಶಿರಸಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಮಲ್ಲಿಕಾರ್ಜುನಪ್ಪ ಕಪ್ಪರದ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಕಾರ್ ಸರ್ವಿಸ್ ಟೆಕ್ನಿಶಿಯನ್ ತರಬೇತಿ

**ಕಾರವಾರ:** ತಾಂತ್ರಿಕ ಕೌಶಲ್ಯ ತರಬೇತಿಗಳಿಗೆ ಹೆಸರಾದ ಹುಬ್ಬಳ್ಳಿಯ ಜಿಟಿಟಿಸಿ– ಮಲ್ಟಿ ಸ್ಕಿಲ್ ಡೆವಲಪ್‌ಮೆಂಟ್ ಸೆಂಟರ್‌ನಲ್ಲಿ ಬೆಂಗಳೂರಿನ ಬಾಷ್ ಇಂಡಿಯಾ ಪ್ರತಿಷ್ಠಾನದ ಸಹಯೋಗದಲ್ಲಿ 3 ತಿಂಗಳ ಕಾರ್ ಸರ್ವಿಸ್ ಟೆಕ್ನಿಶಿಯನ್ ತರಬೇತಿಯನ್ನು ಆಯೋಜಿಸಲಾಗಿದೆ.

ಹತ್ತನೇ ತರಗತಿ ಪಾಸ್, ಪಿಯುಸಿ/ಡಿಪ್ಲೋಮಾ ಯಾವುದೇ ಡಿಗ್ರೀ ಉತ್ತೀರ್ಣ ಅಥವಾ ಅನುತ್ತೀರ್ಣರಾದ 18 ರಿಂದ 28 ವಯೋಮಿತಿಯೊಳಗಿನ ಅಭ್ಯರ್ಥಿಗಳು ಈ ತರಬೇತಿ ಪ್ರವೇಶ ಪಡೆಯಲು ಅರ್ಹರಿರುತ್ತಾರೆ. ಅಭ್ಯರ್ಥಿಗಳಿಗೆ ವಾಹನ ವ್ಯವಸ್ಥೆ ಅಧ್ಯಯನ, ಕಾರ್ ವಾಹನದ ತಪಾಸಣೆ, ದುರಸ್ತಿ, ನಿರ್ವಹಣೆ, ಬಿಡಿ ಭಾಗಗಳ ಜೋಡಣೆ, ಉಪಕರಣಗಳ ಬಳಕೆ, ಸಂವಹನ, ವ್ಯಕ್ತಿತ್ವ ವಿಕಸನ, ಮತ್ತು ಕಂಪ್ಯೂಟರ್ ತರಬೇತಿ ನೀಡಲಾಗುವುದು. ಈ ತರಬೇತಿಗಳು ಕೈಗಾರಿಕೆಗಳ ಅವಶ್ಯಕತೆಗಳಿಗೆ ಅನುಗುಣವಾದ ಪಠ್ಯಕ್ರಮವನ್ನು ಹೊಂದಿವೆ. ಮತ್ತು ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಆಟೋಮೊಬೈಲ್ ಉದ್ಯಮ ಪರಿಣಿತರಿಂದ ತರಬೇತಿ ನೀಡಲಾಗುತ್ತದೆ. ತರಬೇತಿಗಳು ಅಕ್ಟೋಬರ 1 ರಿಂದ ಪ್ರಾರಂಭವಾಗಲಿದ್ದು, ಜಿಟಿಟಿಸಿ ಹುಬ್ಬಳ್ಳಿ ಕೇಂದ್ರದಲ್ಲಿ ಉನ್ನತ ತಂತ್ರಜ್ಞಾನ ಮತ್ತು ತರಬೇತಿ ಸೌಲಭ್ಯಗಳನ್ನು ಸ್ಥಾಪಿಸಲಾಗಿದೆ. ತರಬೇತಿ ಪೂರ್ಣಗೊಳಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ, ಕ್ಯಾಂಪಸ್ ಸಂದರ್ಶನಗಳ ಮೂಲಕ ಉದ್ಯೋಗ ದೊರಕಿಸಿ ಕೊಡಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು ಸೆ.30 ರೊಳಗಾಗಿ ಖುದ್ದಾಗಿ ಜಿಟಿಟಿಸಿ ಹುಬ್ಬಳ್ಳಿ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಜಿಟಿಟಿಸಿ, ಇಂಡಸ್ಟ್ರಿಯಲ್ ಎಸ್ಟೇಟ್, ಗೋಕುಲ ರಸ್ತೆ, ಹುಬ್ಬಳ್ಳಿ. ದೂರವಾಣಿ: 0836–2333159/ 8183860552 ನ್ನು ಸಂಪರ್ಕಿಸುವಂತೆ ಜಿಟಿಟಿಸಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ಉಳಿದರೆ ಮಾತ್ರ ಮನುಷ್ಯ ಕುಲ ಉಳಿಯಲಿದೆ




**ವಿಜಯಪುರ:** ಎಲ್ಲರೂ ಆಧುನಿಕ ಜಗತ್ತಿನ ಸುಖ ಸಂಪತ್ತಿಗೆ ಬೆನ್ನು ಹತ್ತಿ ನಿಜವಾದ ಆರೋಗ್ಯಕರ ಬದುಕನ್ನು ನಡೆಸುವುದನ್ನ ಮರೆಯುತ್ತಿದ್ದೇವೆ ಪರಿಸರ ಉಳಿದರೆ ಮಾತ್ರ ಮನುಷ್ಯ ಕುಲ ಉಳಿಯಲಿದೆ ಆದ್ದರಿಂದ ಪ್ರತಿಯೊಬ್ಬರು ತಮ್ಮ ಮನೆಯ ಅಂಗಳದಲ್ಲಿ, ತಮ್ಮ ಓಣಿಯ ಉಧ್ಯಾನವನಗಳಲ್ಲಿ ಹಾಗೂ ತಮ್ಮ ತಮ್ಮ ಜಮೀನುಗಳಲ್ಲಿ ಸಾಧ್ಯವಾದಷ್ಟು ಮರಗಳನ್ನು ಹಚ್ಚಬೇಕು ಎಂದು ನಗರದ ಹೊರ ವಲಯದ ರಾಮಕೃಷ್ಣ ವಿವೇಕಾನಂದ ಆಶ್ರಮದ ಆವರಣದಲ್ಲಿ ಟೆಕ್‌ಸಿರಿ ಹಾಗೂ ನನ್ನ ಗಿಡ ನನ್ನ ಭೂಮಿ ಸಂಘಟನೆಯ ಸಹಯೋಗದಲ್ಲಿ ಆಯೋಜಿಸುವ ಸಸಿ ನೆಡುವ ಕಾರ್ಯಕ್ರಮದಲ್ಲಿ ನರೇಶಾನಂದ ಸ್ವಾಮಿಜಿ ಅವರು ಮಾತನಾಡಿದರು.

ಟೆಕ್‌ಸಿರಿಯ ಸಂಸ್ಥಾಪಕರಾದ ಮುತ್ತು ಸರಶೆಟ್ಟ ಅವರು ಮಾತನಾಡುತ್ತಾ ಯಾವುದೇ ಸಂಸ್ಥೆಯ ಶ್ರೇಯಸ್ಸು ಅದರ ಉದ್ಯೋಗಿಗಳ ಮೇಲೆಯೇ ಅವಲಂಭಿತವಾಗಿದೆ, ಟೆಕ್‌ಸಿರಿ ಕುಟುಂಬದ ಪ್ರತಿಯೊಬ್ಬ ಸದಸ್ಯನಿಗೂ ಕೃತಜ್ಞತೇಯ ಸಂಕೇತವಾಗಿ ಪ್ರತಿಯೊಬ್ಬ ಉದ್ಯೋಗಿಯ ಹೆಸರಲ್ಲಿ ಪ್ರತಿ ತಿಂಗಳು ಒಂದು ಗಿಡದಂತೆ ನೆಡಲು ನಿರ್ಧಸಿದ್ದೆವೆ. ಹೇಗೆ ಮರಗಳು ಪ್ರಕೃತಿಗೆ ಜೀವ ನೆರಳು ಮತ್ತು ಶಕ್ತಿ ನೀಡುತ್ತದೆಯೋ ಹಾಗೆ ನಮ್ಮ ಉದ್ಯೋಗಿಗಳು ನಮ್ಮ ಟೆಕ್‌ಸಿರಿಗೆ ಶಕ್ತಿ ಸಮರ್ಪಣೆ ಮತ್ತು ಬೆಳವಣಿಗೆ ನೀಡುತ್ತಾರೆ, ನಮ್ಮ ಜನರಿಗೆ ಹಾಗೂ ನಮ್ಮ ಭೂಮಿಗೆ ಹೃದಯಪೂರ್ವಕ ಧನ್ಯವಾದ ಸಲ್ಲಿಸುವ ಪ್ರಯತ್ನ ನಮ್ಮದು ಎಂದರು.

ನನ್ನ ಗಿಡ ನನ್ನ ಭೂಮಿಯ ಸಂಚಾಲಕರಾದ ಬಸವರಾಜ ಭೈಚಬಾಳ ಅವರು ಮಾತನಾಡುತ್ತ ಈ ದೇಶದ ಎಲ್ಲಾ ಕಂಪನಿಗಳ ಆಡಳಿತ ಮಂಡಳಿಗಳು ಇದೇ ತರಹ ಉದ್ಯೋಗಿಗಳು ಹಾಗೂ ಭೂಮಂಡಲವನ್ನು ಮುಂದಿಟ್ಟುಕೊಂಡು ಸಸಿ ನೆಡುವ ಕೆಲಸವನ್ನು ಮಾಡಬೇಕು ನಮ್ಮ ಜಿಲ್ಲೆಯಲ್ಲಿ ಟೆಕ್‌ಸಿರಿ ಕಂಪನಿ ಉಳಿದೆಲ್ಲ ಕಂಪನಿಗಳಿಗೆ ಮಾದರಿ ಕೆಲಸ ಮಾಡುತ್ತಿದೆ, ನಾವೆಲ್ಲರೂ ಬದುಕಬೇಕಾದರೆ ಶುದ್ಧ ಗಾಳಿ, ಅತೀ ಅವಶ್ಯಕ ಆ ನಿಟ್ಟಿನಲ್ಲಿ ಇಂತಹ ಕೆಲಸಗಳು ಎಲ್ಲರಿಂದಲೂ ಆಗಬೇಕು ಇದು ನಮ್ಮೆಲ್ಲರ ಜವಾಬ್ದಾರಿ ಎಂದರು

ಈ ವೇಳೆ ಟೆಕ್‌ಸಿರಿಯ ಕಂಪನಿಯ ಉದ್ಯೋಗಿಗಳಾದ ವಿಜಯ ಕುಮಾರ ಅರಳಿಮಠ, ವಿಶ್ವನಾಥ ಶಿದ್ಗಿಂಪ್ಪನವರ್, ಸಂಗಮೇಶ ತಳವಾಡೆ, ವಾಸವಿ ಘೋರ್ಪಡೆ, ಚಂದನ್ ಮಾರಪುರ, ಸೌರಭ ಬಿರಾದಾರ, ಬಸವರಾಜ ಹಲ್ಯಾಳ, ವಿರೇಶ ಬಿರಾದಾರ, ಗಂಗಾಬಾಯಿ ಕೊಕಟನೂರಮ ವೀನಾ ಮೂಲಿಮನಿ, ಶ್ರೀಲತಾ ಇದ್ದರು.

ಈ ಸಂದರ್ಭದಲ್ಲಿ ಅರಣ್ಯ ಅಧಿಕಾರಿಗಳಾದ ಸಂತೋಷ ಅಜೂರ, ಮಂಜೂನಾಥ ಆಸಂಗಿ, ವಾರ್ಡ ನಂಬರ 35 ರ ಮಹಾನಗರ ಪಾಲಿಕೆ ಸದಸ್ಯರಾದ ರಾಜು ಕುರಿ, ಚಿದಾನಂದ ಔರಂಗಬಾದ, ವಿರೇಶ ಮುದಕಾಮಠ, ರಾಜಕುಮಾರ ಸಗಾಯಿ, ಗುಮಟೆ ಸರ್, ಆನಂದ ಅಥಣಿ, ಸಂಜು ಗುನ್ನಾಪುರ, ಶಿವಯೋಗಿ ವಾಲಿಕಾರ, ವಿಶಾಲ ಹಿರಾಸ್ಕರ್, ಅಮೀತ ಕ್ಷೀರಸಾಗರ, ದಿನೇಶ ಅಡಕಿ, ವಿಶಾಲ ಹೊರಾಸ್ಕರ್, ಅಮೀತ ಕ್ಷೀರಸಾಗರ ಸೇರಿದಂತೆ ಅನೇಕರು ಇದ್ದರು.

# ರಾಜ್ಯ ಮಟ್ಟದ ತರಬೇತಿಗೆ ಆಯ್ಕೆ



**ಬೆಳಗಾವಿ:** ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನ ಪರಿಷತ್ ಬೆಂಗಳೂರು, ಇವರು ಆಯೋಜಿಸಿದ್ದ ರಾಜ್ಯ ಮಟ್ಟದ 'ನಾನು ವಿಜ್ಞಾನಿ' ಎಂಬ ವೈಜ್ಞಾನಿಕ ಮತ್ತು ಸ್ಥಳದಲ್ಲಿಯೇ ದೂರದರ್ಶಕ ಯಂತ್ರ ಸಿದ್ದಪಡಿಸುವ ತರಬೇತಿ ಶಿಬಿರಕ್ಕೆ ಗೋಕಾಕ – ಮೂಡಲಗಿ ತಾಲೂಕಿನ ಪಾಮಲದಿನ್ನಿ ಗ್ರಾಮದ ವಿಜಯಶಾಲಿನಿ ವೀರಪ್ಪ ವಿಜಯನಗರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ 9 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕು. ಶ್ರಾವತಿ ರಾಜು ದಂಡಿನ ಹಾಗೂ ಕು. ಕೀರ್ತಿ ಲಕ್ಷ್ಮಣ ಕಮತಿ ಅವರು ರಾಜ್ಯ ಮಟ್ಟಕ್ಕೆ ಆಯ್ಕೆ ಅಗಿದ್ದು, ರಾಜ್ಯ ಮಟ್ಟದ ಪರಿಷತ್ ತರಬೇತಿ ಸಂಸ್ಥಾಪಕ ಅಧ್ಯಕ್ಷರಾದ ಡಾ. ಹುಲಿಕಟ್ಟಿ ನಟರಾಜ, ಅವರ ಪರವಾಗಿ ಪರಿಷತ್ ರಾಜ್ಯ ನಿರ್ದೇಶಕರಾದ ಬಸವರಾಜ ಹಟ್ಟಿಗೌಡರ ಪಾಮಲದಿನ್ನಿ ಶಾಲೆಗೆ ತೆರಳಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಆಯ್ಕೆ ಪತ್ರ ವಿತರಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಅಧ್ಯಕ್ಷರಾದ ಮಾರುತಿ ವಿಜಯನಗರ, ಆಡಳಿತ ಅಧಿಕಾರಿ ಮಹಾಂತೇಶ ವಿಜಯನಗರ ಮತ್ತು ಸತೀಶ ವಿಜಯನಗರ, ವಿಜ್ಞಾನ ಶಿಕ್ಷಕರಾದ ಮಂಜುನಾಥ ಪಾಟೀಲ, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಕನ್ನಡ ಭಾಷೆಯು ಜನಮನದಲ್ಲಿ ನೆಲೆಗೊಳ್ಳಲಿ



**ಕೊಪ್ಪಳ:** ಕನ್ನಡ ಅಭಿವೃದ್ಧಿ ಜಾಗೃತಿ ಸಮಿತಿ ಸದಸ್ಯರಾಗಿ ಆಯಕ್ಕೆಯಾದ ಜಿ.ಎಸ್. ಗೊನಾಳರವರಿಗೆ ಅವರ ಸ್ನೇಹ ಬಳಗದಿಂದ ನಗರದ ರಾಜ್ ಮುದ್ರಣಾಲಯದಲ್ಲಿ ಅಭಿನಂದನಾ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಜಿಲ್ಲಾ ಜೆ.ಡಿ.ಎಸ್‌ನ ಸಾಂಸ್ಕೃತಿಕ ಘಟಕದ ಜಿಲ್ಲಾಧ್ಯಕ್ಷರಾದ ಮಂಜುನಾಥ ಸೊರಟೂರು ಅಭಿನಂದಿಸಿ ಮಾತನಾಡುತ್ತಾ ಕನ್ನಡ ನಾಡು ನುಡಿ ಭಾಷೆಯ ಸರ್ವಾಂಗಿಣ ಪ್ರಗತಿಯ ಬಗ್ಗೆ ಜನಮನದಲ್ಲಿ ಜಾಗೃತಿ ಭಾವನೆ ಉಂಟಾಗುವಂತೆ ಜಿ.ಎಸ್ ಗೋನಾಳರು ಕರ್ತವ್ಯ ನಿರ್ವಹಿಸಲಿ ಅವರಿಂದ ಕೊಪ್ಪಳ ಜಿಲ್ಲೆಯಲ್ಲಿ ಕನ್ನಡ ಭಾಷೆಯು ಜನಮನದಲ್ಲಿ ನೆಲೆಗೊಳ್ಳಲಿ ಎಂದು ಆಶಯ ವ್ಯಕ್ತಪಡಿಸಿದರು.

ಹಿರಿಯ ಪತ್ರಕರ್ತ ರಾಮಣ್ಣ ಕಂದಾರಿ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಜಿ.ಎಸ್. ಗೋನಾಳರು ಮೂರು ದಶಕಗಳ ಕಾಲ ಕೊಪ್ಪಳದಲ್ಲಿ ತಮ್ಮ ವಿಶಾಲ ಪ್ರಕಾಶನದ ಮೂಲಕ 45 ಪುಸ್ತಗಳನ್ನು ಪ್ರಕಟಿಸಿ ಜೊತೆಗೆ ಮಾಧ್ಯಮ ಸಂಘಟನೆಯೊಂದಿಗೆ, ವರದಿಗಾರರಾಗಿ, ಸಂಪಾದಕರಾಗಿ ಕನ್ನಡ ಕಟ್ಟುವ ಬೆಳೆಸುವ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ. ಈಗ ಅವರ ಸಾಧನೆಗಳನ್ನು ಗುರುತಿಸಿ ರಾಜ್ಯ ಸರ್ಕಾರ ಕನ್ನಡ ಜಾಗೃತಿ ಸಮಿತಿ ಸದಸ್ಯರನ್ನಾಗಿ ನೇಮಿಸಿದೆ. ಇವರಿಂದ ಕನ್ನಡ ಅಭಿವೃದ್ಧಿಯ ಕಾರ್ಯಕ್ರಮಗಳು ನಿತ್ಯ ನಿರಂತರವಾಗಿ ನಡೆಯಲಿ ಎಂದರು.

ಈ ಸಂದರ್ಭದಲ್ಲಿ ಪತ್ರಕರ್ತರಾದ ಶಿವಕುಮಾರ ಹಿರೇಮಠ, ಫಕೀರಪ್ಪ ಗೋಟೂರು, ಉಮೇಶ ಪೂಜಾರ, ಉದಯ ತೋಟದ, ಹಿರಿಯ ಮುಖಂಡರಾದ ಪ್ರಭು ಶೆಟ್ಟರ, ಬಸವರಾಜ ಹೂಗಾರ, ಮಲ್ಲಿಕ್‌ಜಾನ್, ತಾಜ್‌ಪಾಷಾ ಮಕಾನದಾರ ಉಪಸ್ಥಿತರಿದ್ದರು. ಸ್ವಾಗತವನ್ನು ಉಮೇಶ ಪೂಜಾರ ಕೋರಿದರೆ, ಕೊನೆಯಲ್ಲಿ ಉದಯ ತೋಟದ ವಂದಿಸಿದರು.

# ಗೋಕಾಕ ಅರ್ಬನ್ ಬ್ಯಾಂಕ್: 1.59 ಕೋ. ನಿವ್ವಳ ಲಾಭ

**ಗೋಕಾಕ:** ಪ್ರಸಕ್ತ ಸಾಲಿನಲ್ಲಿ ದಿ ಗೋಕಾಕ ಅರ್ಬನ್ ಕೋ–ಆಪ್. ಕ್ರೆಡಿಟ್ ಬ್ಯಾಂಕ್ 216 ಕೋಟಿ ರೂ.ಗಳ ವ್ಯವಹಾರ ನಡೆಸಿ ರೂ. 1,59,60,000 ನಿವ್ವಳ ಲಾಭ ಗಳಿಸಿದೆ ಎಂದು ಬ್ಯಾಂಕ್ ಚೇರಮನ್ ಬಸವರಾಜ ಕಲ್ಯಾಣ ಶೆಟ್ಟಿ ತಿಳಿಸಿದರು.

ಭಾನುವಾರ ಇಲ್ಲಿನ ಮಹಾಲಕ್ಷ್ಮೀ ಸಭಾ ಭವನದಲ್ಲಿ ಜರುಗಿದ ಬ್ಯಾಂಕಿನ 119ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬ್ಯಾಂಕಿನ ಸರ್ವತೋಮುಖ ಅಭಿವೃದ್ಧಿಗೆ ಸಹಕರಿಸುತ್ತಿರುವ ಎಲ್ಲ ಸದಸ್ಯರಿಗೂ ಅಭಿನಂದನೆಗಳನ್ನು ಸಲ್ಲಿಸಿದರು.

ದಿಗ್ದರ್ಶಕ ಅಶೋಕ ಹೆಗ್ಗಣ್ಣವರ ಅವರು ಬ್ಯಾಂಕಿನ ವಾರ್ಷಿಕ ವರದಿಯನ್ನು ಸಭೆಗೆ ಮಂಡಿಸಿದರು.

ವೇದಿಕೆಯಲ್ಲಿ ಬ್ಯಾಂಕಿನ ಉಪಾಧ್ಯಕ್ಷ ಸುಧೀರ ಅಂಕಲಿ, ದಿರ್ಗದರ್ಶಕರುಗಳಾದ ಜಯಾನಂದ ಮುನವಳ್ಳಿ, ವೀರಣ್ಣ ಬಿದರಿ, ದುಂಡಪ್ಪಾ ಬಿದರಿ, ಮಹಾಂತೇಶ ಕಲ್ಲೋಳಿ, ರಾಜು ತಾರಳಿ, ಶೋಭಾ ಕುರಬೇಟ, ಶಾಂತಕ್ಕ ಘೋಡಗೇರಿ, ಚಂದ್ರಕಾಂತ ಕುರಬೇಟ, ಪಿ.ಎಂ.ಮಡ್ಡೆಪ್ಪಗೋಳ, ಪಿ.ಎಸ್.ಸೊಲ್ಲಾಪೂರಮಠ, ಎಸ್.ಪಿ.ಪಟ್ಟಣಶೆಟ್ಟಿ, ಸಿ.ಸಿ.ಕಡೇವಾಡಿ, ಎಸ್.ಬಿ.ಮಗದುಮ್, ಬಿ.ಬಿ.ಮಾಳಿ ಉಪಸ್ಥಿತರಿದ್ದರು.

ಪ್ರಧಾನ ವ್ಯವಸ್ಥಾಪಕ ಎಸ್.ಎಸ್.ಪಾಟೀಲ ನಿರೂಪಿಸಿದರು. ದಿಗ್ದರ್ಶಕ ಮಲ್ಲಿಕಾರ್ಜುನ ಚುನಮರಿ ವಂದಿಸಿದರು.




# ಅ.19 ರಂದು ಸಂಪರ್ಕ ಕಾರ್ಯಕ್ರಮ

**ಧಾರವಾಡ:** ಬೆಳಗಾವಿ ರಕ್ಷಣಾ ಇಲಾಖೆಯ ಮರಾಠಾ ಲೈಟ ಇನ್‌ಫಂಟ್ರಿ ಸೆಂಟರ್‌ನಿಂದ ಬೆಳಗಾವಿ ನಗರದ ಶಿವಾಜಿ ಸ್ಟೇಡಿಯಂನಲ್ಲಿ ಅಕ್ಟೋಬರ 19, 2025 ರಂದು ಬೆಳಿಗ್ಗೆ 8:30 ರಿಂದ ಸಂಜೆ 4 ಗಂಟೆವರೆಗೆ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರುಗಳಿಗಾಗಿ ಸಂಪರ್ಕ ಸಭೆ ಆಯೋಜಿಸಲಾಗಿದೆ. ಸದರಿ ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿ, SPARSH & ECHSಗೆ ಸಂಬಂಧಿಸಿದ ವಿಷಯಗಳ ಕುರಿತು ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಕುಂದು ಕೊರತೆ ಕುರಿತು ವಿವರಗಳನ್ನು ನೊಂದಾಯಿಸಿಕೊಂಡು, ನೋಂದಣಿ ಸಂಖ್ಯೆಯನ್ನು ಪಡೆಯಬೇಕು. ನೋಂದಣಿ ಮಾಡಿಸುವ ಫಲಾನುಭವಿಗಳು ತಮ್ಮ ಕುಂದು ಕೊರತೆಗಳಿಗೆ ಸಂಭಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584, ದೂರವಾಣಿ ಸಂಖ್ಯೆ 0831–2402821 ಮತ್ತು ಇಮೇಲ್ greatgorilla@nic.in ಗಳ ಮೂಲಕ ಅಪ್‌ಲೋಡ್ ಮಾಡಬಹುದು. ಧಾರವಾಡ, ಗದಗ, ಹಾವೇರಿ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗೆ ಸಂಬಂಧಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರುಗಳು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಬಹುದಾಗಿದೆಯೆಂದು ಎಮ್‌ಎಲ್‌ಐಆರ್‌ಸಿ ಅಭಿಲೇಕಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ್ಯಾಯವಾದಿಗಳಿಂದ ಅರ್ಜಿ ಆಹ್ವಾನ

**ಗದಗ:** ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡ/ ಬೆಂಗಳೂರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು / ಬೆಳಗಾವಿ ನ್ಯಾಯಾಲಯಗಳಲ್ಲಿ ಜಿಲ್ಲಾ ಪಂಚಾಯತಿ ಅಧ್ಯಕ್ಷರು ಅಧಿಕಾರಿಗಳನ್ನು ಎದುರುದಾರರನ್ನಾಗಿಸಿ ದಾಖಲಾಗುವ ರಿಟ್ ಅರ್ಜಿಗಳನ್ನು ನಿರ್ವಹಿಸಲು ಆಯಾ ನ್ಯಾಯಾಲಯಗಳಲ್ಲಿ ಖಾಯಂ ಸದಸ್ಯ ನೋಂದಣಿಯಾಗಿರುವ, ಜಿಲ್ಲಾ ಪಂಚಾಯತಿ ಹಾಗೂ ಇತರೆ ವಿವಿಧ ಕಚೇರಿಗಳ ಪರವಾಗಿ ನ್ಯಾಯವಾದಿಗಳಾಗಿ ಕಾರ್ಯನಿರ್ವಹಿಸಿದ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ಜಿಲ್ಲಾ ಪಂಚಾಯತ್ , ತಾಲೂಕು ಪಂಚಾಯತ್, ಹಾಗೂ ಗ್ರಾಮ ಪಂಚಾಯತಿ ಪರವಾಗಿ ಪ್ರಕರಣಗಳನ್ನು ನಿರ್ವಹಿಸಿದ ಬಗ್ಗೆ ಕನಿಷ್ಠ 5 ವರ್ಷಗಳ ಅನುಭವ ಹೊಂದಿರುವ ವಕೀಲರನ್ನು ನೇಮಿಸಿಕೊಳ್ಳುವ ಕುರಿತು ನ್ಯಾಯವಾದಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿದಾರರು ತಮ್ಮ ಹೆಸರು, ವಯಸ್ಸು, ವಿದ್ಯಾರ್ಹತೆ, ಅನುಭವ, ವಿವಿಧ ಕಚೇರಿಗಳ ಪರವಾಗಿ ನ್ಯಾಯವಾದಿಗಳಾಗಿ ಕಾರ್ಯನಿರ್ವಹಿಸಿದ ವಿವರದ ಕುರಿತು ಆಯಾ ಕಚೇರಿಯಿಂದ ಪಡೆದ ಪ್ರಮಾಣ ಪತ್ರ ಸಲ್ಲಿಸಬೇಕು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ ಹಾಗೂ ಗ್ರಾಮ ಪಂಚಾಯತ್ /ತಾಲೂಕು ಪಂಚಾಯತ್/ ಜಿಲ್ಲಾ ಪಂಚಾಯತ್‌ಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ವಾದ ಮಂಡಿಸಿದ ಬಗ್ಗೆ ವಿವರ ಸಲ್ಲಿಸಬೇಕು. ಕನಿಷ್ಠ 10 ರಿಂದ 15 ವರ್ಷ ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ ಬಗ್ಗೆ ಸೂಕ್ತ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರ ಅಥವಾ ನೋಂದಣಿ ಪ್ರಮಾಣ ಪತ್ರ ಸಲ್ಲಿಸುವುದು. ಆಸಕ್ತ ನ್ಯಾಯವಾದಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಅರ್ಜಿಯನ್ನು ಜಿಲ್ಲಾ ಪಂಚಾಯತಿ ಕಾರ್ಯಾಲಯಕ್ಕೆ ಸೆಪ್ಟೆಂಬರ್ 26 ರೊಳಗೆ ಸಲ್ಲಿಸಬೇಕು. ಮಾಹಿತಿಯನ್ನು zpgadag.karnataka.gov.in ನಲ್ಲಿ ವೀಕ್ಷಿಸಬಹುದಾಗಿದೆ ಎಂದು ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತರಬೇತಿಗಾಗಿ ಅರ್ಜಿ ಆಹ್ವಾನ

**ಗದಗ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ತರಬೇತಿಗೆ ಆಯ್ಕೆ ಮಾಡಬೇಕಾಗಿದ್ದು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಭರ್ತಿ ಮಾಡಿದ ಅರ್ಜಿಯನ್ನು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳಿಗೆ ಅಕ್ಟೋಬರ್ 15 ರಂದು ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 208, ಹುಬ್ಬಳ್ಳಿ ರಸ್ತೆ, ಗದಗ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

# ಸಾರ್ವಜನಿಕರ ಗಮನಕ್ಕೆ

**ಗದಗ:** ಗದಗ–ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಈ ಸೇವಾ ಸಂಘ/ಸಂಸ್ಥೆಗಳಿಗೆ ವಾರ್ಡ ನಂ 22 ರಲ್ಲಿರುವ ಗಂಗಿಮಡಿ ಆಶ್ರಯ ಕಾಲೋನಿಯಲ್ಲಿ ಇರುವ ನಗರಸಭೆಯ ಮಾಲೀಕತ್ವದ ಆಶ್ರಯ ನಿವೇಶನದಲ್ಲಿ ನಾಗರಿಕ ಸೌಲಭ್ಯ ಉದ್ದೇಶಕ್ಕಾಗಿ ಮೀಸಲಿರಿಸಿದ ಖಾಲಿ ನಿವೇಶನಗಳನ್ನು 30ವರ್ಷಗಳ ಅವಧಿಗೆ ಲೀಜ್ ನೀಡುವುದರ ಕುರಿತಾಗಿ ಈ ಕೆಳಗೆ ನಮೂದಿಸಿರುವ ಸಂಘ ಸಂಸ್ಥೆ ಇವುಗಳಿಗೆ ನಿವೇಶನಗಳನ್ನು ಕೋರಿ ಮನವಿ ಸಲ್ಲಿಸಿದ್ದರ ಮೇರೆಗೆ ದಿನಾಂಕ:27–05–2025 ರಂದು ಜರುಗಿದ ಆಶ್ರಯ ಸಮಿತಿ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಆಶ್ರಯ ಸಮಿತಿ ಗದಗ–ಬೆಟಗೇರಿ ನಗರಸಭೆ ಹಾಗೂ ಶಾಸಕರು ಗದಗ ವಿಧಾನಸಭಾ ಕ್ಷೇತ್ರ ರವರು ಸ್ವೀಕರಿಸಿದ ನಡಾವಳಿಯಂತೆ ಈ ಕೆಳಗಿನಂತೆ ಇರುವ ನಿವೇಶನಗಳನ್ನು ಲೀಜ್ ನೀಡಲು ನಿರ್ಣಯಿಸಿದ್ದು ಇರುತ್ತದೆ. ಸಂಘ/ಸಂಸ್ಥೆ ಹೆಸರು ಗಂಗಿಮಡಿ ಆಶ್ರಯ ಕಾಲೋನಿ ಶ್ರೀ ಮಾರುತಿ ಸೇವಾ ಟ್ರಸ್ಟ್ ಕಮೀಟಿ (ರಿ)ರಿ.ಸ.ನಂ385,395,396,398 ನೇದ್ದರ ಪೈಕಿ ಗಂಗಿಮಡಿ ಆಶ್ರಯ ಕಾಲೋನಿ ಮಸ್ಜಿದ್–ಎ–ಮುಹಾಜರೀನ ಸೇವಾ ಕಮೀಟಿ ರಿ.ಸ.ನಂ385,395,396ನೇದ್ದನ್ನು ರಿ.ಸ.ನಂ/ಟಿ.ಪಿ.ಸಿ ನಂ/ಪ್ಲಾಟ್ ನಂ ಗಂಗಿಮಡಿ ಆಶ್ರಯ ಕಾಲೋನಿ ಈಶ್ವರ ಸೇವಾ ಸಮಿತಿ(ರಿ) ರಿ.ಸ.ನಂ385,395,396,398 ನೇದ್ದರ ಪೈಕಿ ಈ ಸೇವಾ ಸಂಘ/ಸಂಸ್ಥೆಗಳಿಗೆ ನಗರದ ವಿವಿಧ ವಾರ್ಡಗಳಲ್ಲಿ ನಗರಸಭೆಯ ಮಾಲೀಕತ್ವದ ವಿವಿಧ ನಾಗರಿಕ ಸೌಲಭ್ಯ ಉದ್ದೇಶಕ್ಕಾಗಿ ಮೀಸಲಿರಿಸಿದ ಖಾಲಿ ನಿವೇಶನಗಳನ್ನು 30 ವರ್ಷಗಳ ಅವಧಿಗೆ ಲೀಜ್ ನೀಡಲು ಯಾವುದಾದರೂ ತಂಟೆ ವ ತಕರಾರು ಇದ್ದಲ್ಲಿ ಪೌರಾಯುಕ್ತರು ಗದಗ–ಬೆಟಗೇರಿ ನಗರಸಭೆ ಇವರ ಹೆಸರಿನಲ್ಲಿ ಈ ಕಾರ್ಯಾಲಯಕ್ಕೆ ಲಿಖಿತವಾಗಿ ಸೂಕ್ತ ದಾಖಲೆಗಳೊಂದಿಗೆ ಪ್ರಕಟಣೆ ಹೊರಡಿಸಿದ ದಿನದಿಂದ 07 ದಿನದೊಳಗಾಗಿ ಸಲ್ಲಿಸಲು ತಿಳಿಸಿದೆ.

**ಉದ್ಯೋಗ ಪೂರ್ವ ತರಬೇತಿ ಶಿಬಿರ ಉದ್ಘಾಟನಾ ಕಾರ್ಯಕ್ರಮದಲ್ಲಿ ಡಾ. ಗಾಳಿ ಕರೆ**

# ಉದ್ಯೋಗದಲ್ಲಿ ತೊಡಗುವ ಮನೋಭಾವ ಬೆಳೆಸಿಕೊಳ್ಳಿ



**ಬಾಗಲಕೋಟೆ:** ಪ್ರತಿಯೊಬ್ಬರು ಉದ್ಯೋಗದಲ್ಲಿ ತೊಡಗುವ ಮನೋಭಾವ ಬೆಳೆಸಿಕೊಳ್ಳಬೇಕು. ಸುಂದರ ಬದುಕಿಗೆ ಉದ್ಯೋಗ ಪೂರ್ವ ತರಬೇತಿ ಮುಖ್ಯವಾಗಿದೆ. ಹಿಂದಿನ ಕಾಲದಲ್ಲಿ ಉದ್ಯೋಗಂ ಪುರುಷ ಲಕ್ಷ್ಯಂ ಎನ್ನುತ್ತಿದ್ದರು ಆದರೆ ಇಂದಿನ ಕಾಲ ಬದಲಾಗಿದೆ ಅಂದರೆ ಉದ್ಯೋಗಂ ಮಾನವ ಲಕ್ಷಣಂ ಆಗಿದೆ ಎಂದು ಪ್ರಾಂಶುಪಾಲರಾದ ಡಾ.ಅರುಣಕುಮಾರ ಗಾಳಿ ಅವರು ಹೇಳಿದರು.

ಅವರು ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಬೆಂಗಳೂರಿನ ಉನ್ನತಿ ಫೌಂಡೇಶನ್ ಅವರ ಸಹಯೋಗದಲ್ಲಿ ಕಾಲೇಜಿನ ವಿಶ್ವಮಾನವ ಸಭಾ ಭವನದಲ್ಲಿ ನಡೆದ 30 ದಿನಗಳ ಉದ್ಯೋಗ ಪೂರ್ವ ತರಬೇತಿ ಶಿಬಿರವನ್ನು ಸಸಿಗೆ ನೀರುಣಿಸಿ ಉದ್ಘಾಟನೆ ಮಾಡಿ, ಮಾತನಾಡಿದರು. ಮುಂದುವರಿದು ಮಾತನಾಡಿ ಕೌಶಲ್ಯಯುಕ್ತ ಶಿಕ್ಷಣದಿಂದ ಉದ್ಯೋಗಾವಕಾಶ ಸೃಷ್ಟಿಸಿ ಕೊಳ್ಳಲು ಸಾಧ್ಯವಿದೆ. ಬೆಂಗಳೂರಿನ ಉನ್ನತಿ ಫೌಂಡೇಶನ್‌ದವರು ನೀಡುವ ಉದ್ಯೋಗದ ಪೂರ್ವ ತರಬೇತಿ ಪಡೆದು ವಿದ್ಯಾರ್ಥಿಗಳು ತಮ್ಮ ಮುಂದಿನ ಭದ್ರವಾದ ಬದುಕು ರೂಪಿಸಿಕೊಳ್ಳಬೇಕೆಂದು ಹೇಳಿದರು.

ಬೆಂಗಳೂರಿನ ಉನ್ನತಿ ಫೌಂಡೇಶನ್‌ದ ಸಂಪನ್ಮೂಲ ವ್ಯಕ್ತಿಯಾದ ಐಶ್ವರ್ಯ ಕಡಕೋಳ ಅವರು ಮಾತನಾಡಿ ವಿದ್ಯಾರ್ಥಿಗಳು ಪದವಿ ಶಿಕ್ಷಣ ಮುಗಿಸಿದ ನಂತರ ಉದ್ಯೋಗ ಅವಕಾಶಕ್ಕಾಗಿ ಅಲೆಯದೆ ತಾವೇ ಸ್ವಂತ ಉದ್ಯೋಗ ಮತ್ತು ಉದ್ಯಮ ಸ್ಥಾಪಿಸಲು ಉದ್ಯೋಗ ಪೂರ್ವ ತರಬೇತಿ ಪಡೆದರೆ ಯಶಸ್ವಿಯಾಗಲು ಸಾಧ್ಯವಿದೆ ಎಂದರು.

ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ.ಸಂಪತ್ತು ಲಮಾಣಿ ಅವರು ಪ್ರಾಸ್ತಾವಿಕ ನುಡಿ ಹೇಳಿ ಮಾತನಾಡಿ ವಿದ್ಯಾರ್ಥಿಗಳು ಪಡೆಯುವ ಶಿಕ್ಷಣವು ಸರ್ಟೀಫಿಕೆಟ್‌ಗೆ ಸೀಮಿತವಾಗದೆ ಅದು ಉದ್ಯೋಗಕ್ಕೆ ಪೂರಕವಾದ ಕೌಶಲ್ಯವನ್ನು ನೀಡಬೇಕು. ಶಿಕ್ಷಣ ಸಂಸ್ಕಾರಗೊಂಡರೆ ಮಾನವ ಉದ್ಯೋಗವಂತನಾಗುತ್ತಾನೆ ಎಂದರು.

ಐಕ್ಯೂಎಸಿ ಸಂಚಾಲಕರಾದ ಡಾ.ಬಸವರಾಜ ಬೀಳಗಿ ಸ್ವಾಗತಿಸಿದರು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಅಂತಿಮ ವರ್ಷದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಅಪ್ರೇಂಟಿಶಿಪ್ ತರಬೇತಿಗೆ ಅರ್ಜಿ ಆಹ್ವಾನ

**ವಿಜಯಪುರ:** ಹಿಂದೂಸ್ತಾನ್ ಏರೋನಾಟಿಕ್ಸ್ ಲಿ.ಬೆಂಗಳೂರು ಇವರ ಮೂಲಕ ಶಿಶಿಕ್ಷು (ಅಪ್ರೆಂಟಿಶಿಪ್) ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಐಟಿಐನಲ್ಲಿನ ಫಿಟ್ಟರ್, ಟರ್ನರ್, ಮಷಿನಸ್ಟ್, ಇಲೆಕ್ಟ್ರಿಷಿಯನ್, ವೆಲ್ಡರ್, ಕೋಪಾ, ಕಾರ್ಪೆಂಟರ್, ಫೌಂಡ್ರಿಮ್ಯಾನ್, ಶೀಟ್ ಮೆಟಲ್ ವರ್ಕರ್, ಟೂಲ್ ಮತ್ತು ಡೈ ಮೇಕರ್, ಸಿಎನ್‌ಸಿ ಪ್ರೋಗ್ರಾಮರ ಕಂ ಆಪರೇಟರ್ ಮತ್ತು ಎಮ್.ಆರ್.ಎಸಿ ಟ್ರೇಡಗಳಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಂದ ಅಪ್ರೆಂಟಿಶಿಪ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತರು, ಜಿಲ್ಲಾ ಉದ್ಯೋಗಾಧಿಕಾರಿ ಕಚೇರಿಯಿಂದ ಅರ್ಜಿ ನಮೂನೆಯನ್ನು ಪಡೆದು https://apprenticeshipindia.gov.in ವೆಬ್‌ಸೈಟ್ ಮೂಲಕ ಸೆಪ್ಟೆಂಬರ್ 22ರವರೆಗೆ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ. ನಂತರ, ನೋಂದಣಿ ಪ್ರತಿಯೊಂದಿಗೆ ಅಗತ್ಯ ದಾಖಲಾತಿ ಸಹಿತ ನೇರವಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಗ್ನೋ ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

**ವಿಜಯಪುರ:** ಪದವಿ ಹಾಗೂ ಡಿಪ್ಲೋಮಾ ಕೋರ್ಸ್‌ಗಳ ಜುಲೈ 2025 ಆವೃತ್ತಿಯ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಕೆಗೆ ಸೆಪ್ಟೆಂಬರ್ 30ರವರೆಗೆ ಅವಧಿ ವಿಸ್ತರಿಸಲಾಗಿದೆ. ಜುಲೈ–2025ರ ಮರು ಪ್ರವೇಶಾತಿಗೆ ಪುನಃ ನೋಂದಣಿ Link://onlinerr.ignou.ac.in ಲಿಂಕ್ ಬಳಸಿಕೊಂಡು 200 ರೂ. ವಿಳಂಬ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಕುರಿತು ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ಸಂಖ್ಯೆ: 08352–252006, email: rcbijapur@ignou.ac.in ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.



# ಪಾರ್ಥನಹಳ್ಳಿ ಗ್ರಾಮಕ್ಕೆ ಉರ್ದು ಪ್ರೌಢಶಾಲೆ ಮಂಜೂರು: ಕಾಗೆ

**ಮೋಳೆ:** ಬೆಳಗಾವಿ ಜಿಲ್ಲೆಯ ಕಾಗವಾಡ ಕ್ಷೇತ್ರದ ಪಾರ್ಥನಹಳ್ಳಿ ಗ್ರಾಮಕ್ಕೆ ಸರಕಾರಿ ಉರ್ದು ಪ್ರೌಢ ಶಾಲೆ ಮಂಜೂರು ಮಾಡಿ ಕೊಡಬೇಕು ಎಂದು ನನ್ನ ಚುನಾವಣೆ ಸಂದರ್ಭದಲ್ಲಿ ಮುಸ್ಲಿಂ ಸಮಾಜ ಬಂಧುಗಳು ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಇತ್ತೀಚಿಗೆ ಉರ್ದು ಪ್ರೌಢ ಶಾಲೆ ಮಂಜೂರು ಮಾಡಿಸುವ ಮೂಲಕ ಸಮಾಜ ಬಂಧುಗಳ ಬೇಡಿಕೆ ಈಡೇರಿಸಿದ್ದೇನೆ ಎಂದು ಕಾಗವಾಡ ಶಾಸಕ ರಾಜು ಕಾಗೆ ಹೇಳಿದರು.

ಅವರು ಪಾರ್ಥನಹಳ್ಳಿ ಗ್ರಾಮದ ಮುಸ್ಲಿಂ ಸಮಾಜ ಬಾಂಧವರಿಂದ ಸನ್ಮಾನ ಸ್ವೀಕರಿಸಿ ಮಾತನಾಡುತ್ತಿದ್ದರು. ಇತ್ತೀಚಿಗೆ ರಾಜ್ಯ ಸರಕಾರ 140 ಸರಕಾರಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡಿತ್ತು ಈ ಪೈಕಿ ಕಾಗವಾಡ ಮತಕ್ಷೇತ್ರಕ್ಕೆ ನಾಲ್ಕು ಪ್ರೌಢ ಶಾಲೆಗಳು ಮಂಜೂರಾಗಿದ್ದು, ಪಾರ್ಥನಹಳ್ಳಿ ಗ್ರಾಮಕ್ಕೆ ಅವರ ಬೇಡಿಕೆಯಂತೆ ಉರ್ದು ಪ್ರೌಢ ಶಾಲೆ ಮಂಜೂರು ಮಾಡಿಸಿರುವೆ ಎಂದರು. ದೇವಸ್ಥಾನ, ಸಮುದಾಯ ಭವನಗಳಿಗಿಂತ ಶಾಲಾ, ಕಾಲೇಜುಗಳಿಗೆ ಆದ್ಯತೆ ನೀಡಿ ಆಗ ಮಾತ್ರ ಗ್ರಾಮದಲ್ಲಿ ಸಾಕ್ಷರರ ಪ್ರಮಾಣ ಸಹಜವಾಗಿಯೇ ಹೆಚ್ಚಾಗುತ್ತದೆ ಎಂದ ಅವರು ತಮ್ಮ ಮಕ್ಕಳನ್ನು ಸರಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಸೇರ್ಪಡೆ ಮಾಡುವ ಮೂಲಕ ಸರಕಾರಿ ಶಾಲೆಗಳಿಗೆ ಪ್ರೋತ್ಸಾಹ ಕೊಡಬೇಕು ಎಂದು ಮನವಿ ಮಾಡಿದರು.

ತಾಲೂಕಾ ಅಲ್ಪಸಂಖ್ಯಾತರ ಮುಖಂಡ ರಫೀಕ ಪಟೇಲ ಮಾತನಾಡಿ, ಪಾರ್ಥನಹಳ್ಳಿ ಗ್ರಾಮದಲ್ಲಿ ಮುಸ್ಲಿಂ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಕಳೆದ 25 ವರ್ಷಗಳಿಂದ ಮುಸ್ಲಿಂ ಸಮಾಜ ಬಾಂಧವರು ಉರ್ದು ಪ್ರೌಢ ಶಾಲೆ ಬೇಕು ಎಂದು ಸರಕಾರದ ಮುಂದೆ ಬೇಡಿಕೆ ಇಟ್ಟಿದ್ದರು ಎಂದ ಅವರು ನಮ್ಮ ಬೇಡಿಕೆಯನ್ನು ಶಾಸಕ ರಾಜು ಕಾಗೆ ಈಡೇರಿಸಿದ್ದು, ಪಾರ್ಥನಹಳ್ಳಿ ಮುಸ್ಲಿಂ ಸಮಾಜ ಬಾಂಧವರು ಶಾಸಕರನ್ನು ಅಭಿನಂದಿಸಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಶರೀಫ ಮುಲ್ಲಾ, ಮುಖಂಡರಾದ ರಫೀಕ ಪಟೇಲ, ಇಲಾಹಿ ಮೋಳೆ, ಇಲಾಹಿ ಬಿರಾದಾರ, ಐನುದ್ದೀನ ಬಿರಾದಾರ, ಇಸ್ಮಾಯಿಲ್ ಪಟೇಲ, ಸಿಕಂದರ ಪಟೇಲ, ತಾಜುದ್ದಿನ್ ಬಿರಾದಾರ, ರಫೀಕ ಬಿರಾದರ, ರಮೇಶ ಕಾಂಬಳೆ, ಅಸ್ಫಕ್ ಬಿರಾದರ, ಅಮೀರ ಪಟೇಲ ಸೇರಿದಂತೆ ಅನೇಕ ಮುಸ್ಲಿಂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಹುಟ್ಟುಹಬ್ಬದ ಪ್ರಯುಕ್ತ ಬೃಹತ್ ರಕ್ತದಾನ ಶಿಬಿರ

**ಬೆಳಗಾವಿ:** ನಗರದ ಸಿವಿಲ್ ಆಸ್ಪತ್ರೆಯ ಐಎಮ್‌ಎ ಆವರಣದಲ್ಲಿ ಬುಧವಾರ ಖ್ಯಾತ ವೈದ್ಯರಾದ ಡಾ. ಗಿರೀಶ ಸೋನವಾಲ್ಕರ್ ಅವರ ಹುಟ್ಟುಹಬ್ಬದ ಪ್ರಯುಕ್ತ ಡಾ. ಗಿರೀಶ ಸೋನವಾಲ್ಕರ್ ಫೌಂಡೇಶನ್ , ಲೇಕವ್ಯೂ ಆಸ್ಪತ್ರೆಯ, ಡಾ. ಗಿರೀಶ ಸೋನವಾಲ್ಕರ್ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘ ಹಾಗೂ ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ಸಂಯುಕ್ತಾಶ್ರಯದಲ್ಲಿ ಸೆ. 17 ರಂದು ನಡೆದ ಬೃಹತ್ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಶಾಸಕರಾದ ರಾಜು ಸೇಠ ಹಾಗೂ ಡಿಸಿಪಿ ನಾರಾಯಣ ಭರಮಣಿ ಅವರು ಉದ್ಘಾಟಿಸಿದರು.

ಶಾಸಕರಾದ ರಾಜು (ಆಸೀಫ್) ಸೇಠ ಅವರು ಮಾತನಾಡಿ, ರಕ್ತ ಅಂದರೆ ಜೀವ. ರಕ್ತದಾನ ಮಾಡುವುದರಿಂದ ಮನಸ್ಸಿಗೆ ತೃಪ್ತಿ ಸಿಗುತ್ತದೆ. ಯುವಜನತೆಯಲ್ಲಿ ರಕ್ತದಾನದ ಮಹತ್ವವನ್ನು ತಿಳಿಸಿ ಅವರಲ್ಲಿ ರಕ್ತದಾನದ ಪ್ರಜ್ಞೆಯನ್ನು ಬೆಳೆಸಬೇಕು. ರಕ್ತದಾನದಿಂದ ಆರೋಗ್ಯಕ್ಕೆ ಹೆಚ್ಚು ಪ್ರಯೋಜನ ಇದೆ ಎಂದು ಹೇಳಿದರು.

ಖ್ಯಾತ ವೈದ್ಯರಾದ ಡಾ. ಗಿರೀಶ ಸೋನವಾಲ್ಕರ್ ಹುಟ್ಟುಹಬ್ಬದ ಪ್ರಯುಕ್ತ ಬೃಹತ್ ರಕ್ತದಾನ ಹಾಗೂ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಿರುವುದು ಅತೀವ ಸಂತೋಷವಾಗಿವೆ. ಲೇಕವ್ಯೂ ಆಸ್ಪತ್ರೆಯೂ ಸದಾ ಒಂದಿಲ್ಲೊಂದು ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಳ್ಳುವ ಮೂಲಕ ಸಮಾಜಕ್ಕೆ ಮಾದರಿಯಾಗಿದೆ ಎಂದರು.

ರಕ್ತ ಮನುಷ್ಯನ ದೇಹದ ಅಮೂಲ್ಯವಾದ ವಸ್ತು. ಅಪಘಾತ, ಅನಾಹುತ, ಶಸ್ತ್ರ ಚಿಕಿತ್ಸೆ ಮುಂತಾದ ರೋಗಿಗಳಿಗೆ ರಕ್ತದ ಅಗತ್ಯ ಇರುತ್ತದೆ. ಇಂತಹ ಸಂದರ್ಭದಲ್ಲಿ ರೋಗಿಗಳಿಗೆ ರಕ್ತ ಕೊಡಬೇಕಾಗುತ್ತದೆ. ದಾನಿಗಳಿಂದ ಸಂಗ್ರಹಿಸಿದ ರಕ್ತವನ್ನು ರೋಗಿಗಳಿಗೆ ನೀಡಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಡಿಸಿಪಿ ನಾರಾಯಣ ಭರಮಣಿ, ಸಿಪಿಐ ಬಿ .ಆರ್. ಗಡ್ಡೇಕರ್ , ಬೆಳಗಾವಿ ರಕ್ತದಾನ ಕೇಂದ್ರ ವೈದ್ಯಾಧಿಕಾರಿ ವಿಜಯಕುಮಾರ ತೆಲಸಂಗ, ಪ್ರಕಾಶ ಸೋನವಾಲ್ಕರ್,ಅಮನ್ ಶೇಠ, ತಾಯಿ ಲಕ್ಷ್ಮಿಬಾಯಿ ಸೋನವಾಲ್ಕರ್ , ಶ್ವೇತಾ ಸೋನವಾಲ್ಕರ್, ಅನೀಶ ಸೋನವಾಲ್ಕರ್ , ನ್ಯಾಯವಾದಿ

ರವಿ ಜುಗನ್ನವರ, ವಿಜಯ ಸೋನವಾಲ್ಕರ್, ರಂಗನಾಥ ಮಳಲಿ ಹಾಗೂ ಸಿಬ್ಬಂದಿ, ಅಭಿಮಾನಿಗಳು ಇತರರು ಇದ್ದರು.



**ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್‌ಗಳ ನಿರ್ಗಮನ ಪಥಸಂಚಲನ ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾದ ಆಲೋಕ್ ಕುಮಾರ್ ಕರೆ**

# ಪ್ರತಿ ಪೇದೆಯು ಜನಪರ, ಜನಸ್ನೇಹಿ ಪೊಲೀಸ್ ಆಗಬೇಕು

**ಧಾರವಾಡ:** ಪೊಲೀಸ್ ವ್ಯವಸ್ಥೆಗೆ ಸೇರುವ ಪ್ರತಿ ಸಿಬ್ಬಂದಿ ಸಾರ್ವಜನಿಕ ಸೇವಕರಾಗಬೇಕು. ಪೀಡಕರಾಗಬಾರದು. ಸಾರ್ವಜನಿಕರಿಗೆ ಜನಸ್ನೇಹಿಯಾಗಿ, ಜನಪರವಾಗಿ ತಮ್ಮ ವೃತ್ತಿ ನಿರ್ವಹಿಸಿ, ಯಶಸ್ವಿಯಾಗಬೇಕು ಎಂದು ರಾಜ್ಯ ಪೊಲೀಸ್ ಇಲಾಖೆಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾದ ಆಲೋಕ್ ಕುಮಾರ್ ಅವರು ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ಕಲಘಗಿ ರಸ್ತೆಯ ಗಿರಿನಗರದಲ್ಲಿರುವ ಪೊಲೀಸ್ ತರಬೇತಿ ಶಾಲೆಯ ಕವಾಯತು ಮೈದಾನದಲ್ಲಿ ಜರುಗಿದ 2ನೇ ತಂಡದ ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್‌ಗಳ ನಿರ್ಗಮನ ಪಥಸಂಚಲನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಮಾತನಾಡಿದರು.

ತರಬೇತಿ ಗುಣಮಟ್ಟದ ಮೇಲೆ ಪೊಲೀಸ್ ಪೇದೆಗಳ ಸೇವೆಯ ಸಾಮರ್ಥ್ಯ ಅವಲಂಬಿಸಿರುತ್ತದೆ. ಕಳಪೆಗುಣಮಟ್ಟದ ತರಬೇತಿ ನೀಡಿದರೆ ಉತ್ತಮವಾದ ಬದ್ಧತೆಯ ಕರ್ತವ್ಯ ನಿರೀಕ್ಷೆ ಮಾಡುವುದು ಅಸಾಧ್ಯ ಎಂದು ಅವರು ಹೇಳಿದರು.

ಅಧಿಕಾರಿ ಹಂತದ ಪೊಲೀಸ್‌ರಿಗೆ ಇಲಾಖೆಯ ತರಬೇತಿಗಳು ಕೇಂದ್ರಿಕೃತವಾಗಿವೆ. ಪೊಲೀಸ್ ಪೇದೆಗಳಿಗೆ ಉತ್ತಮವಾದ ತರಬೇತಿ ನೀಡಿದರೆ, ಪೊಲೀಸ್ ವ್ಯವಸ್ಥೆ ಬಲವಾಗುತ್ತದೆ. ತರಬೇತಿಯಲ್ಲಿ ಪಠ್ಯಕ್ರಮ, ಪ್ರಾಯೋಗಿಕ ತರಬೇತಿ, ದೈಹಿಕ ತರಬೇತಿ ಅಳವಡಿಸಲಾಗಿದೆ. ಈಗ



ತರಬೇತಿಯಲ್ಲಿ ಆಮೂಲಾಗ್ರ ಪರಿವರ್ತನೆ ತರಲಾಗಿದೆ ಎಂದು ಅವರು ಹೇಳಿದರು.

ಪೊಲೀಸ್ ತರಬೇತಿ ಪಡೆದ ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆದು, ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸಬೇಕು. ಯಾವುದೇ ಅಕ್ರಮಗಳಲ್ಲಿ, ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿ ಆಗಬಾರದು. ಅಪರಾಧಿಗಳಿಂದ ದೂರವಿದ್ದು, ಶಿಷ್ಟರನ್ನು ರಕ್ಷಿಸಬೇಕು. ಕಾನೂನು ಪಾಲನೆ ನಮ್ಮ ಆದ್ಯ ಕರ್ತವ್ಯವಾಗಬೇಕು ಎಂದು ಅವರು ತಿಳಿಸಿದರು.

ಮುಂದಿನ ಐದು ವರ್ಷದಲ್ಲಿ ಯಾವುದೇ ಅಪರಾಧ ಪ್ರಕರಣದಲ್ಲಿ ಭಾಗಿ ಆಗುವದಿಲ್ಲ ಎಂಬ ವಾರಂಟಿ ನೀಡಬೇಕು. ಪ್ರತಿಜ್ಞಾ ವಿಧಿ ಸ್ವೀಕರಿಸಿಯೂ ಓಥ್ ಬ್ರಿಚ್ ಮಾಡಿದರೆ, ಅಂತವರ ವಿರುದ್ಧ ಚಾರ್ಜ್ ಮಾಡಿ ಕೇಸ್ ದಾಖಲಿಸಬೇಕು. ಈ ಕುರಿತು ತರಬೇತಿ ಶಾಲೆಯ ಮುಖ್ಯಸ್ಥರು ಲಿಖಿತವಾಗಿ ಹೇಳಿಕೆ ಪಡೆದು, ಪ್ರಶಿಕ್ಷಣಾರ್ಥಿಗಳು ಸೇವೆಗೆ ಸೇರುವ ಪೊಲೀಸ್ ಠಾಣೆಗಳಿಗೆ ಕಳುಹಿಸಬೇಕು. ಇದರಿಂದ ಅವರಿಗೆ ಎಚ್ಚರಿಕೆ ಇರುತ್ತದೆ ಎಂದು ಅವರು ಸಲಹೆ ನೀಡಿದರು.

ಉತ್ತಮ ಸೇವೆಯ ಭರವಸೆ ನೀಡಿ, ನಾಳೆಯಿಂದ ಸೇವೆಗೆ ಸೇರಬೇಕು ಎಂದು ಅವರು ತಿಳಿಸಿದರು.

ಪೊಲೀಸ್ ವ್ಯವಸ್ಥೆಯಿಂದ ಸಮಾಜಕ್ಕೆ, ಸಾರ್ವಜನಿಕರಿಗೆ ರಕ್ಷಣೆಯ ಬಲವಾದ ಭರವಸೆ ಇದೆ. ಪೊಲೀಸ್ ಇರುವುದು ಸಾರ್ವಜನಿಕರ ರಕ್ಷಣೆಗಾಗಿ, ಸಾರ್ವಜನಿಕ ಆಸ್ತಿಪಾಸ್ತಿ, ಜೀವ ರಕ್ಷಣೆಗಾಗಿ ನಮ್ಮ ಕರ್ತವ್ಯವಿರಬೇಕು. ಬಡವರ, ಮಹಿಳೆಯರ, ಅಸಹಾಯಕರ, ಮಕ್ಕಳ ರಕ್ಷಣೆ ಮಾಡಬೇಕು ಎಂದರು.

ಯಾವುದೇ ಸಂದರ್ಭದಲ್ಲಿ ಬಂದೋಬಸ್ತ ಸ್ಥಳದಲ್ಲಿ, ಸಾರ್ವಜನಿಕ ಸ್ಥಳಗಳಲ್ಲಿ ಅನಗತ್ಯ ಬಲ ಪ್ರಯೋಗ ಮಾಡಬಾರದು. ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಸಮಸ್ಯೆ ಬಗೆಹರಿಸಬೇಕು ಎಂದು ಅವರು ಹೇಳಿದರು.

ಪೊಲೀಸ್ ಇಲಾಖೆಯಲ್ಲಿ ವೈಯಕ್ತಿಕ ಮತ್ತು ವೃತ್ತಿಪರ ಜೀವನದಲ್ಲಿ ಹೊಂದಾಣಿಕೆ ಇರಬೇಕು. ಬರುವ ಸಂದಿಗ್ಧ ಸಂದರ್ಭಗಳನ್ನು ಸಮರ್ಥವಾಗಿ ಎದುರಿಸಿ, ಸಮಾಜದಲ್ಲಿ ಮಾದರಿ ಆಗಿ ನಿಲ್ಲಬೇಕು ಎಂದರು.

ಆರೋಗ್ಯವು ಮುಖ್ಯ. ಪ್ರತಿಯೊಬ್ಬರು ಮಾನಸಿಕ ಮತ್ತು ಶಾರೀರಿಕ ಆರೋಗ್ಯ ಕಾಪಾಡಿಕೊಳ್ಳಬೇಕು. ಪ್ರತಿದಿನ ಕನಿಷ್ಠ 45 ನಿಮಿಷ ವ್ಯಾಯಾಮ, ಯೋಗ ಮಾಡಬೇಕು ಎಂದರು. ಎಲ್ಲ ಪೊಲೀಸ್ ಸಿಬ್ಬಂದಿಗಳು ಜನಪರ, ಜನಸ್ನೇಹಿ ಪೊಲೀಸ್ ಆಗಬೇಕು. ತರಬೇತಿಯಲ್ಲಿ ನೀಡಿರುವ ಗುಣಮಟ್ಟದ ಅಂಶಗಳನ್ನು, ನೀತಿಗಳನ್ನು ವೃತ್ತಿ ಜೀವನದಲ್ಲಿ ಅಳವಡಿಸಕೊಳ್ಳಬೇಕೆಂದು ಅವರು ಹೇಳಿದರು.

ಧಾರವಾಡ ಪೊಲೀಸ್ ತರಬೇತಿ ಶಾಲೆಯ



ಪ್ರಾಂಶುಪಾಲರಾದ ಪೊಲೀಸ್ ಅಧೀಕ್ಷಕ ಎಂ.ಎಂ. ಯಾದವಾಡ ಅವರು ಸ್ವಾಗತಿಸಿ, ತರಬೇತಿ ಶಾಲೆಯ ವರದಿ ವಾಚನ ಮಾಡಿದರು.

ಸರ್ವೋತ್ತಮ ಪ್ರಶಸ್ತಿ ಶ್ರೀಶೈಲ ಚಿನಗುಂಡಿ ಅವರು ಪಡೆದರು. ನಂತರ ಸ್ಪೂರ್ತಿ ಸ್ಮರಣಸಂಚಿಕೆ ಬಿಡುಗಡೆ ಕಾರ್ಯಕ್ರಮ ನೇರವೇರಿತು. ಸಿಪಿಐ ರಮೇಶ ಗೋಕಾಕ ಅವರು ವಂದಿಸಿದರು. ಆಕಾಶವಾಣಿ ಹಿರಿಯ ಉದ್ಘೋಷಕಿ ಮಾಯಾ ರಾಮನ್ ಅವರು ಹಾಗೂ ಮಹಾಂತೇಶ ಸಣ್ಣಶೆಟ್ಟಿ ಅವರು ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಪ್ರಶಿಕ್ಷಣಾರ್ಥಿಗಳ ಪಾಲಕರು, ಸಾರ್ವಜನಿಕರು ಭಾಗವಹಿಸಿದ್ದರು.

## ಅಪ್ರಾಪ್ತ ಯುವಕನ ವಿವಾಹ: ಪ್ರಕರಣ ದಾಖಲು

**ಕೊಪ್ಪಳ:** ಗಂಗಾವತಿ ನಗರ ವ್ಯಾಪ್ತಿಯಲ್ಲಿ 2024 ರ ಸೆಪ್ಟೆಂಬರ್ 17 ರಂದು ಅಪ್ರಾಪ್ತ ಯುವಕನಿಗೆ ಮದುವೆ ಮಾಡಿರುವ ಕುರಿತು ದೂರು ಬಂದ ಹಿನ್ನೆಲೆಯಲ್ಲಿ, ಪರಿಶೀಲನೆ ನಂತರ ಇದನ್ನು ಬಾಲ್ಯ ವಿವಾಹವೆಂದು ಪರಿಗಣಿಸಿ, ಬಾಲ್ಯವಿವಾಹಕ್ಕೆ ಬೆಂಬಲ, ಪ್ರೋತ್ಸಾಹ ನೀಡಿದವರು, ಸಹಕರಿಸಿದವರ ವಿರುದ್ಧ ಗಂಗಾವತಿ ನಗರ ಠಾಣೆಯಲ್ಲಿ ಪ್ರಕರಣ ಸಂಖ್ಯೆ: 0187/2025 ರಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ–2006 ಕರ್ನಾಟಕ ತಿದ್ದುಪಡಿ–2016 ರಡಿಯಲ್ಲಿ ಮಕ್ಕಳ ಸಹಾಯವಾಣಿಯ ಸಂಯೋಜಕರ ಮೂಲಕ ಸೆಪ್ಟೆಂಬರ್ 15 ರಂದು ದೂರು ದಾಖಲಿಸಲಾಗಿದೆ.

ಗಂಗಾವತಿ ನಗರ ವ್ಯಾಪ್ತಿಯಲ್ಲಿ 2024 ರ ಸೆಪ್ಟೆಂಬರ್ 17 ರಂದು ಅಪ್ರಾಪ್ತ ಯುವಕನಿಗೆ ವಿವಾಹ ಮಾಡಿದ್ದು, ವಿವಾಹವನ್ನು ಗಂಗಾವತಿ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ನೋಂದಾಯಿಸಿ, ವಿವಾಹ ನೋಂದಣಿ ಪ್ರಮಾಣ ಪತ್ರವನ್ನು ಪಡೆದುಕೊಂಡಿದ್ದಾರೆ. ಆದರೆ ವಿವಾಹದ ಸಂದರ್ಭದಲ್ಲಿ ಯುವಕನಿಗೆ 20 ವರ್ಷ, 6 ತಿಂಗಳು ಏಳು ದಿನಗಳು ಆಗಿದ್ದು, ಅಪ್ರಾಪ್ತ ವಯಸ್ಸಿನ ಯುವಕನಿಗೆ ವಿವಾಹವನ್ನು ಮಾಡಿರುತ್ತಾರೆ. ಈ ವಿವಾಹ ಮಾಡಿದವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿದುವಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ.ರಾಮತ್ನಾಳ ಅವರಿಗೆ ಮಾಹಿತಿ ನೀಡಲಾಗಿತ್ತು. ಆಯೋಗದ ಸದಸ್ಯರು ಈ ಬಗ್ಗೆ ವಿಚಾರಣೆ ನಡೆಸುವಂತೆ ಜಿಲ್ಲಾ ಮಕ್ಕಳ ಹಕ್ಕುಗಳ ರಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದರು.

ಆಯೋಗದ ನಿರ್ದೇಶನದನ್ವಯ ವಿವಾಹ ನೋಂದಣಿ ಅರ್ಜಿ ಮತ್ತು ಸಲ್ಲಿಸಿದ ದಾಖಲಾತಿಗಳನ್ನು ಮತ್ತು ಶಾಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ ವಿವಾಹ ಸಂದರ್ಭದಲ್ಲಿ ಯುವಕನು ಅಪ್ರಾಪ್ತ ವಯಸ್ಕನೆಂದು ಕಂಡುಬಂದಿರುತ್ತದೆ. ಆದ್ದರಿಂದ ಬಾಲ್ಯವಿವಾಹಕ್ಕೆ ಬೆಂಬಲ, ಪ್ರೋತ್ಸಾಹ ನೀಡಿದವರು, ಸಹಕರಿಸಿದವರ ವಿರುದ್ಧ ಗಂಗಾವತಿ ನಗರ ಠಾಣೆಯಲ್ಲಿ ಮಕ್ಕಳ ಸಹಾಯವಾಣಿಯ ಸಂಯೋಜಕರ ಮೂಲಕ ಪ್ರಕರಣ ದಾಖಲಿಸಲಾಗಿದೆ. ಆದ್ದರಿಂದ ಅಪ್ರಾಪ್ತ ವಯಸ್ಸಿನವರಿಗೆ ವಿವಾಹ ಮಾಡಿದವರಿಗೆ, ಭಾಗವಹಿಸಿದವರಿಗೆ, ನೆರವೇರಿಸಿದವರಿಗೆ ಹಾಗೂ ಪ್ರೋತ್ಸಾಹಿಸಿದವರಿಗೆ ಕನಿಷ್ಟ 1 ರಿಂದ 2 ವರ್ಷಗಳ ಜೈಲು ಶಿಕ್ಷೆ ಮತ್ತು ರೂ.1 ಲಕ್ಷ ರೂಪಾಯಿ ದಂಡವನ್ನು ವಿಧಿಸಬಹುದಾಗಿದ್ದು, ಬಾಲ್ಯವಿವಾಹವನ್ನು ಮಾಡಿ ಶಿಕ್ಷೆಗೆ ಗುರಿಯಾಗಬೇಡಿ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ



**ಧಾರವಾಡ:** ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರವನ್ನು ಕೆಸಿಡಿ ಕಾಲೇಜು ಮೈದಾನದಲ್ಲಿ ಸೆಪ್ಟೆಂಬರ 15, 2025 ರಂದು ಬೆಳಿಗ್ಗೆ ವೇದಿಕೆ ಕಾರ್ಯಕ್ರಮ ಜರುಗಿಸಲಾಯಿತು.

ಸಾರ್ವಜನಿಕವಾಗಿ ಸಂವಿಧಾನ ಪೀಠಿಕೆ ಓದಿ, ಕಾರ್ಯಕ್ರಮದ ಪ್ರಯುಕ್ತ ಧಾರವಾಡದಿಂದ ಬೆಂಗಳೂರಿನವರೆಗೆ ರಸ್ತೆ ಮೂಲಕ 10 ಅಭ್ಯರ್ಥಿಗಳಿಂದ ಬೈಕ ರ‍್ಯಾಲಿ ಮಾಡಲಾಯಿತ್ತು. ಚಿತ್ರಕಲೆ, ಭಾಷಣ ಹಾಗೂ ಛಾಯಾಚಿತ್ರ ಸ್ಪರ್ಧೆ ಕಾರ್ಯಕ್ರಮ ಆಯೋಜಿಸಲಾಯಿತು, ಸದರಿ ಸ್ಪರ್ಧೆಯಲ್ಲಿ 155 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸದರಿ ಕಾರ್ಯಕ್ರಮದಲ್ಲಿ 10 ವಿವಿಧ ರೀತಿಯ ಕಲಾ ತಂಡಗಳು ಭಾಗವಹಿಸಿದವು, 1,200 ಕ್ಕೂ ಅಧಿಕ ಜನರು ಕಾರ್ಯಕ್ರಮದಲ್ಲಿ ಭಾಗವಹಿಸಿದರು. 1,000 ಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೈಕಲ್ ಜಾಥಾದಲ್ಲಿ ಭಾಗವಹಿಸಿದ್ದರು. ಸೈಕಲ್ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಲು 524 ಜನರು ಆನ್‌ಲೈನ್‌ನಲ್ಲಿ ಮೂಲಕ ನೊಂದಣಿ ಮಾಡಿದ್ದರು.

ಸಮಾಜ ಕಲ್ಯಾಣ ಇಲಾಖೆ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳು ಸಾಂಸ್ಕೃತಿಕ ನೃತ ಪ್ರದರ್ಶನ ಮಾಡಿದರು. ಚಿತ್ರಕಲೆ, ಭಾಷಣ ಹಾಗೂ ಛಾಯಾಚಿತ್ರ ಸ್ಪರ್ಧೆ ಕಾರ್ಯಕ್ರಮದಲ್ಲಿ ಭಾಗವಹಿಸಿದವರಿಗೆ ಪ್ರಮಾಣ ಪತ್ರ ನೀಡಲಾಯಿತ್ತು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಟಣಕನಕಲ್ ಐಟಿಐ: ಪ್ರವೇಶಕ್ಕೆ ಅವಕಾಶ

**ಕೊಪ್ಪಳ:** ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಕೊಪ್ಪಳ (ಟಣಕನಕಲ್, ಕುಷ್ಟಗಿ ರಸ್ತೆ, ಕೊಪ್ಪಳ) ಇಲ್ಲಿ ವಿವಿಧ ವೃತ್ತಿಗಳ ಖಾಲಿ ಇರುವ ಸ್ಥಾನಗಳಿಗೆ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಎಸ್.ಎಸ್.ಎಲ್.ಸಿ ಉತ್ತೀರ್ಣಗೊಂಡ ಅಭ್ಯರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದು.

ಕೊಪ್ಪಳ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಆಸಕ್ತರು ತಮ್ಮ ಆಧಾರ್ ಕಾರ್ಡ್, ಫೋಟೋ, ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳು ಹಾಗೂ 2 ಸೆಟ್ ಝೆರಾಕ್ಸ್ ಪ್ರತಿಗಳೊಂದಿಗೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಕೊಪ್ಪಳ (ಟಣಕನಕಲ್, ಕುಷ್ಟಗಿ ರಸ್ತೆ, ಕೊಪ್ಪಳ) ಹಾಗೂ ಮೊಬೈಲ್ ಸಂ: 9449134905, 8660977220, 9008536895, 9448813422, 9742532353, 9945577155, 9945672606 ಇವರಿಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಎಂಎಫ್‌ಎಂಇ ಯೋಜನೆ ಇಂದು ಅರಿವು ಮೂಡಿಸುವ ಕಾರ್ಯಕ್ರಮ

**ಕೊಪ್ಪಳ:** ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆಯು (ಕಒಈಒಇ) ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರ ಮುಂದಾಳತ್ವದಲ್ಲಿ ಸೆಪ್ಟೆಂಬರ್ 18 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಒಂದು ಮಹತ್ವಾಕಾಂಕ್ಷೆ ಯೋಜನೆಯಾಗಿದ್ದು, ಯೋಜನೆಯು ರಾಜ್ಯದಲ್ಲಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಯ ಅಭಿವೃದ್ಧಿಗೆ ಸುವರ್ಣಾವಕಾಶ ಕಲ್ಪಿಸುತ್ತದೆ. ಈ ಯೋಜನೆಯು ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಸ್ಥಾಪನೆಗೆ ಉದ್ದಿಮೆದಾರರಿಗೆ ಮತ್ತು ರೈತರ ಗುಂಪುಗಳಿಗೆ, ಸ್ವ–ಸಹಾಯ ಸಂಘಗಳಿಗೆ ಬ್ಯಾಂಕ್ ಸಾಲ ಸಂಪರ್ಕಿತ ಸಹಾಯವನ್ನು ಒದಗಿಸುತ್ತಿದ್ದು, ಯೋಜನೆಯಡಿಯಲ್ಲಿ ಶೇ. 35 ರಷ್ಟು ಸಹಾಯಧನ (ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲು 60:40, ಗರಿಷ್ಠ ರೂ. 15 ಲಕ್ಷ) ಸಹಾಯಧನ ಒದಗಿಸುತ್ತಿದೆ.

ರಾಜ್ಯ ಸರ್ಕಾರವು ಈ ಯೋಜನೆಯನ್ನು ಮತ್ತಷ್ಟು ಆಕರ್ಷಕಗೊಳಿಸಲು ಹಾಗೂ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಟಾನ ಮಾಡುವ ನಿಟ್ಟಿನಲ್ಲಿ, ಜಿಲ್ಲೆಯಲ್ಲಿ ವ್ಯಾಪಕ ಪ್ರಚಾರ ನೀಡುವ ಉದ್ದೇಶದಿಂದ, ಯೋಜನೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮಕ್ಕೆ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದರ ಮೂಲಕ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಂಗಾವತಿ ನಗರಸಭೆ: ಅರ್ಜಿ ಆಹ್ವಾನ

**ಕೊಪ್ಪಳ:** ಗಂಗಾವತಿ ನಗರದ ಆಸ್ತಿ ಹಾಗೂ ನೀರಿನ ತೆರಿಗೆಯನ್ನು ಸಂಗ್ರಹಿಸಲು ನಗರಸಭೆ ವ್ಯಾಪ್ತಿಯ ಡೇ–ನಲ್ಮ್ ಅಭಿಯಾನದಡಿ ನೋಂದಾಯಿಸಲ್ಪಟ್ಟ ಅರ್ಹ ಹಾಗೂ ಆಸಕ್ತ ಮಹಿಳಾ ಸ್ವ–ಸಹಾಯ ಗುಂಪುಗಳನ್ನು ತೆರಿಗೆ ವಸೂಲಾತಿಗಾಗಿ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಿದೆ.

ಗಂಗಾವತಿ ನಗರ ಸ್ಥಳೀಯ ಸಂಸ್ಥೆಯಲ್ಲಿನ ನೀರಿನ ಬಳಕೆಯ ಹಿಂದಿನ ಬಾಕಿ ಮೊತ್ತ ಬಡ್ಡಿ ಸಹಿತವಾಗಿ ಮತ್ತು ಪುಸ್ತಕ ವಾರ್ಷಿಕ ಸಹಿತವಾಗಿ ವಸೂಲಿ ಮಾಡುವುದು ಹಾಗೂ ಬಹುದಿನಗಳಿಂದ ಬಾಕಿ ಇರುವ ಆಸ್ತಿ ತೆರಿಗೆ ವಾರ್ಷಿಕ ಬೇಡಿಕೆಗಳಿಗೆ ಅನುಗುಣವಾಗಿ ಸಮರ್ಪಕ ವಸೂಲಿ ಮಾಡಲು ಸ್ಥಳೀಯ ಮಹಿಳಾ ಸ್ವ–ಸಹಾಯ ಗುಂಪುಗಳ ಸೇವೆಯನ್ನು ಪಡೆಯಲು ಮತ್ತು ಸ್ವ–ಸಹಾಯ ಗುಂಪುಗಳಿಗೆ ವಸೂಲಾದ ಮೊತ್ತದಲ್ಲಿ ಶೇ. 5 ರಷ್ಟನ್ನು ಪ್ರೋತ್ಸಾಹ ಧನದ ರೂಪದಲ್ಲಿ ನೀಡಲು ಸರ್ಕಾರ ಆದೇಶಿಸಿದೆ.

ಅದರಂತೆ ಅರ್ಜಿಗಳನ್ನು ಆಹ್ವಾನಿಸಿದ್ದು, ಆಸಕ್ತರು ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 15 ರೊಳಗೆ ಡೇ–ನಲ್ಮ್ ಅಭಿಯಾನದಡಿ ನೋಂದಾಯಿಸಲ್ಪಟ್ಟ ಅರ್ಹ ಹಾಗೂ ಆಸಕ್ತ ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರು ಅರ್ಜಿ ಸಲ್ಲಿಸಬೇಕು. ಅರ್ಹತಾ ಮಾನದಂಡಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ಪೌರಾಯುಕ್ತರು, ನಗರಸಭೆ ಗಂಗಾವತಿ ರವರನ್ನು ಕಛೇರಿ ಅವಧಿಯಲ್ಲಿ ಸಂಪರ್ಕಿಸಬಹುದು ಎಂದು ಗಂಗಾವತಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

**ಕೊಪ್ಪಳ:** ಕೊಪ್ಪಳ ತಾಲ್ಲೂಕಿನ ದದೇಗಲ್‌ನಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಡಿ.ಟಿ.ಡಿ.ಎಮ್, ಡಿ.ಎಮ್.ಸಿ.ಹೆಚ್ ಮತ್ತು ಇ & ಸಿ ವಿಭಾಗದಲ್ಲಿ ಖಾಲಿ ಇರುವ ಅತಿಥಿ ಉಪನ್ಯಾಸಕರ ತಾತ್ಕಾಲಿಕ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರಥಮ ದರ್ಜೆಯಲ್ಲಿ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಪದವಿ ಹೊಂದಿದ ಮತ್ತು ಡಿ.ಟಿ.ಡಿ.ಎಮ್ ವಿಭಾಗಕ್ಕೆ ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ ಆಧಾರಿತ ಬಿ.ಇ ಪದವಿ ಹೊಂದಿದ ಆಕ್ತ ಅಭ್ಯರ್ಥಿಗಳು ಸೆಪ್ಟೆಂಬರ್ 24 ರೊಳಗಾಗಿ ಜಿಟಿಟಿಸಿ ಕೊಪ್ಪಳ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯ ಅಥವಾ ಮೌನೇಶ್, ವಿಭಾಗದ ಮುಖ್ಯಸ್ಥರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಗದಗ ರಸ್ತೆ, ದದೇಗಲ್, ಮೊ.ಸಂ. 7507094445 ಇವರನ್ನು ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೇನು ಕೃಷಿ ತರಬೇತಿಗೆ ನೋಂದಣಿ ಪ್ರಾರಂಭ

**ಧಾರವಾಡ:** ಧಾರವಾಡ ತೋಟಗಾರಿಕೆ ಇಲಾಖೆ ಹಾಗೂ ಪ್ರಾದೇಶಿಕ ತೋಟಗಾರಿಕಾ ಸಂಶೋಧನಾ ಮತ್ತು ವಿಸ್ತರಣೆ ಕೇಂದ್ರ ಇವರ ಸಹಯೋಗದೊಂದಿಗೆ ರೈತರ ಸರ್ವತ್ತೋಮುಖ ಅಭಿವೃದ್ಧಿಗಾಗಿ ಜೇನು ಕೃಷಿ ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 22, 2025 ರಂದು ಹಮ್ಮಿಕೊಳ್ಳಲಾಗಿದೆ. ವಿಶೇಷವಾಗಿ ವೈಜ್ಞಾನಿಕ ಜೇನು ಸಾಕಾಣಿಕೆ, ಜೇನಿನ ಉತ್ಪನ್ನಗಳು, ರಾಣಿ ಕಣಗಳ ಉತ್ಪಾದನೆ, ಇಳುವರಿ ಹೆಚ್ಚಿಸಲು ಜೇನು ನೊಣಗಳ ಪಾತ್ರ, ಸ್ಥಳಾಂತರ ಜೇನು ಕೃಷಿ ಹಾಗೂ ಜೇನಿನ ಶತ್ರುಗಳ ನಿರ್ವಹಣೆ, ಜೇನು ಸಾಕಾಣಿಕೆಯ ಪ್ರಾತ್ಯಕ್ಷಿಕೆಯನ್ನು ಧಾರವಾಡ ತೋಟಗಾರಿಕೆ ಇಲಾಖೆಯ ಸಭಾ ಭವನದಲ್ಲಿ ನೀಡಲಾಗುವುದು. ಜೇನು ಪೆಟ್ಟಿಗೆಯನ್ನು ಸಹಾಯಧನದಲ್ಲಿ ವಿತರಿಸಲಾಗುವುದು. ಈ ತರಬೇತಿಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ರೈತರು ಅಳ್ನಾವರ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆಯ ಅಧಿಕಾರಿ ಶಿವರಾಜ ಸತ್ತಿಗೇರಿ ಅವರ ಮೊಬೈಲ್ ಸಂಖ್ಯೆ: 9353895519 ಗೆ ಸೆಪ್ಟೆಂಬರ್ 21, 2025 ರೊಳಗಾಗಿ ಹೆಸರು ನೊಂದಾಯಿಸಬೇಕೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ತರಬೇತಿಗೆ ನೋಂದಣಿ ಪ್ರಾರಂಭ

**ಧಾರವಾಡ:** 2025–26 ನೇ ಸಾಲಿನ ರಾಜ್ಯ ವಲಯ ಯೋಜನೆಯಡಿ ಆರು ದಿನಗಳ (ಸೆಪ್ಟೆಂಬರ್ 22 ರಿಂದ 27, 2025 ರ ವರಗೆ) ರೈತರ ವಿಶೇಷ ತರಬೇತಿಯನ್ನು ಧಾರವಾಡ ಜಿಲ್ಲೆಯ 30 ಜನ ರೈತರಿಗೆ ಕೃಷಿ ಯಂತ್ರೋಪಕರಣಗಳ ನಿರ್ವಹಣೆ ಮತ್ತು ದುರಸ್ತಿ (ಟ್ರ್ಯಾಕ್ಟರ್, ಪವರ್‌ಟಿಲ್ಲರ್, ಸಸ್ಯ ಸಂರಕ್ಷಣಾ ಉಪಕರಣ, ಡೀಸಲ್ ಪಂಪ್‌ಸೆಟ್ ಇತ್ಯಾದಿ) ವಿಷಯ ಕುರಿತು ಉಚಿತ ತರಬೇತಿಯನ್ನು ಧಾರವಾಡ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗಿದೆ. ಆಸಕ್ತ ಧಾರವಾಡ ಜಿಲ್ಲೆಯ ಯುವ ರೈತರು ಸೆಪ್ಟೆಂಬರ್ 18, 2025 ರೊಳಗಾಗಿ ದೂರವಾಣಿ ಸಂಖ್ಯೆ: 0836–2978374, 8277931382, 9902133054, 8073408747 ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕೆಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಗದಗ:** ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಕರ್ನಾಟಕ ರಾಜ್ಯಾದ್ಯಂತ ಚರ್ಮ ಕುಶಲ ಕರ್ಮಿಗಳಿಗಾಗಿ 2025–26 ನೇ ಸಾಲಿನ ಕ್ರಿಯಾ ಯೋಜನೆಯ ಪ್ರಕಾರ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 10 ಕೊನೆಯ ದಿನವಾಗಿದ್ದು ಗದಗ ಜಿಲ್ಲೆಯ ಚರ್ಮ ಕುಶಲಕರ್ಮಿಗಳ ಸಮುದಾಯಗಳಾದ ಮಾದಿಗ, ಸಮಗಾರ, ಡೋರ, ಮಚಗಾರ, ಜನಾಂಗದವರಿಗೆ ಮಾತ್ರ ಈ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿದೆ.

ಕರ್ನಾಟಕ ಒನ್ ಮೂಲಕ ಅಥವಾ ಗ್ರಾಮ ಒನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಯೋಜನೆಗಳ ವಿವರ** : ನೇರ ಸಾಲ ಯೋಜನೆ ; ಚರ್ಮ ಕುಶಲ ಕರ್ಮಿಗಳಿಗೆ ಹೊಸ ತಂತ್ರಜ್ಞಾನ ವಿನ್ಯಾಸಗಳು ಮಾರುಕಟ್ಟೆ ಬೇಡಿಕೆಗಳ ಬಗ್ಗೆ ದೆಹಲಿ, ತಮಿಳು ನಾಡು , ಮಹಾರಾಷ್ಟ್ರ , ಉತ್ತರ ಪ್ರದೇಶ, ಮತ್ತು ಪಶ್ಚಿಮ ಬಂಗಾಳದಲ್ಲಿ ತರಬೇತಿ ಪಡೆಯಲು ಅಧ್ಯಯನ ಪ್ರವಾಸ ಯೋಜನೆ; ವಸತಿ ಯೋಜನೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ಸಂಯೋಜಕರ ಕಚೇರಿ, ( ಜಿಲ್ಲಾಡಳಿತ ಭವನ ಗದಗ ಜಿಲ್ಲೆ ರೂಂ 122/1 ಸಮಾಜ ಕಲ್ಯಾಣ ಇಲಾಖೆ ( ಅಲೆಮಾರಿ ಅಭಿವೃದ್ಧಿ ಕೋಶ) ಸಂಪರ್ಕಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ: 9900887904, 9620251984 ಸಂಪರ್ಕಿಸಬಹುದಾಗಿದೆ ಎಂದು ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

**ಬಾಲ್ಯವಿವಾಹ ನಿಷೇಧ ಕಾಯ್ದೆ-2006: ಆರೋಗ್ಯ ಅರಿವು ಆಂದೋಲನದ ಕುರಿತ ಕಾರ್ಯಕ್ರಮ**

## ಬಾಲ್ಯವಿವಾಹದಿಂದ ಸಮಾಜದ ಮೇಲೆ ದುಷ್ಪರಿಣಾಮ

**ಕೊಪ್ಪಳ:** ಬಾಲ್ಯವಿವಾಹ ಮಾಡುವುದರಿಂದ ಅಪ್ರಾಪ್ತರ ಆರೋಗ್ಯ ಮತ್ತು ಸಮಾಜದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಅವರು ಹೇಳಿದರು.

ಮಂಗಳವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಕೊಪ್ಪಳ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ, ಸಾರ್ವಜನಿಕ ಆಸ್ಪತ್ರೆ ಹಾಗೂ ಶ್ರೀ ಎಸ್.ಎ. ನಿಂಗೋಜಿ ಶಿಕ್ಷಣ ಮಹಾವಿದ್ಯಾಲಯ ಯಲಬುರ್ಗಾ ಇವರ ಸಂಯುಕ್ತಾಶ್ರಯದಲ್ಲಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಾಲ್ಯವಿವಾಹ ನಿಷೇಧ ಕಾಯ್ದೆ–2006 ಹಾಗೂ ಆರೋಗ್ಯ ಅರಿವು ಆಂದೋಲನದ ಕುರಿತ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ ಬಾಲ್ಯವಿವಾಹ ತಡೆಯಲು ಹಲವಾರು ವಿವಿಧ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾರ್ವಜನಿಕರಿಗೆ ಹಾಗೂ ಯುವಕರಿಗೆ ವಿವಿಧ ಐ.ಇ.ಸಿ ಮಾಧ್ಯಮಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ. ಬಾಲ್ಯವಿವಾಹ ಎಂದರೆ ಯಾವುದೇ 18 ವರ್ಷದೊಳಗಿನ ಹೆಣ್ಣುಮಕ್ಕಳಿಗೆ ಅಥವಾ 21 ವರ್ಷದೊಳಗಿನ ಗಂಡುಮಕ್ಕಳಿಗೆ ವಿವಾಹ ಮಾಡುವುದಾಗಿದೆ. ಬಾಲ್ಯವಿವಾಹಕ್ಕೆ ಕಾರಣಗಳೆಂದರೆ ಬಡತನ, ಅನಕ್ಷರತೆ, ಮೂಢನಂಬಿಕೆ, ಬಾಲ್ಯವಿವಾಹದ ದುಷ್ಪರಿಣಾಮದ ಬಗ್ಗೆ ಅರಿವು ಇಲ್ಲದೇ ಇರುವುದು, ರಕ್ತ ಸಂಬಂಧವನ್ನು ಉಳಿಸಿಕೊಳ್ಳುವುದು, ಕುಟುಂಬದ ಆಸ್ತಿಯನ್ನು ಉಳಿಸಿಕೊಳ್ಳುವುದು, ಪಾಲಕರು ಮದುವೆ ಮಾಡಿ ಜವಾಬ್ದಾರಿಯನ್ನು ಕಳೆದುಕೊಳ್ಳುವುದು, ಸಾಮೂಹಿಕ ವಿವಾಹದಲ್ಲಿ ಕಡಿಮೆ ಖರ್ಚು ಆಗುತ್ತದೆ ಎಂಬ ಭಾವನೆ, ವೃದ್ಧರು ಹಾಗೂ ಅನಾರೋಗ್ಯದ ಹಿರಿಯರ ಆಸೆ ಈಡೇರಿಸುವ ಉದ್ದೇಶದಿಂದ ಬಾಲ್ಯವಿವಾಹ ಮಾಡುತ್ತಾರೆ. ಬಾಲ್ಯವಿವಾಹ ಮಾಡುವುದರಿಂದ ಮದುವೆಯಾದವರ ಆರೋಗ್ಯ ಮತ್ತು ಸಮಾಜದ ಮೇಲೆ ದುಷ್ಪರಿಣಾಮ ಬೀರುತ್ತದೆ. ಇಬ್ಬರಿಗೂ ವಯಸ್ಸಿಗೆ ಮೀರಿದ ಜವಾಬ್ದಾರಿ ಹೊರಿಸಿದಂತಾಗುತ್ತದೆ. ಅಪ್ರಾಪ್ತ ವಯಸ್ಸಿನಲ್ಲಿ ಗರ್ಭಿಣಿಯಾಗುವುದರಿಂದ ಗರ್ಭಕೋಶದ ಬೆಳವಣಿಗೆ ಪೂರ್ಣಗೊಳ್ಳದೆ ಹೆರಿಗೆ ಸಮಯದಲ್ಲಿ ತೊಂದರೆ ಉಂಟಾಗುವ ಸಾಧ್ಯತೆ ಇರುತ್ತದೆ.

ವಿಕಲಾಂಗ ಮಕ್ಕಳ ಜನನ ಉಂಟಾಗುತ್ತದೆ. ಮಕ್ಕಳು ಲೈಂಗಿಕ ದೌರ್ಜನ್ಯಕ್ಕೆ ಹಾಗೂ ಬಲತ್ಕಾರಕ್ಕೆ ಒಳಗಾಗುತ್ತಾರೆ. ಲೈಂಗಿಕ ಖಾಯಿಲೆಗಳಿಂದ ಹೆಚ್.ಐ.ವಿ/ಏಡ್ಸ್ ರೋಗಕ್ಕೆ ಗುರಿಯಾಗುವ ಸಾಧ್ಯತೆ ಇರುತ್ತದೆ ಹಾಗೂ ರಕ್ತಹೀನತೆ ಉಂಟಾಗುತ್ತದೆ ಮತ್ತು ಕಡಿಮೆ ತೂಕದ ಮಗುವಿನ ಜನನವಾಗುವ ಸಾಧ್ಯತೆ ಇರುತ್ತದೆ. ದೈಹಿಕ ಬೆಳವಣಿಗೆ ಕುಂಠಿತವಾಗುತ್ತದೆ. ಆದ್ದರಿಂದ ಎಲ್ಲಾ ಗ್ರಾಮಗಳಲ್ಲಿ ಪ್ರಶಿಕ್ಷಣಾರ್ಥಿಗಳು ನಾಗರಿಕ ಪೌರತ್ವ ತರಬೇತಿ ಶಿಬಿರದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಅರಿವು ಮೂಡಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಾಮಾಜಿಕ ಕಾರ್ಯಕರ್ತೆ ಸರಸ್ವತಿ ಅವರು ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮ, ಕೋಟ್ಪಾ ಕಾಯ್ದೆ–2003 ಕುರಿತು ವಿವರವಾಗಿ ಮಾತನಾಡಿದರು. ಆರ್.ಕೆ.ಎಸ್.ಕೆ ಕಾರ್ಯಕ್ರಮದ ಆಪ್ತಸಮಾಲೋಚಕರಾದ ಶರಣಪ್ಪ ಉಪ್ಪಾರ ಅವರು ಹದಿ–ಹರೆಯದವರ ಆರೋಗ್ಯ ರಕ್ಷಣೆ ಮತ್ತು ಸ್ನೇಹ ಕ್ಲಿನಿಕ್ ಹಾಗೂ ಮಳೆಗಾಲದಲ್ಲಿ ಉಂಟಾಗುವ ಸೋಂಕಿತ ಸೊಳ್ಳೆಗಳಿಂದ ಹರಡುವ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ, ಚಿಕನ್‌ಗುನ್ಯಾ, ಮಲೇರಿಯಾ, ಮೆದುಳುಜ್ವರ, ಆನೆಕಾಲುರೋಗ ಹಾಗೂ ಅಸಾಂಕ್ರಾಮಿಕ ರೋಗಗಳು ಹರಡದಂತೆ ಮುಂಜಾಗೃತೆ ವಹಿಸಲು ತಿಳಿಸಿದರು.


ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರಕಾಶ ಡಿ.ಹೆಚ್., ಸಹ ಉಪನ್ಯಾಸಕರಾದ ವಿ.ವಿ ಪತ್ತಾರ, ನಾಗರಾಜ ತಳವಾರ, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

## ಜನಸೇವೆಯಿಂದ ಸಂಘ-ಸಂಸ್ಥೆಗಳ ವಿಶ್ವಾಸ ವೃದ್ಧಿ

**ರಬಕವಿ–ಬನಹಟ್ಟಿ:** ಜನರ ಸೇವೆ ಮಾಡುವ ಮೂಲಕ ಜನತೆಯ ವಿಶ್ವಾಸ ಪಡೆದುಕೊಂಡು ಸಂಘ–ಸಂಸ್ಥೆಗಳು ಕೆಲಸ ನಿರ್ವಹಿಸುತ್ತಿರುವದು ಸಂತಸವೆನಿಸುತ್ತಿದೆಯೆಂದು ರಬಕವಿ ಪಿಕೆಪಿಎಸ್ ಉಪಾಧ್ಯಕ್ಷ ಸುಭಾಸ ಮಧುರಖಂಡಿ ತಿಳಿಸಿದರು.

ರಬಕವಿಯ ಪಿಕೆಪಿಎಸ್‌ನ ಸಾಮಾನ್ಯ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಹಕಾರಿ ಸಂಘವು ಜನಸಾಮಾನ್ಯರ ಆರ್ಥಿಕ ಸಬಲೀಕರಣಕ್ಕೆ ಹೆಚ್ಚಿನ ಒತ್ತು ನೀಡುವ ಮೂಲಕ ಸದಸ್ಯರಿಗೆ ಪೂರಕ ಕಾರ್ಯದಲ್ಲಿ ತೊಡಗಿರುವದು ಹೆಮ್ಮೆಯೆನಿಸುತ್ತಿದೆಯೆಂದರು.

ಸಂಘದ ಅಧ್ಯಕ್ಷ ಮಾರುತಿ ನಾಯಕ ಮಾತನಾಡಿ, ಪ್ರಸಕ್ತ ವರ್ಷ 8.75 ಲಕ್ಷ ರೂ.ಗಳಷ್ಟು ಲಾಭ ಗಳಿಸಿದ್ದು, ಸ್ವಂತ ಕಟ್ಟಡ ಬಗ್ಗೆ ಸಹಮತ ತೋರಿರುವ ಸದಸ್ಯರ ಬೆಂಬಲದಿಂದ ಶೀಘ್ರ ಪೂರಕ ವ್ಯವಸ್ಥೆ ಕಲ್ಪಿಸಲಾಗುವದೆಂದರು. ಸದಸ್ಯರ ಅಪಘಾತ ನಿಧಿಗೆ ವಿಶೇಷ ಆದ್ಯತೆ ಕಲ್ಪಿಸಲಾಗುವದೆಂದು ತಿಳಿಸಿದರು.



ಗಂಗಪ್ಪ ಹುಲಕುಂದ, ಮಲ್ಲಪ್ಪ ಚೌಲಗಿ, ಡಾ. ಕಲ್ಲಪ್ಪ ಕುಚನೂರ, ಮಹಾನಿಂಗ ಪಾಟೀಲ, ವಿವೇಕ ಕೋಪರ್ಡೆ, ಶ್ರೀಕಾಂತ ವಾಘಮೋರೆ, ಅನುಸೂಯಾ ಅರಿಕೇರಿ, ಅಣ್ಣಪ್ಪ ಮೂಲಿಮನಿ, ಅಂದಾನಿ ಮುತ್ತೂರ, ಹುಚ್ಚಪ್ಪ ಕೊಟಕ್ಕನವರ, ಶಿವಪ್ಪ ಯಾದವಾಡ, ಪ್ರಕಾಶ ವಜ್ಜರಮಟ್ಟಿ, ಮಹಾದೇವ ಬಾಪೂರೆ ಸೇರಿದಂತೆ ಅನೇಕರಿದ್ದರು.

# ಜಗತ್ತನ್ನು ನಿರ್ಮಿಸುವಲ್ಲಿ ವಿಶ್ವಕರ್ಮರ ಮಹತ್ತರ ಪಾತ್ರ




**ಗೋಕಾಕ:** ಜಗತ್ತನ್ನು ಸುಂದರವಾಗಿ ನಿರ್ಮಿಸುವಲ್ಲಿ ವಿಶ್ವಕರ್ಮರು ಮಹತ್ತರ ಪಾತ್ರ ವಹಿಸಿದ್ದಾರೆಂದು ವಿಧಾನ ಪರಿಷತ ಸದಸ್ಯ ಲಖನ ಜಾರಕಿಹೊಳಿ ಹೇಳಿದರು.

ಅವರು, ಗುರುವಾರದಂದು ನಗರದ ಮಹಾಲಕ್ಷ್ಮೀ ಸಭಾ ಭವನದಲ್ಲಿ ತಾಲೂಕಾಡಳಿ, ವಿಶ್ವಕರ್ಮ ಸಮಾಜ ಅಭಿವೃದ್ಧಿ ಸೇವಾ ಸಂಘ, ಶ್ರೀ ಕಾಳಿಕಾದೇವಿ ದೇವಸ್ಥಾನ ವಿಶ್ವಸ್ಥ ಮಂಡಳಿ ಮತ್ತು ಸುವರ್ಣಕಾರರು ಹಾಗೂ ಚಿನ್ನ ಬೆಳ್ಳಿ ವ್ಯಾಪಾರಸ್ಥರ ಸಂಘ ಗೋಕಾಕ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಶ್ರೀ ವಿಶ್ವಕರ್ಮ ಜಯಂತಿ ಸಮಾರಂಭದಲ್ಲಿ ಮುಖ್ಯಅತಿಥಿಗಳಾಗಿ ಪಾಲ್ಗೊಂಡು ಮಾತನಾಡುತ್ತ, ಮಾನವರ ಬದುಕಿಗೆ ಅವಶ್ಯಕ ವಸ್ತುಗಳ ವಿಶ್ವಕರ್ಮರು ನಿರ್ಮಾತ್ರರಾಗಿದ್ದಾರೆ ಎಂದರು.

ಸಮಾಜಮುಖಿ ಕಾರ್ಯಗಳಿಗೆ ಸಂಘಟನೆ ಅತಿ ಮುಖ್ಯ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಾನವರು ಸ್ವಾರ್ಥಿಗಳಾಗುತ್ತಿದ್ದಾರೆ ಇಂತಹ ಸಂದರ್ಭದಲ್ಲಿ ನಿವೆಲ್ಲರೂ ಸಂಘಟಿತರಾಗಿ ವಿಶ್ವಕರ್ಮ ಜಯಂತಿ ಆಚರಿಸುತ್ತಿರುವದು ಮಾದರಿಯಾಗಿದೆ. ಸಂಘಟನೆಯಲ್ಲಿ ಶಕ್ತಿ ಇದ್ದು, ಅದನ್ನು ಸಮಾಜದ ಅಭಿವೃದ್ಧಿಗೆ ಉಪಯೋಗಿಸಿ ಸಮಾಜವನ್ನು ಇನ್ನಷ್ಟು ಗಟ್ಟಿಗೊಳಿಸಿ. ನಿಮ್ಮ ಸಮಾಜಕ್ಕೆ ನಮ್ಮ ಬೆಂಬಲ ಸದಾ ಇರುತ್ತದೆ ಎಂದರು.

ಕಾರ್ಯಕ್ರಮಕ್ಕೂ ಪೂರ್ವದಲ್ಲಿ ನಗರದ ಗ್ರಾಮ ದೇವತೆ ಶ್ರೀ ದ್ಯಾಮವ್ವ ದೇವಸ್ಥಾನದ ಆವರಣದಲ್ಲಿ ವಿಶ್ವಕರ್ಮ ಭಾವಚಿತ್ರ ಪೂಜೆ ಹಾಗೂ ಕುಂಭ ಮೇಳದ ಉದ್ಘಾಟನೆಯನ್ನು ಸಂಸದೆ ಪ್ರಿಯಾಂಕಾ ಜಾರಕಿಹೊಳಿ ನೆರವೇರಿಸಿದರು.

ಕಾರ್ಯಕ್ರಮದ ದಿವ್ಯ ಸಾನಿದ್ಯವನ್ನು ಶೂನ್ಯ ಸಂಪಾದನ ಮಠದ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ವಹಿಸಿದ್ದರು.

ಈ ಸಂದರ್ಭದಲ್ಲಿ ಯುವ ನಾಯಕ ಸರ್ವೋತ್ತಮ ಜಾರಕಿಹೊಳಿ, ತಹಶೀಲದಾರ ಡಾ.ಮೋಹನ ಭಸ್ಮೆ, ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಸಿಪಿಐ ಸುರೇಶಬಾಬು, ಭೀಮಶಿ ಭರಮನ್ನವರ, ವಿಕಾಸ ನಾಯಕ, ಸಮಾಜದ ಮುಖಂಡಾರ ಪ್ರಕಾಶ ಕಂಬಾರ, ಸಂತೋಷ ಮುಗಳಿಹಾಳ, ವಿನಾಯಕ ಪೋತದಾರ, ಸುರೇಶ ಪತ್ತಾರ, ವಿನಾಯಕ ಚಿಪ್ಪಲಕಟ್ಟಿ, ಮಂಗಲಾ ಬಡಿಗೇರ, ಸುಜಾತಾ ಪತ್ತಾರ, ಸುನೀತಾ ಬಡಿಗೇರ, ರೂಪಾ ಪತ್ತಾರ, ವಿಜಯ ಬಡಿಗೇರ, ಸುಭಾಸ ಪೋತದಾರ, ಸುಭಾಸ ಸತ್ತಿಗೇರಿ, ಪ್ರಕಾಶ ಕಂಬಾರ, ಸುರೇಶ ಸತ್ತಿಗೇರಿ ಸೇರಿದಂತೆ ಅನೇಕರು ಇದ್ದರು.

# ಇಂದು ದಾನೇಶ್ವರಶ್ರೀಗಳ ಅಮೃತ ಮಹೋತ್ಸವ

**ರಬಕವಿ-ಬನಹಟ್ಟಿ:** ಉತ್ತರ ಕರ್ನಾಟಕ ಸೇರಿದಂತೆ ವಿವಿಧೆಡೆ ಭಕ್ತ ಗಣ ಹೊಂದಿರುವ ರಬಕವಿ-ಬನಹಟ್ಟಿ ತಾಲೂಕಿನ ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠದ ಚಕ್ರವರ್ತಿ ದಾನೇಶ್ವರಶ್ರೀಗಳ 75ನೇ ವರ್ಷದ 'ಅಮೃತ ಮಹೋತ್ಸವ'ವು ಇಂದು ದಿ.18 ಮತ್ತು 19 ರಂದು ಜರುಗಲಿದೆ.

ದಿ.18 ಗುರುವಾರ ಬೆಳಿಗ್ಗೆ 9 ಗಂಟೆಯಿಂದ ರಬಕವಿಯ ಭಗೀರಥ ವೃತ್ತದಿಂದ ಬನಹಟ್ಟಿಯ ನೂಲಿನ ಗಿರಣಿವರೆಗೆ ಸುಮಾರು 3 ಕಿ.ಮೀ.ನಷ್ಟು ಶೋಭಾಯಾತ್ರೆಯು ಜರುಗಲಿದ್ದು, ರಾಜ್ಯದ ಮೂಲೆ ಮೂಲೆಯಿಂದ 50 ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಭಕ್ತರು ಶೋಭಾಯಾತ್ರೆಯಲ್ಲಿ ಪಾಲ್ಗೊಳ್ಳಲಿದ್ದಾರೆಂದು ಶಿವಾನಂದ ಹಿರೇಮಠ ತಿಳಿಸಿದರು.

ದಾನೇಶ್ವರಶ್ರೀ ಹಾಗು ಹಿರೇಮಠದ ಶರಣಬಸವ ಶಿವಾಚಾರ್ಯರು ಸಾನಿಧ್ಯ ವಹಿಸಲಿದ್ದಾರೆ. ಶೋಭಾಯಾತ್ರೆ ಉದ್ಘಾಟನೆಯನ್ನು ಸಚಿವ ಆರ್.ಬಿ. ತಿಮ್ಮಾಪೂರ ಉದ್ಘಾಟಿಸಲಿದ್ದಾರೆ. ಶಾಸಕ



ಸಿದ್ದು ಸವದಿ, ಜಗದೀಶ ಗುಡಗುಂಟಿ, ಸಿದ್ದು ಕೊಣ್ಣೂರ, ಆನಂದ ನ್ಯಾಮಗೌಡ ಭಾಗವಹಿಸಲಿದ್ದಾರೆ.

ಸಂಜೆ 6 ಗಂಟೆಗೆ ಸರಿಗಮಪ 21ರ ವಿಜೇತೆ ಬೀದರನ ಕು.ಶಿವಾನಿ ಶಿವದಾಸ ಸ್ವಾಮಿ, ಹೆಸರಾಂತ ಗಾಯಕ ಗದಗನ ಮಹಿಬೂಬಸಾಬ ಇವರಿಂದ ಸಂಗೀತ ಸುಧೆ ನಡೆಯಲಿದೆ. ರಾತ್ರಿ 9 ಕ್ಕೆ ಕಲಾಸಂಗಮ ಕಲಾವಿದರಿಂದ ಸ್ವರಾಜ ಶೆಟ್ಟಿ ಅಭಿನಯಿಸಿರುವ ಶಿವಧೂತ ಗೂಳಿಗ ಪ್ರದರ್ಶನ ಜರುಗಲಿದೆ.

ದಿ.19 ಶುಕ್ರವಾರದಂದು ಬೆಳಿಗ್ಗೆ 9 ಕ್ಕೆ ಬಾಗಲಕೋಟೆಯ ಪರಿಮಳಾ ಗಿರಿಯಾಚಾರಿಯವರಿಂದ ಸುಗಮ ಸಂಗೀತ ನಡೆಯಲಿದೆ.

ಬೆಳಿಗ್ಗೆ 11 ಕ್ಕೆ ಶ್ರೀಮಠದ ಆವರಣದಲ್ಲಿ ಶ್ರೀಶೈಲ ಪೀಠದ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ಹಾಗು ಹುಲಜಂತಿಯ ಸುಕ್ಷೇತ್ರ ಭೂಕೈಲಾಸದ ಶ್ರೀ ಮಾಳಿಂಗರಾಯ ಮಹಾರಾಯರ ಸಾನಿಧ್ಯದಲ್ಲಿ ದಾನೇಶ್ವರಶ್ರೀಗಳು ಅಧ್ಯಕ್ಷತೆ ವಹಿಸಲಿದ್ದಾರೆ.

ಸಚಿವ ಆರ್.ಬಿ. ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಸಚಿವ ಸತೀಶ ಜಾರಕಿಹೊಳಿ ಜ್ಯೋತಿ ಬೆಳಗಿಸಲಿದ್ದಾರೆ. ಅತಿಥಿಗಳಾಗಿ ಸಚಿವ ಶಿವರಾಜ ತಂಗಡಗಿ, ಸಂಸದ ಪಿ.ಸಿ. ಗದ್ದಿಗೌಡರ, ಶಾಸಕ ಸಿದ್ದು ಸವದಿ, ಜಗದೀಶ ಗುಡಗುಂಟಿ, ವಿಶ್ವಾಸ ವೈದ್ಯ, ಸುನೀಲಗೌಡ ಪಾಟೀಲ, ಸಿದ್ದು ಕೊಣ್ಣೂರ, ಆನಂದ ನ್ಯಾಮಗೌಡ, ಮಹೇಶ ಕುಮಠಳ್ಳಿ ಆಗಮಿಸಲಿದ್ದಾರೆ.

# ೨೦ರಂದು ಪಂಚಮಸಾಲಿ ಪ್ರತಿಜ್ಞಾ ಕ್ರಾಂತಿ ರ್ಯಾಲಿ



ರಾಯಬಾಗ: ರಾಜ್ಯ ಸರ್ಕಾರ ಮನೆ ಮನೆಯ ಜಾತಿ ಗಣತಿ ಸಮೀಕ್ಷೆ ಕಾರ್ಯ ಕೈಗೊಳ್ಳುವುದರಿಂದ ಪ್ರತಿಯೊಬ್ಬ ಲಿಂಗಾಯತ ಪಂಚಮಸಾಲಿ ಸಮಾಜದವರು ಜಾತಿ ಕಾಲಂನಲ್ಲಿ ನಮೂದಿಸಬೇಕು. ಪಟ್ಟಣದ ಲೋಕೋಪಯೋಗಿ ಇಲಾಖೆ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಗ್ಗೆ ಜಾಗೃತಿ ಮೂಡಿಸುವ ನಮ್ಮ ಸಮಾಜದ ಸಚಿವರು, ಸಂಸದರು, ಶಾಸಕರು, ಮುಖಂಡರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ತಾಲೂಕಿನ ಹಾರೂಗೇರಿಯ ಚನ್ನವೃಷಭೇಂದ್ರ ಲೀಲಾಮಠದಲ್ಲಿ ಸೆ.20 ರಂದು ತಾಲೂಕು ಮಟ್ಟದ ಪಂಚಮಸಾಲಿ ಪ್ರತಿಜ್ಞಾ ಕ್ರಾಂತಿ ರ್ಯಾಲಿ ಹಾಗೂ ವಿವಿಧ ಪಂಚಮಸಾಲಿ ಸಂಘಟನೆಗಳ ಸಹಯೋಗದೊಂದಿಗೆ ಶ್ರಾವಣ ಮಾಸದ ಪ್ರಯುಕ್ತ ತಾಲೂಕಿನ ಗ್ರಾಮಗಳಲ್ಲಿ ಜರುಗಿದ ಗ್ರಾಮ ಗ್ರಾಮದಲ್ಲಿ ಕೂಡಲಸಂಗಮ ಇಷ್ಟಲಿಂಗಪೂಜೆ ಕಾರ್ಯಕ್ರಮದ ಸಮಾರೋಪ ಸಮಾರಂಭ ಆಯೋಜಿಸಲಾಗಿದ್ದು, ಪಂಚಮಸಾಲಿ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದರು.

ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಶಿವಬಸು ಕಾಪಸೆ, ವಕೀಲರ ಸಂಘದ ಅಧ್ಯಕ್ಷ ಪಿ.ಎಮ್.ದರೂರ, ಸಂಗಣ್ಣ ದತ್ತವಾಡೆ, ಸುರೇಶ ಜಂಬಗಿ, ಬಸವರಾಜ ಕೋರೆ, ಸುರೇಶ ಹೊಸಪೇಟೆ, ಬಾಳಗೌಡ ಪಾಟೀಲ, ಆನಂದ ಹುದ್ದಾರ, ನಾರಾಯಣ ಮೇತ್ರಿ, ವಿನಾಯಕ ಪಾಟೀಲ, ವಿಶಾಲ ಕಿತ್ತೂರೆ, ಆನಂದ ಪಾಟೀಲ, ಸಾಗರ ಕುಲಾರೆ, ಆದರ್ಶ ಡಬ್ಬನವರ ಸೇರಿ ಅನೇಕರು ಇದ್ದರು.

# ವಿಶ್ವಕರ್ಮರ ಜಯಂತಿಗೆ ಚಾಲನೆ

**ಗೋಕಾಕ:** ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದಿಂದ ನಗರದ ಶಾಸಕ ರಮೇಶ ಜಾರಕಿಹೊಳಿ ಅವರ ಗೃಹ ಕಚೇರಿಯಲ್ಲಿ ಯುವ ನಾಯಕ ಅಮರನಾಥ ಜಾರಕಿಹೊಳಿ ಅವರು ಶ್ರೀ ವಿಶ್ವಕರ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಶ್ರೀ ವಿಶ್ವಕರ್ಮರ ಜಯಂತಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರಾಧ್ಯಕ್ಷ ಭೀಮಶಿ ಭರಮಣ್ಣವರ, ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಮುಖಂಡರಾದ ಟಿ ಆರ್ ಕಾಗಲ, ಎಮ್ ಎಲ್ ತೋಳಿನವರ, ಲಕ್ಷ್ಮಣ ತಪಶಿ, ಬಸವರಾಜ ಹಿರೇಮಠ, ಸುರೇಶ ಪತ್ತಾರ, ಎಸ್ ವಿ ದೇಮಶೆಟ್ಟಿ, ಲಕ್ಕಪ್ಪ ತಹಶೀಲದಾರ, ಶಕೀಲ ಧಾರವಾಡಕರ, ಪ್ರಕಾಶ ಕಂಬಾರ ಸೇರಿದಂತೆ ಅನೇಕರು ಇದ್ದರು.



# ಆಸಕ್ತ ಕಲಾವಿದರಿಂದ ಅರ್ಜಿ ಆಹ್ವಾನ

**ಕೊಪ್ಪಳ:** 2025-26ನೇ ಸಾಲಿನಲ್ಲಿ ಬಂಜಾರ ಸಮುದಾಯದ ಸಾಂಪ್ರದಾಯಿಕ ಸಂಸ್ಕೃತಿ ಮತ್ತು ಕಲೆಗಳನ್ನು ಉಳಿಸಿ ಬೆಳೆಸಿ ಪುನಶ್ಚೇತನಗೊಳಿಸುವ ಉದ್ದೇಶದಿಂದ ಮತ್ತು ಬಂಜಾರ ಕಲಾವಿದರ ಪ್ರತಿಭೆಯನ್ನು ಹೊರ ಹೊಮ್ಮಿಸಲು ಬಂಜಾರರ ಬಹುಮುಖಿ ಕಲಾ ಪ್ರತಿಭಾನ್ವೇಷಣೆ ಕಲಾ ಮಳಾವೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಅರ್ಹ ಹಾಗೂ ಆಸಕ್ತ ಕಲಾವಿದರಿಂದ ನಿಗಿದಿತ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಬಂಜಾರ ಸಮುದಾಯದ ಬಹುಮುಖಿ ಕಲಾ ಪ್ರಕಾರಗಳಾದ ವಾಜಾ ವಾದ್ಯ ಕಲೆ, ಬಂಜಾರ ಮಹಿಳೆಯರ ಸಾಂಪ್ರದಾಯಿಕ ಗಾಯನ ಮತ್ತು ನೃತ್ಯ, ಬಂಜಾರ ಜಾನಪದ ನೃತ್ಯ, ಬಂಜಾರ ಯುವತಿಯರ ಘೂಮರ್ ನೃತ್ಯ, ಪುರುಷರ ಲೆಂಗಿ ನೃತ್ಯ, ನಂಗಾರಾ ಠೋಳಿ ಬಿಡಿಸುವ ನೃತ್ಯ, ಕಥನ ಗಾಯನ(ಸಣ್ಣ ವಾಜಾ), ಬಂಜಾರ ಮಹಿಳೆಯರ ಸಾಂಪ್ರದಾಯಿಕ ನೃತ್ಯ, ಬಂಜಾರ ಸುಗಮ ಸಂಗೀತ (ಭಕ್ತಿಗೀತೆ ಭಾವಗೀತೆ ಮತ್ತು ಜಾನಪದ), ಬಂಜಾರ ಬಾಲಕರ ಕಲಾ ನೃತ್ಯ (ಲೆಂಗಿ, ಕಥನ ಗಾಯನ ಇತ್ಯಾದಿ), ಬಂಜಾರ ಬಾಲಕಿಯರ ಕಲಾ ನೃತ್ಯ, ಬಂಜಾರ ಡಾವಲೋ ಮತ್ತು ಹವೆಲಿ, ಬಂಜಾರ ಪುರುಷರ ಸಾಂಪ್ರದಾಯಿಕ ಕಡಿ, (ಕಸಳಾತೆ, ಮರಣ ಸಿಕವಾಡಿ, ಗೋಳಖಾಯರ್ ಕಡಿ, ಪಾನೇರ್ ಭಾಂಗ್, ಖ್ಯೇಮ್(ಕ್ಷೇಮ) ನೃತ್ಯ ಪ್ರಕಾರಗಳಲ್ಲಿ ಬಂಜಾರ ಸಮುದಾಯದ ಕಲಾವಿದರು ಭಾಗವಹಿಸಿ ತಮ್ಮ ಕಲಾ ಪ್ರತಿಭೆಯನ್ನು ಪ್ರದರ್ಶಿಸಬಹುದು. ವಿಜೇತರಿಗೆ ಬಹುಮಾನ ವಿತರಿಸಲಾಗುವುದು.

ನಿಗದಿತ ಅರ್ಜಿ ನಮೂನೆಯಲ್ಲಿ ವಿವರಗಳನ್ನು ಭರ್ತಿಮಾಡಿ ಸೆಪ್ಟೆಂಬರ್ 28 ರೊಳಗಾಗಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ, ವಲಯ ಕಚೇರಿ, ಕೊಪ್ಪಳ ಸರಸ್ವತಿ ವಿದ್ಯಾ ಮಂದಿರದ ಹತ್ತಿರ, ಕೇಂದ್ರೀಯ ವಿದ್ಯಾಲಯ ರಸ್ತೆ, ಜಿಲ್ಲಾ ಬಂಜಾರ ಭವನ, ಬಹದ್ದೂರ ಬಂಡಿ, ಕೊಪ್ಪಳ-583238 ವಿಳಾಸಕ್ಕೆ ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9964678184, 9743806039, 9964633860 ಗೆ ಸಂಪರ್ಕಿಸಬಹುದು.

ಈ ಹಿಂದೆ ನಿಗಮದಿಂದ ನಡೆದ ಎಲ್ಲಾ ಕಲಾ ಮಳಾವೋ ಕಾರ್ಯಕ್ರಮದಲ್ಲಿ ಪ್ರಥಮ ಸ್ಥಾನ, ದ್ವಿತೀಯ ಸ್ಥಾನ ಹಾಗೂ ತೃತೀಯ ಸ್ಥಾನ ಪಡೆದ ಕಲಾ ತಂಡಗಳ ಕಲಾವಿದರು ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ ಎಂದು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತದ ಕೊಪ್ಪಳ, ಗದಗ, ವಿಜಯನಗರ ಹಾಗೂ ಬಳ್ಳಾರಿಯ ವಲಯ ಕಚೇರಿಯ ವಲಯ ಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರಾಮುವಿ ಕೊಪ್ಪಳ ಪ್ರಾದೇಶಿಕ ಕೇಂದ್ರ: ಆನ್‌ಲೈನ್ ಅರ್ಜಿ ಆಹ್ವಾನ

**ಕೊಪ್ಪಳ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕೊಪ್ಪಳ ಪ್ರಾದೇಶಿಕ ಕೇಂದ್ರದಲ್ಲಿ 2025-26ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯ ಪ್ರಥಮ ಸ್ನಾತಕ ಮತ್ತು ಸ್ನಾತಕೋತ್ತರ ಶಿಕ್ಷಣ ಕ್ರಮಗಳಿಗೆ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸಾಂಪ್ರದಾಯಿಕವಾಗಿ ಕಾಲೇಜಿಗೆ ತೆರಳದೇ ಮನೆಯಲ್ಲೇ ಕುಳಿತುಕೊಂಡು, ಯಾವುದೇ ಸರ್ಕಾರಿ ಅರೆಸರ್ಕಾರಿ ಇಲಾಖೆಗಳಲ್ಲಿ ಕಾರ್ಯವನ್ನು ನಿರ್ವಹಿಸುತ್ತಾ ದೂರಶಿಕ್ಷಣದ ವ್ಯವಸ್ಥೆಯಡಿ ಶಿಕ್ಷಣ ಪಡೆಯಲು ಈ ಭಾಗದ ಆಸಕ್ತ ವಿದ್ಯಾರ್ಥಿ ಮತ್ತು ಪೋಷಕರಿಗೆ ಅನುಕೂಲವಾಗುವ ದೃಷ್ಟಿಯಿಂದ ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾನಿಲಯವು ತನ್ನದೇ ಆದ ಪ್ರಾದೇಶಿಕ ಕೇಂದ್ರವನ್ನು ನೂತನವಾಗಿ ಕೊಪ್ಪಳದಲ್ಲಿ ಪ್ರಾರಂಭಿಸಿರುತ್ತದೆ.

ಕಛೇರಿಯು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಕಾರ್ಯಾಲಯದ ಕಟ್ಟಡದ ಮೊದಲನೇ ಮಹಡಿ, ಗೋವನಕೊಪ್ಪ ಆಸ್ಪತ್ರೆ ಎದುರಿಗೆ, ಹೊಸಪೇಟೆ ರಸ್ತೆ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ರಾಜ್ಯದಲ್ಲಿ ದೂರಶಿಕ್ಷಣದ ಮೂಲಕ ಶಿಕ್ಷಣವನ್ನು ನೀಡುತ್ತಿರುವ ಏಕೈಕ ವಿಶ್ವವಿದ್ಯಾನಿಲಯವಾಗಿದೆ. ಈಗಾಗಲೇ 2024-25ನೇ ಶೈಕ್ಷಣಿಕ ಸಾಲಿನ ಜನವರಿ ಆವೃತ್ತಿಯ ಪ್ರವೇಶಾತಿಯು ಪ್ರಾರಂಭವಾಗಿರುತ್ತದೆ. ಪ್ರಥಮ ಬಿ.ಎ/ಬಿ.ಕಾಂ/ಬಿ.ಎಸ್ಸಿ, ಬಿ.ಲಿಬ್ ಮತ್ತು ಐ.ಎಸ್‌ಸಿ, ಬಿ.ಸಿ.ಎ, ಬಿ.ಬಿ.ಎ ಮತ್ತು ಬಿ.ಎಸ್.ಡಬ್ಲೂ ಹಾಗೂ ವಿವಿಧ ಎಂ.ಎ(ಕನ್ನಡ, ಇಂಗ್ಲೀಷ್, ಹಿಂದಿ, ಸಂಸ್ಕೃತ, ತೆಲುಗು, ಉರ್ದು, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಾರ್ವಜನಿಕ ಆಡಳಿತ, ಸಮಾಜಶಾಸ್ತ್ರ, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಹಾಗೂ ಶಿಕ್ಷಣಶಾಸ್ತ್ರ), ಎಂ.ಎ-ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಎಂ.ಕಾಂ, ವಿವಿಧ ಎಂ.ಎಸ್‌ಸಿ(ರಸಾಯನಶಾಸ್ತ್ರ, ಜೀವಶಾಸ್ತ್ರ, ಮಾನವಶಾಸ್ತ್ರ, ಸಸ್ಯಶಾಸ್ತ್ರ, ಜೈವಿಕ ತಂತ್ರಜ್ಞಾನ, ಪರಿಸರ ವಿಜ್ಞಾನ, ವೈದ್ಯಕೀಯ ಪೋಷಣೆ ಮತ್ತು ಆಹಾರ ಪದ್ಧತಿ, ಆಹಾರ ಮತ್ತು ಪೋಷಣೆ, ಜೀವರಸಾಯನ ಶಾಸ್ತ್ರ, ಭೂಗೋಳಶಾಸ್ತ್ರ, ಮಾಹಿತಿ ತಂತ್ರಜ್ಞಾನ, ಸೂಕ್ಷ್ಮ ?ಮ ಜೀವವಿಜ್ಞಾನ, ಗಣಿತಶಾಸ್ತ್ರ, ಭೌತಶಾಸ್ತ್ರ, ಪದವಿ ಶಿಕ್ಷಣ ಕ್ರಮಗಳಿಗೆ ವಿಶ್ವವಿದ್ಯಾನಿಲಯದ ನಿಯಮಗಳಿಗೆ ಅನುಗುಣವಾಗಿ ಸ್ಥಳದಲ್ಲಿಯೇ ದಾಖಲಾತಿಗಳನ್ನು ನೀಡಿ ಪ್ರವೇಶಾತಿ ಪಡೆದು ಶಿಕ್ಷಣವನ್ನು ಪಡೆಯಲು ಅವಕಾಶವಿರುತ್ತದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 15 ಕೊನೆಯ ದಿನವಾಗಿದೆ. ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಿ ಕೊಪ್ಪಳ ಪ್ರಾದೇಶಿಕ ಕೇಂದ್ರ ಕಛೇರಿಗೆ ಭೇಟಿ ನೀಡಿ, ನಿಗದಿತ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಿ, ಅಗತ್ಯ ದಾಖಲಾತಿಗಳ ನಕಲು ಪ್ರತಿಗಳನ್ನು ಪ್ರಾದೇಶಿಕ ಕೇಂದ್ರ ಕಛೇರಿಯಲ್ಲಿ ಸಲ್ಲಿಸಿ ಪ್ರವೇಶಾತಿಯನ್ನು ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8904405994 ಅಥವಾ 8748845520, 8748845520, 7795066485, 8904405994, 9071179986, 7483607715 ಗೆ ಹಾಗೂ ವಿವಿಯ ಅಂತರ್ಜಾಲ ವಿಳಾಸ: www.ksoumysuru.ac.in ಕ್ಕೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರಾದ ಸಂದೇಶ್ ಕೆ.ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೋದಿ ಜನ್ಮದಿನದ ಪ್ರಯುಕ್ತ ರಕ್ತದಾನ ಶಿಬಿರ



**ಬೆಳಗಾವಿ:** ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರ ಜನ್ಮದಿನದ ಪ್ರಯುಕ್ತ ಇಂದು ಭಾರತೀಯ ಜನತಾ ಪಾರ್ಟಿ ಬೆಳಗಾವಿ ಗ್ರಾಮಂತರ ಜಿಲ್ಲಾ ಕಾರ್ಯಾಲಯದಲ್ಲಿ ಯುವ ಮೋರ್ಚಾ ವತಿಯಿಂದ ರಕ್ತದಾನ ಶಿಬಿರ ನಡೆಯಿತು. ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಜಗದೀಶ ಶೆಟ್ಟರ ಅವರು ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ ಜಾಗತಿಕ ಯುಗದಲ್ಲಿ ಯುವ ಜನತೆ ರಕ್ತದಾನದ ಮಹತ್ವದ ಮನವರಿಕೆಯನ್ನು ಮಾಡಿಕೊಳ್ಳುವ ಕಡೆಗೆ ಸಾಗಬೇಕು.ರಕ್ತದಾನ ಮಾಡುವುದರಿಂದ ಸಾವು-ಬದುಕಿನ ನಡುವೆ ಹೊರಾಟಮಾಡುತ್ತಿರುವ ರಕ್ತದ ಅವಶ್ಯಕತೆ ಇರುವ ರೋಗಿಗಳ ಜೀವ ಉಳಿಸಿದಂತಾಗುತ್ತದೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ ಪಾಟೀಲ ಮಾತನಾಡಿ ಎಲ್ಲ ದಾನಗಳಲ್ಲಿ ರಕ್ತದಾನ ಶ್ರೇಷ್ಠವಾದ ದಾನವಾಗಿದ್ದು ಈ ಬಗ್ಗೆ ಯುವಶಕ್ತಿ ಹೆಚ್ಚಿನ ಗಮನಹರಿಸುವ ನಿಟ್ಟಿನಲ್ಲಿ ಜಾಗೃತರಾಗಿ ಹೆಜ್ಜೆ ಇಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಯುವ ಮೋರ್ಚಾ ಅಧ್ಯಕ್ಷರಾದ ಮಹಾಂತೇಶ ಚಿನ್ನಪ್ಪಗೌಡರ ,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಧನಶ್ರೀ ದೇಸಾಯಿ ,ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷರಾದ ಈರಣ್ಣ ಅಂಗಡಿ, ಕೋಶಾಧ್ಯಕ್ಷ ಸಂತೋಷ ದೇಶನೂರ, ಜಿಲ್ಲಾ ಉಪಾಧ್ಯಕ್ಷರಾದ ಪ್ರಮೋದ ಕೋಚೇರಿ, ಮಹಿಳಾ ಮೋರ್ಚಾ ರಾಜ್ಯ ಕಾರ್ಯದರ್ಶಿ ಡಾ.ಸೋನಾಲಿ ಸರ್ನೋಬತ, ಕಾರ್ಯದರ್ಶಿಗಳಾದ ವಿಜಯ ಗುಡದರಿ ,ಗುರು ಹಿರೇಮಠ ಮತ್ತು ಕಾರ್ಯಕರ್ತರು, ವೈದ್ಯರು ಸಿಬ್ಬಂದಿಗಳು ಉಪಸ್ಥಿತರಿದ್ದರು

# ೨೦ರಂದು ವಿದ್ಯುತ್ ಸುರಕ್ಷತಾ ದಿನದ ಸಭೆ

**ಧಾರವಾಡ:** ಪ್ರತಿ ತಿಂಗಳು 3 ನೇ ಶನಿವಾರ ಉಪವಿಭಾಗ ಮಟ್ಟದಲ್ಲಿ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳ ಕುರಿತು ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ (ವಿ) ಮಂಜುನಾಥ ಟಿಂಗರೆಕರ್ ಅವರ ಅದ್ಯಕ್ಷತೆಯಲ್ಲಿ ಸೆಪ್ಟೆಂಬರ್ 20, 2025 ರಂದು ಮಧ್ಯಾಹ್ನ 3 ಗಂಟೆಗೆ ಧಾರವಾಡ ವಿದ್ಯಾಗಿರಿಯ ಹೆಸ್ಕಾಂ ಶಹರ ಉಪವಿಭಾಗ-1 ಕಛೇರಿಯಲ್ಲಿ ಗ್ರಾಹಕರೊಂದಿಗೆ ಸಂವಾದ ಸಭೆ ಮತ್ತು ವಿದ್ಯುತ್ ಸುರಕ್ಷತಾ ದಿನದ ವಿಷಯದ ಕುರಿತು ಸಭೆ ಆಯೋಜಿಸಲಾಗಿದೆ.

ಆದ್ದರಿಂದ ಗ್ರಾಹಕರು ತಮ್ಮ ಅಹವಾಲುಗಳನ್ನು ಮುಂಚಿತವಾಗಿ ನೊಂದಾಯಿಸಲು ಮತ್ತು ವಿದ್ಯುತ್ ಸಂಬಂಧಿತ ಸಮಸ್ಯಗಳಿಗೆ ಪರಿಹಾಗಳನ್ನು ಕಂಡುಕೊಳ್ಳಬೇಕು ಎಂದು ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಗೋಕಾಕ: ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದ ವತಿಯಿಂದ ಪ್ರಧಾನಿ ನರೇಂದ್ರ ಮೋದಿಯವರ ಹುಟ್ಟು ಹಬ್ಬದ ನಿಮಿತ್ಯ ಇಲ್ಲಿಯ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಯುವ ನಾಯಕ ಅಮರನಾಥ ಜಾರಕಿಹೊಳಿ ಅವರು ಹಣ್ಣು ಹಂಪಲ ವಿತರಿಸಲಾಯಿತು.**

### ಹಿಟ್ನಳ್ಳಿ ಗ್ರಾಮದಲ್ಲಿ ರೈತಸಂಘ ಗ್ರಾಮ ಘಟಕದ ಉದ್ಘಾಟನಾ ಸಮಾರಂಭದಲ್ಲಿ ಚೂನಪ್ಪಾ ಪೂಜೇರಿ ಕರೆ

# ರೈತ ಸಂಘಟನೆಗಳು ಪ್ರತಿ ಗ್ರಾಮಗಳಲ್ಲಿ ಆಗಬೇಕು

**ದೇವರ ಹಿಪ್ಪರಗಿ :** ಈ ನಾಡಿನಲ್ಲಿ ರೈತರ ಹೆಸರಲ್ಲಿ ದಿನನಿತ್ಯ ಸುಲಿಗೆ ಮಾಡಲಾಗುತ್ತಿದೆ, ನಮ್ಮನಾಳುವ ಜನಪ್ರತಿನಿಧಿಗಳು ಕೂಡಾ ಚುನಾವಣಾ ಸಂದರ್ಭದಲ್ಲಿ ನಾವೂ ಕೂಡಾ ರೈತರ ಮಕ್ಕಳು ಎಂದು ಜಾತಿ, ಪಕ್ಷ ಎಂದು ಯಾಮಾರಿಸಿ ಹಣ ಹೆಂಡ ಕೊಟ್ಟು ಆರಿಸಿ ಬಂದ್ದು, ತಾವು ಹೇಳಿರುವ ಎಲ್ಲಾ ಆಶ್ವಾಸನೆಗಳನ್ನ ಮರೆತು ಹಣ ಮಾಡುವುದರಲ್ಲಿ ತೊಡಗುತ್ತಾರೆ, ಆದ್ದರಿಂದ ರೈತರಿಗೆ ನಿಜಾವಾಗಲೂ ನ್ಯಾಯ ಸಿಗಬೇಕಾದರೆ ಎಲ್ಲಾ ರೈತರು ಒಗ್ಗುಡಬೇಕು ಹಾಗೆ ಈ ದೇಶದ ಪ್ರತಿ ಗ್ರಾಮಗಳಲ್ಲಿ ರೈತ ಸಂಘಟನೆಗಳಾಗಬೇಕು ಎಲ್ಲಾ ಮಹಿಳೆಯರು, ಪುರುಷರು ಹಾಗೂ ಯುವಕರು ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಸಂಘಟನೆ ಮಾಡಿದಾಗ ಮಾತ್ರ ರೈತರ ಉದ್ಧಾರವಾಗಲಿದೆ ಎಂದು ಚೂನಪ್ಪಾ ಪೂಜೇರಿ ಮಾತನಾಡಿದರು

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ದೇವರ ಹಿಪ್ಪರಗಿ ತಾಲೂಕಿನ ಹಿಟ್ನಳ್ಳಿ ಗ್ರಾಮ ಘಟಕದ ಉದ್ಘಾಟನಾ ಸಮಾರಂಭದಲ್ಲಿ ಕಾರ್ಯಕ್ರಮವನ್ನು ದೀಪ ಬೆಳಗಿಸುವುದರೊಂದಿಗೆ ಅವರು ಮಾತನಾಡಿದರು.



ಕಳೆದ 30 ವರ್ಷಗಳಿಂದ ಕೃಷಿ ಚಟುವಟಿಕೆಗಳ ವೆಚ್ಚುಗಳು ಹತ್ತು ಪಟ್ಟು ಹೆಚ್ಚುತ್ತಲಿವೆ ಆದರೆ ರೈತರು ಬೆಳೆದ ಎಲ್ಲಾ ಬೆಳೆಗಳಿಗೆ ಯೋಗ್ಯ ಬೆಲೆಗಳಿಲ್ಲದೇ ಮಾಡಿರುವ ಖರ್ಚು ಸಾಲದೇ ಸಾಲದ ಸುಳಿಯಿಂದ ಎದ್ದು ಬರದಾಗದೇ ಪ್ರತಿ ಅರ್ಧಘಂಟೆಗೆ ಒಬ್ಬ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ, ಇದು ನಿಲ್ಲ ಬೇಕಾದರೆ ರೈತರೆಲ್ಲರೂ ಒಂದುಗೂಡಬೇಕು ಕೃಷಿಯ ಜೊತೆಗೆ ಉಪ ಕಸಬುಗಳನ್ನು ಮಾಡಿ ದಿನನಿತ್ಯ ಆದಾಯ ಬರುವ ಹಾಗೆ ಮಾಡಿಕೊಳ್ಳಬೇಕು ಅಂದಾಗ ರೈತರು ಸಾಲದಿಂದ ಮುಕ್ತರಾಗುತ್ತಾರೆ, ಅದಕ್ಕಾಗಿ ಯಾವಾಗಲೂ ರೈತ ಸಂಘ ನಿಮ್ಮ ಪರ ಹಗಲು ರಾತ್ರಿ ಕೆಲಸ ಮಾಡಲಿದೆ ಎಂದರು.

ಅನುಗ್ರಹ ಕಣ್ಣಿನ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಪ್ರಭುಗೌಡ ಪಾಟೀಲ ಅವರು ಮಾತನಾಡುತ್ತಾ ಈ ದೇಶದಲ್ಲಿ ಪ್ರತಿಯೊಬ್ಬರು ತುತ್ತು ಅನ್ನ ತಿನ್ನುವ ಮುಂಚೆ ಅನ್ನದಾತನನ್ನು ನೆನೆಯಬೇಕು, ಈ ನಾಡಿನಲ್ಲಿ ಯಾವುದೇ ಫಲಾಪೇಕ್ಷೆ ಇಲ್ಲದೇ ಬೆವರು ಸುರಿಸಿ ಈ ದೇಶದ ಭದ್ರತೆಗಗಿ ಅನ್ನವನ್ನು ಬೆಳೆಯುತ್ತಿರುವ ರೈತರನ್ನು ಪೂಜಿಸಬೇಕು, ರೈತರಿಗೆ ಆಗುತ್ತಿರುವ ಅನ್ಯಾಯವನ್ನು ಹೋಗಲಾಡಿಸಬೇಕಾದರೆ ಸಂಘಟಿತರಾಗಬೇಕು ಎಂದರು.

ದೇವರ ಹಿಪ್ಪರಗಿಯ ತಹಶಿಲ್ದಾರರಾದ ಪ್ರಕಾಶ ಸಿಂದಗಿ ಅವರು ಮಾತನಾಡುತ್ತಾ ಈ ದೇಶದ ಬಹುತೆಕ 70 % ಜನ ರೈತರಿದ್ದು, ದೇಶದ ಆರ್ಥಿಕತೆಯ ಮೂಲಭೂನಾದಿ ರೈತರಾಗಿದ್ದು ಅಂತಹ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ರೈತರಿಗೆ ಅನ್ಯಾಯ ಆಗಬಾರದು ಎಂದರೆ ಈ ರೀತಿಯ ಸಂಘಗಳನ್ನು ಮಾಡಿ ಜಾಗೃತಿ ಕಾರ್ಯಕ್ರಮಗಳನ್ನು ಮೇಲಿಂದ ಮೇಲೆ ಮಾಡಬೇಕು, ಜೊತೆಗೆ ನಮ್ಮ ಇಲಾಖೆಯಿಂದ ನಾವೂ ಕೂಡಾ ಸದಾ ರೈತರ ಪರವಾಗಿ ಸೇವೆ ಸಲ್ಲಿಸಲು ಸಿದ್ದರಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಮುದ್ದು ಮಕ್ಕಳಿಂದ ರೈತಗೀತೆಯಾದ ನೇಗಿಲಯೋಗಿ ಗಾಯನಕ್ಕೆ ನೃತ್ಯ ಮಾಡಿದರು, ಇದೇ ವೇಳೆ ನೂರಾರು ರೈತ ಸಂಘದ ಪದಾಧಿಕಾರಿಗಳಿಗೆ ಶಾಲುದೀಕ್ಷೆ ಮಾಡಿ ಗುರುತಿನ ಚೀಟಿ ವಿತರಣೆ ಮಾಡಲಾಯಿತು.

ಈ ವೇಳೆ ಮುಖಂಡರಾದ ಚಂದ್ರಕಾಂತ ಪ್ಯಾಟಿ, ರಾಮನಗೌಡ ಪಾಟೀಲ, ದೇವರ ಹಿಪ್ಪರಗಿ ಅಧ್ಯಕ್ಷರಾದ ಈರಪ್ಪ ಕುಳೆಕುಮಟಗಿ, ಶಿವಾನಂದಯ್ಯ ಹಿರೇಮಠ, ಶಾನೂರ ನಂದರಗಿ, ಅನಮೇಶ ಜಮಖಂಡಿ, ಆತ್ಮಾನಂದ ಭೈರೋಡಗಿ, ಸಂಪತ್ ಜಮಾದಾರ, ಶಕೀರಾ ಹೆಬ್ಬಾಳ, ಸುನಂದಾ ಸೊನ್ನಳ್ಳಿ, ರಾಮಸಿಂಗ ರಜಪೂತ, ಬಸಗೊಂಡಪ್ಪ ತೇಲಿ, ಮಲ್ಲನಗೌಡ ಬಿರಾದಾರ, ಲಕ್ಕಪ್ಪ ಹೂಗಾರ, ಶಾಂತಯ್ಯ ಹಿರೇಮಠ, ಭೀಮನಘಡ ಬಿರಾದಾರ, ಮಲ್ಲಪ್ಪ ಸುಂಬಡ, ಚಿದಾನಂದ ಮೋಪಗಾರ, ಬಸವರಾಜ ಜೋಗುರ, ಶಿದ್ದಪದಪ ಪೂಜಾರಿ,ಮೈಬೂಬ ಪಟೇಲ, ಮಜಬ್ಬ ಗುಡ್ಡಳ್ಳಿ, ಬೀಬಿಜಾನ ಬಿರಾದಾರ, ಸೇರಿದಂತೆ ಹಿಟ್ನಳ್ಳಿ ಗ್ರಾಮದ ಅನೇಕ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಸೇರಿದಂತೆ ಇತರರು ಇದ್ದರು.




# ಮಕ್ಕಳ ಭವಿಷ್ಯದ ಶಿಕ್ಷಣಕ್ಕಾಗಿ ಜೀವ ಸವೆಸುವೆ

**ಬೆಳಗಾವಿ:** ಗಣಿಕೊಪ್ಪ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ತಾಲೂಕು ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ಶ್ರೀ. ಎಂ. ಡಿ. ಚಡಿಚಾಳ ಗುರುಗಳಿಗೆ ಹಳೆಯ ವಿದ್ಯಾರ್ಥಿ ಸಂಘ ಹಾಗೂ ಗ್ರಾಮಸ್ಥರಿಂದ ಸನ್ಮಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಸನ್ಮಾನ ಸ್ವಿಕರಿಸಿ ಮಾತನಾಡಿದ ಎಂ. ಡಿ. ಚಡಿಚಾಳ ಗುರುಗಳು ನಾನು ಅನೇಕ ವರ್ಷಗಳಿಂದ ಶಿಕ್ಷಕ ವೃತ್ತಿಯನ್ನು ಮಾಡುತ್ತಿದ್ದು ಈ ಊರಿಗೆ ಬಂದಿದ್ದು ನನ್ನ ಪೂರ್ವ ಜನ್ಮದ ಪುಣ್ಯ, ಈ ಊರಿನ ಯುವಕರು ಹಾಗೂ ಗ್ರಾಮಸ್ಥರ ಸಹಾಯದಿಂದ ಶಾಲೆಯ ವಾತಾವರಣವನ್ನು ಬದಲಾಯಿಸಲು ಸಾಧ್ಯವಾಯಿತು ಮತ್ತು ನಮ್ಮ ಶಾಲೆಯ ಮಕ್ಕಳ ಪ್ರತಿಭೆ ಜಿಲ್ಲೆ ಹಾಗೂ ರಾಜ್ಯ ಮಟ್ಟದಲ್ಲಿ ಇಂದು ಬೆಳಗುತ್ತಿದೆ ಅದಕ್ಕೆ ಕಾರಣ ನಮ್ಮ ಶಾಲೆಯ ಶಿಕ್ಷಕ ವೃಂದ ಹಾಗೂ ತಮ್ಮೆಲ್ಲರ ಸಹಕಾರ, ಮಕ್ಕಳ ಉತ್ತಮ ಶಿಕ್ಷಣದ ಭವಿಷ್ಯಕ್ಕಾಗಿ ನನ್ನ ಜೀವನವನ್ನೇ ಸದಾ ಮುಡಿಪಾಗಿಡುವೆ ಎಂದರು.

ಹಳೆಯ ವಿದ್ಯಾರ್ಥಿ ಸಂಘದ ಸದಸ್ಯರಾದ ಮಲ್ಲಿಕಾರ್ಜುನ ಹಿರೆಕೊಪ್ಪ , ಶಿವಪ್ಪಾ ಹೊಂಗಲ ತಮ್ಮ ಅನಿಸಿಕೆಗಳನ್ನು ಹೇಳಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ಭರಮಣ್ಣವರ ಶಿಕ್ಷಕಿಯರಾದ ಸುನಿತಾ ಬನಸಿ ಹಾಗೂ ಹಳೆಯ ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು. ವಿಶಾಲ ಪಾಟೀಲ ನಿರೂಪಿಸಿದರು, ಪೇಮಾ ಗಾಬಿ ಸ್ವಾಗತಿಸಿದರು, ವೀಣಾ ಹೀರೆಮಠ ವಂದಿಸಿದರು.

**ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಪ್ರಮೋದ ಮಹಾಸ್ವಾಮಿಗಳು ಕರೆ**

# ಶ್ರೀ ವಿಶ್ವಕರ್ಮ ಸ್ತೋತ್ರಗಳನ್ನು ಅನುಸರಿಸಿ ಸಧೃಡ ಸಮಾಜ ನಿರ್ಮಿಸಿ

**ಬೆಳಗಾವಿ:** ಪುರಾಣಗಳ ಪ್ರಕಾರ ಶ್ರೀ ವಿಶ್ವಕರ್ಮ ಅವರು ಜಗತ್ತಿನ ಸೃಷ್ಟಿಕರ್ತರಾಗಿದ್ದಾರೆ, ವಿಶ್ವಕರ್ಮ ಸ್ತೋತ್ರಗಳನ್ನು ತಿಳಿದುಕೊಂಡು ಅವುಗಳನ್ನು ಅನುಸರಿಸುವುದರ ಮೂಲಕ ಸುಂದರ, ಸಧೃಡ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕಿತ್ತೂರಿನ ಶ್ರೀ ವಿಶ್ವಕರ್ಮ ಏಕದಂಡಗಿ ಶ್ರೀ ಮಠದ ಶ್ರೀ ಸರಸ್ವತಿ ಪೀಠಾಧೀಶರಾದ ಶ್ರೀ ಆರ್. ಪ್ರಮೋದ ಮಹಾಸ್ವಾಮಿಗಳು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನಡೆದ ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

**ಉಪನಿಷತ್ತುಗಳೆ ನಮಗೆ ಆಧಾರಗಳಾಗಿವೆ:** ಸೃಷ್ಟಿಕರ್ತ ವಿಶ್ವಕರ್ಮರ ಬಗ್ಗೆ ವೇದ ಉಪನಿಷತ್ತುಗಳಿಂದ ಬಹಳಷ್ಟು ತಿಳಿದುಕೊಳ್ಳಬಹುದಾಗಿದೆ. ಪ್ರತಿಯೊಂದು ಗ್ರಾಮದಲ್ಲಿನ ದೇವಸ್ಥಾನಗಳಲ್ಲಿ ಗ್ರಂಥಾಲಯನ್ನು ಸ್ಥಾಪಿಸಿ ಧಾರ್ಮಿಕ, ಸಾಹಿತ್ಯ, ವೇದ ಉಪನಿಷತ್ತುಗಳನ್ನು ಇಡುವುದರ ಮೂಲಕ ಜನರಿಗೆ ನಮ್ಮ ಇತಿಹಾಸದ ಬಗ್ಗೆ ಓದಲು ಅವಕಾಶ ಕಲ್ಪಿಸಬೇಕು ಎಂದರು.

ನಮ್ಮ ಧಾರ್ಮಿಕ ವಿಧಿ ವಿಧಾನಗಳನ್ನು ನಾವು ತಿಳಿದುಕೊಂಡು ಸಮಾಜದ ಜನರು ಜಾಗೃತರಾಗಬೇಕು. ಸೈನಿಕ ಹಾಗೂ ರೈತ ದೇಶದ ಎರಡು ಕಣ್ಣುಗಳಿದ್ದಂತೆ



ಸೈನಿಕನಿಗೆ ಬಂದೂಕು ಮತ್ತು ರೈತರಿಗೆ ಎಲ್ಲ ಸಲಕರಣೆಗಳನ್ನು ತಯಾರಿಸಿಕೊಟ್ಟವರು ವಿಶ್ವಕರ್ಮರು. ಚಿನ್ನ ಸೇರಿದಂತೆ ಎಲ್ಲ ಬಗೆಯ ಧಾತುಗಳನನ್ನು ಪರಿಚಯಿಸಿದವರು ವಿಶ್ವಕರ್ಮ ಸಮಾಜದವರಾಗಿದ್ದಾರೆ ಎಂದು ತಿಳಿಸಿದರು.

ವಿಶ್ವಕರ್ಮ ಸಮಾಜದ ಜನ ಬಹಳ ಸ್ವಾವಲಂಭಿಗಳು, ನಮ್ಮ ಎಲ್ಲ ಅಹಂಗಳನ್ನು ಬಿಟ್ಟು ಸರ್ಕಾರದ ಯೋಜನೆಗಳ ಬಗ್ಗೆ ತಿಳಿದುಕೊಂಡು ಅವುಗಳನ್ನು ಪಡೆದು ಸದೃಢರಾಗಬೇಕು. ನಮ್ಮ ಸಮಾಜದಲ್ಲಿ ಜಾಗೃತಿ ಮೂಡಿಸುವ ನಾಯಕರು ಸೃಷ್ಟಿ ಆಗಬೇಕು. ಎಲ್ಲ ಸಮಾಜದೊಂದಿಗೆ ಸೌಹಾರ್ದತೆಯಿಂದ ನಮ್ಮ ಕೆಲಸ ಕಾರ್ಯಗಳನ್ನು ಮಾಡುತ್ತಾ ಬದುಕಬೇಕು ಎಂದು ಶ್ರೀ ಆರ್. ಪ್ರೇಮಾನಂದ ಮಹಾಸ್ವಾಮಿಗಳು ತಿಳಿಸಿದರು.



ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಬಸವರಾಜ ಹೆಗ್ಗನಾಯಕ ಅವರು ಮಾತನಾಡಿ ವಿಶ್ವಕರ್ಮ ಪುರಾಣದ ಆಧಾರದ ಮೇಲೆ ಗಾಂಧರ್ವ ಲೋಕ ಸೃಷ್ಟಿಕರ್ತರು ಎಂಬುದನ್ನು ನಾವು ಕಾಣಬಹುದು. ವಿಶ್ವಕರ್ಮ ಸಮಾಜದ ಜನ ತಮ್ಮ ವೃತ್ತಿ ಕೌಶಲ್ಯದೊಂದಿಗೆ ತಮ್ಮ ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ, ಉತ್ತಮ ಸಂಸ್ಕಾರಗಳನ್ನು ತಿಳಿಸಿಕೊಟ್ಟರೆ ಸಮಾದಲ್ಲಿ ಉನ್ನತ ಮಟ್ಟದಲ್ಲಿ ಬೆಳೆಯುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ ಸೇರಿದಂತೆ ಸಮಾಜದ ಗಣ್ಯರು, ಮುಖಂಡರು, ಸಾರ್ವಜನಿನರು ಉಪಸ್ಥಿತರಿದ್ದರು.

## ಭವ್ಯ ಮೆರವಣಿಗೆ

ಕಾರ್ಯಕ್ರಮಕ್ಕೂ ಮುನ್ನ ವಿಶ್ವಕರ್ಮ ಭಾವಚಿತ್ರದ ಭವ್ಯ ಮೆರವಣಿಗೆಗೆ ಮಹಾನಗರ ಪಾಲಿಕೆ ಉಪ ಮಹಾ ಪೌರರಾದ ವಾಣಿ ಜೋಶಿ ಅವರು ಚಾಲನೆ ನೀಡಿದರು. ವಿವಿಧ ಜನಪದ ಕಲಾ ತಂಡಗಳೊಂದಿಗೆ ಭವ್ಯ ಮೆರವಣಿಗೆಯು ಅಶೋಕ ವೃತ್ತದಿಂದ ಕುಮಾರ ಗಂಧರ್ವ ಕಲಾ ಮಂದಿರಕ್ಕೆ ಬಂದು ತಲುಪಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಮೊಹಮ್ಮದ್ ರೋಷನ್ ಸೇರಿದಂತೆ ಸಮಾಜದ ಮುಖಂಡರು, ಗಣ್ಯಮಾನ್ಯರು ಉಪಸ್ಥಿತರಿದ್ದರು.

# 22ರಿಂದ ಹುಲಿಗೆಮ್ಮ ದೇವಿ ದಸರಾ ಮಹೋತ್ಸವ

**ಕೊಪ್ಪಳ:** ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ 'ಶ್ರೀ ಹುಲಿಗೆಮ್ಮದೇವಿ ದಸರಾ ಮಹೋತ್ಸವ–2025' ಕಾರ್ಯಕ್ರಮವನ್ನು ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 2 ರವರೆಗೆ ಹಮ್ಮಿಕೊಳ್ಳಲಾಗಿದ್ದು, ಉದ್ಘಾಟನಾ ಸಮಾರಂಭವು ಸೆ. 22ರ ಸೋಮವಾರದಂದು ಸಂಜೆ 6.30 ಗಂಟೆಗೆ ನಡೆಯಲಿದೆ.

ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷರು ಆಗಿರುವ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟಿಸುವರು. ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರು ಹಾಗೂ ಹುಲಿಗೆಮ್ಮದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಮಲಿಂಗಾರೆಡ್ಡಿ, ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ವಿಧಾನಸಭಾ ಕ್ಷೇತ್ರ ಸದಸ್ಯರಾದ ದೊಡ್ಡನಗೌಡ ಹನುಮಗೌಡ ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರ ಸದಸ್ಯರಾದ ಬಸವರಾಜ ರಾಯರೆಡ್ಡಿ ಅವರು ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು.

ಗೌರವ ವಿಶೇಷ ಆಹ್ವಾನಿತರಾಗಿ ಕೊಪ್ಪಳ ಜಿಲ್ಲೆಯ ಮೋರನಾಳ ಗ್ರಾಮದ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೇಕ್ಯಾತರ ಅವರು ಆಗಮಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಲೋಕಸಭಾ ಕ್ಷೇತ್ರದ ಸದಸ್ಯರಾದ ಕೆ.ರಾಜಶೇಖರ ಹಿಟ್ನಾಳ್, ಗಂಗಾವತಿ ವಿಧಾನಸಭಾ ಕ್ಷೇತ್ರದ ಸದಸ್ಯರಾದ ಜಿ.ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯರುಗಳಾದ ಶರೀಲ್ ಜಿ.ನಮೋಶಿ, ಡಾ.ಚಂದ್ರಶೇಖರ್ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ, ಹೇಮಲತಾ ನಾಯಕ, ತುಂಗಭದ್ರ ಯೋಜನೆ ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನ್‌ಸಾಬ್ ನಬೀಬ್ ಸಾಬ್ ದೋಟಿಹಾಳ, ಹುಲಿಗಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ನೀಲಮ್ಮ ಗವಿಸಿದ್ದಪ್ಪ ಗುಂಗಾಡಿ ಅವರು ಪಾಲ್ಗೊಳ್ಳುವರು.

ವಿಶೇಷ ಆಹ್ವಾನಿತರಾಗಿ ಕಂದಾಯ ಇಲಾಖೆ (ಧಾರ್ಮಿಕ ದತ್ತಿ ಇಲಾಖೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯ, ಬೆಂಗಳೂರು ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ. ಮೋಹನ್‌ರಾಜ್, ಹಿಂದೂ ಧಾರ್ಮಿಕ ದತ್ತಿ ಇಲಾಖೆ ಆಯುಕ್ತರಾದ ಡಾ. ಎಂ.ವಿ.ವೆಂಕಟೇಶ್, ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ದಿ ಅವರು ಉಪಸ್ಥಿತರಿರುವರು ಎಂದು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಯಂ.ಹೆಚ್. ಪ್ರಕಾಶ್‌ರಾವ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿರಗುಪಿ: ಹೆಚ್ಚುವರಿ ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ನಿಪ್ಪಾಣಿ ತಾಲೂಕಿನ ಶಿರಗುಪ್ಪಿ ಗ್ರಾಮದಲ್ಲಿ ಪ್ರಸ್ತುತ ಒಂದು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ: 15–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ನಿಪ್ಪಾಣಿ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ನಿಪ್ಪಾಣಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಬೆಳಗಾವಿ:** 2025–26ನೇ ಸಾಲಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವಿದ್ಯಾರ್ಥಿಗಳ ಶುಲ್ಕ ಮರುಪಾವತಿ ಯೋಜನೆಯಡಿ, ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ. ನಂತರದ ತರಗತಿಗಳಲ್ಲಿ ಉನ್ನತ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಂದ ಮ್ಯಾನುವಲ್ ಅರ್ಜಿ ಆಹ್ವಾನಿಸಲಾದೆ. ಆಸಕ್ತ ಜಿಲ್ಲೆಯ ವಿಕಲಚೇತನ ವಿದ್ಯಾರ್ಥಿಗಳು ಸದರಿ ಯೋಜನೆಯಡಿ ಅಗತ್ಯ ದಾಖಲಾತಿಗಳೊಂದಿಗೆ ಸೆಪ್ಟಂಬರ್, 30, 2025 ರ ಒಳಗಾಗಿ ಆಯಾ ಕಾಲೇಜಿನ ಮುಖ್ಯಸ್ಥರ ದೃಢೀಕರಣದೊಂದಿಗೆ ತಮ್ಮ ತಾಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ (ಎಂ.ಆರ್.ಡಬ್ಲ್ಯೂ) ದ್ವಿ ಪ್ರತಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 0831–2476096/7 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ರಾಯಬಾಗ: ಭಾರತದ ನೆಚ್ಚಿನ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಹುಟ್ಟುಹಬ್ಬದ ಪ್ರಯುಕ್ತ ಬುಧವಾರ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಒಳ ರೋಗಿಗಳಿಗೆ ರಾಯಬಾಗ ಬಿಜೆಪಿ ಮಂಡಲ ವತಿಯಿಂದ ಹಣ್ಣುಹಂಪಲ, ಬಿಸ್ಕತ್ತು ವಿತರಿಸಲಾಯಿತು.**

# ಶೈಕ್ಷಣಿಕ ಕ್ಷೇತ್ರದಲ್ಲಿ ಅರಿಹಂತ ಸಂಸ್ಥೆಯ ಕಾರ್ಯ ಶ್ಲಾಘನೀಯ

**ಹುಕ್ಕೇರಿ:** ಸಂಘ–ಸಂಸ್ಥೆ ಉಳಿದು ಬೆಳೆಯ ಬೇಕಾದರೆ ಆ ಸಂಸ್ಥೆಯ ಆಡಳಿತ ಮಂಡಳಿ ಮತ್ತು ಸಿಬ್ಬಂದಿ ಪ್ರಾಮಾಣಿಕವಾಗಿರಬೇಕು. ಈ ನಿಟ್ಟಿನಲ್ಲಿ ವಾಣಿಜ್ಯ ಚಟುವಟಿಕೆಗಳೊಂದಿಗೆ ಸಮಾಜಮುಖಿ ಕೆಲಸಗಳಲ್ಲಿ ಅದಮ್ಯ ಸೇವೆ ಸಲ್ಲಿಸುತ್ತಿರುವ ಹುಲ್ಲೋಳಿ ಅರಿಹಂತ ಬ್ಯಾಂಕ್ ಗ್ರಾಮೀಣ ಜನರ ಒಡನಾಡಿಯಾಗಿ ಹೊರಹೊಮ್ಮಿದೆ ಎಂದು ಚಿಕ್ಕೋಡಿ ಚರಮೂರ್ತಿ ಚರಂತೇಶ್ವರ ಮಠದ ಸಂಪಾದನಾ ಸ್ವಾಮೀಜಿ ಹೇಳಿದರು.



ತಾಲೂಕಿನ ಹುಲ್ಲೋಳಿ ಗ್ರಾಮದಲ್ಲಿ ನಡೆದ ಅರಿಹಂತ ಸೌಹಾರ್ದ ಸಹಕಾರಿ ಸಂಘದ ಸದಸ್ಯ ಮಕ್ಕಳ ಪ್ರತಿಭಾ ಪುಸ್ಕಾರದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದಲ್ಲಿ ಸೇವಾನಿರತ ಈ ಬ್ಯಾಂಕ್ ಸದಸ್ಯರ ವಿಶ್ವಾಸ ಗಳಿಸಿ ಗ್ರಾಹಕ ಸ್ನೇಹಿಯಾಗಿ ಹೊರಹೊಮ್ಮಿದೆ. ಅನೇಕ ಸಾಮಾಜಿಕ, ಶೈಕ್ಷಣಿಕ ಹಾಗೂ ಧಾರ್ಮಿಕ ಕ್ಷೇತ್ರದಲ್ಲಿ ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಬ್ಯಾಂಕ್ ಅಧ್ಯಕ್ಷ ಬಿ.ಬಿ.ಚೌಗಲಾ ಮಾತನಾಡಿ, ಬರುವ ಆರ್ಥಿಕ ವರ್ಷದಲ್ಲಿ ಬ್ಯಾಂಕ್‌ನಿಂದಗ್ರಾಹಕರಿಗೆ ಮತ್ತಷ್ಟು ಗುಣಮಟ್ಟದ ಸೇವೆ ನೀಡಿ 6 ಕೋಟಿ ನಿವ್ವಳ ಲಾಭ ಗಳಿಸುವ ಗುರಿ ಹೊಂದಲಾಗಿದೆ. ಜೊತೆಗೆ ಇನ್ನೆರೆಡು ಶಾಖೆ, ಕಲ್ಯಾಣ ಮಂಟಪ ನಿರ್ಮಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಪ್ರಧಾನ ವ್ಯವಸ್ಥಾಪಕ ಆನಂದ ಚೌಗಲಾ ಮಾತನಾಡಿ, ಪ್ರಧಾನ ಕಚೇರಿ ಸೇರಿ ಬ್ಯಾಂಕ್ ಒಟ್ಟು 11 ಶಾಖೆಗಳನ್ನು ಹೊಂದಿರುವ ಬ್ಯಾಂಕ್ ಒಟ್ಟು 18430 ಸದಸ್ಯರನ್ನು ಹೊಂದಿದ್ದು 2024–25 ನೇ ಆರ್ಥಿಕ ವರ್ಷದಲ್ಲಿ ಬ್ಯಾಂಕ್ ಒಟ್ಟು 1992 ಕೋಟಿ ರೂ ವಹಿವಾಟು ನಡೆಸಿದೆ. 1.17 ಕೋಟಿ ಶೇರುಬಂಡವಾಳವಿದೆ. 30 ಕೋಟಿ ರೂ ಕಾಯ್ದಿಟ್ಟ ಹಾಗೂ ಇತರೆ ನಿಧಿಗಳಿದ್ದು 327 ಕೋಟಿ ರೂ ದುಡಿಯುವ ಬಂಡವಾಳವಿದೆ. 214 ಕೋಟಿ ರೂ ಸಾಲ ವಿತರಿಸಲಾಗಿದೆ. 296 ಕೋಟಿ ರೂ ಠೇವುಗಳಿದ್ದು 113 ಕೋಟಿ ರೂ ಗುಂತಾವಣೆಗಳಿವೆ. 5.72 ಕೋಟಿ ರೂ ನಿವ್ವಳ ಲಾಭ ಗಳಿಸಿದ್ದು ಶೇ. 25 ರಷ್ಟು ಲಾಭಾಂಶವಿತರಿಸಲಾಗಿದೆ. ಶೇ.97 ರಷ್ಟು ಸಾಲ ವಸೂಲಾಗಿದ್ದುಅಡಿಟ್‌ನಲ್ಲಿ ಎ ಕ್ಲಾಸ್ ಬಂದಿದೆ ಎಂದರು. ಉಪಾಧ್ಯಕ್ಷ ಬಾಹುಬಲಿ ನಾಗನೂರಿ, ನಿರ್ದೇಶಕರಾದ ಪಿ.ಆರ್.ಚೌಗಲಾ, ಜಿನ್ನಪ್ಪಾಸಪ್ತಸಾಗರ, ರಾಮಣ್ಣಾ ಗೋಟೂರಿ, ರವೀಂದ್ರ ಚೌಗಲಾ, ಜಯಪಾಲ ಚೌಗಲಾ, ಬಾಬು ಅಕ್ಕಿವಾಟೆ. ಮಾಯಪ್ಪಾ ಹೊಳೆಪ್ಪಗೋಳ, ಶೃತಿ ಪಾಟೀಲ, ಸುಮತಿ ಚೌಗಲಾ, ಬಸವರಾಜ ಪಾಟೀಲ, ಬಾಳಪ್ಪಾ ಸಂಕೇಶ್ವರಿ, ಡಾ.ಶಿವಾಜಿ ಗೋಟೂರೆ. ಈರಣ್ಣಾ ಹೂಗಾರ, ಆಂತರಿಕ ಲೆಕ್ಕ ಪರಿಶೋಧಕ ಮಹಾವೀರ ಚೌಗಲಾ ಮತ್ತಿತರರು ಉಪಸ್ಥಿತರಿದ್ದರು. ಪ್ರಧಾನ ವ್ಯವಸ್ಥಾಪಕ ಆನಂದ ಚೌಗಲಾ ಪ್ರಾಸ್ತಾವಿಕವಾಗಿ ಮಾತನಾಡಿದರು. ರವೀಂದ್ರ ಚೌಗಲಾ ಸ್ವಾಗತಿಸಿದರು. ಜಯಪಾಲ ಚೌಗಲಾ ನಿರೂಪಿಸಿದರು.

# ಬೆಳಗಾವಿಯಲ್ಲಿ ಯಾತ್ರಿ ಸೇವಾ ದಿವಸ್ ಆಚರಣೆ

**ಬೆಳಗಾವಿ:** ಪ್ರಯಾಣಿಕರ ಕಲ್ಯಾಣ, ಸುಗಮ ಪ್ರಯಾಣದ ಅನುಭವ ಮತ್ತು ಸಮುದಾಯದ ಸಹಭಾಗಿತ್ವಕ್ಕೆ ತನ್ನ ಬದ್ಧತೆಯನ್ನು ಪುನರುಚ್ಚರಿಸುವ ಉದ್ದೇಶದಿಂದ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರವು ಬುಧವಾರ "ಯಾತ್ರಿ ಸೇವಾ ದಿವಸ್" ವನ್ನು ಆಚರಿಸಲಾಯಿತು. ಎಲ್ಲಾ ವಿಮಾನ ನಿಲ್ದಾಣಗಳಲ್ಲಿ ದಕ್ಷ, ಸುರಕ್ಷಿತ ಮತ್ತು ಪ್ರಯಾಣಿಕ ಸ್ನೇಹಿ ಸೇವೆಗಳನ್ನು ಒದಗಿಸುವ ಮಹತ್ವವನ್ನು ಗುರುತಿಸಲು ಈ ದಿನವನ್ನು ಸಮರ್ಪಿಸಲಾಗಿದೆ.





ಆಚರಣೆಯ ಭಾಗವಾಗಿ, ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಹಲವಾರು ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು. ಶಾಲಾ ಮಕ್ಕಳಿಗೆ ವಾಯುಯಾನ ಮತ್ತು ವೃತ್ತಿ ಅವಕಾಶಗಳನ್ನು ಪರಿಚಯಿಸಲು ವಾಯುಯಾನ ಹಾರುವ ಶಾಲೆ, ವಿಮಾನಯಾನ ಸಂಸ್ಥೆಗಳು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ತಜ್ಞರೊಂದಿಗೆ ಪರಿಚಿತ ಭೇಟಿಗಳು, ಸಸಿ ನೆಡುವ ಅಭಿಯಾನಗಳು, ಸಾಂಪ್ರದಾಯಿಕ ಸನ್ನೆಗಳೊಂದಿಗೆ ಪ್ರಯಾಣಿಕರನ್ನು ಸ್ವಾಗತಿಸುವುದು, ಸಾಂಸ್ಕೃತಿಕ ಪ್ರದರ್ಶನಗಳು, ರಸಪ್ರಶ್ನೆ ಮತ್ತು ಚಿತ್ರಕಲೆ ಸ್ಪರ್ಧೆಗಳು, ಫೋಟೋ ಬೂತ್‌ಗಳು, ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ಸೇರಿದಂತೆ ಹಲವಾರು ಚಟುವಟಿಕೆಗಳನ್ನು ಯೋಜಿಸಲಾಯಿತು.

ಉತ್ತರ ಕರ್ನಾಟಕದ ಅತ್ಯಂತ ಹಳೆಯ ವಿಮಾನ ನಿಲ್ದಾಣವಾಗಿರುವ ಬೆಳಗಾವಿ ವಿಮಾನ ನಿಲ್ದಾಣವು ದೆಹಲಿ, ಮುಂಬೈ, ಬೆಂಗಳೂರು, ಹೈದರಾಬಾದ್, ಅಹಮದಾಬಾದ್ ಮತ್ತು ಜೈಪುರಗಳಿಗೆ ವಾಯು ಸಂಪರ್ಕವನ್ನು ಹೊಂದಿದೆ, ಈ ಪ್ರದೇಶದ ಒಟ್ಟಾರೆ ಆರ್ಥಿಕ ಅಭಿವೃದ್ಧಿಗೆ ಬೆಳವಣಿಗೆಯ ಎಂಜಿನ್ ಆಗಿ ಕಾರ್ಯನಿರ್ವಹಿಸುತ್ತಿದೆ. ಸುರಕ್ಷತೆ, ಭದ್ರತೆ ಮತ್ತು ಪ್ರಯಾಣಿಕ ಕೇಂದ್ರಿತ ಸೇವೆಯ ಅತ್ಯುನ್ನತ ಗುಣಮಟ್ಟದೊಂದಿಗೆ ಪ್ರಯಾಣಿಕರಿಗೆ ಸೇವೆ ಸಲ್ಲಿಸುವ ನಮ್ಮ ಬದ್ಧತೆ ಉಳಿದಿದೆ, ಇದು ನಮ್ಮ ಪ್ರಮುಖ ಧ್ಯೇಯ ವಾಕ್ಯವಾಗಿದೆ.



ಈ ಉಪಕ್ರಮಗಳ ಮೂಲಕ, ೦೦೩ಖ ವಿಮಾನ ನಿಲ್ದಾಣ ಕಾರ್ಯಾಚರಣೆಗಳ ಹೃದಯಭಾಗದಲ್ಲಿ ಪ್ರಯಾಣಿಕರನ್ನು ಇರಿಸುವ ತನ್ನ ದೃಷ್ಟಿಕೋನವನ್ನು ಪುನರುಚ್ಚರಿಸುತ್ತದೆ ಮತ್ತು ಸಾಮಾಜಿಕ ಜವಾಬ್ದಾರಿ ಮತ್ತು ಪರಿಸರ ಜಾಗೃತಿಯನ್ನು ಉತ್ತೇಜಿಸುತ್ತದೆ.

ಕಾರ್ಯಕ್ರಮದಲ್ಲಿ ಸಂಸದರಾದ ಜಗದೀಶ್ ಶೆಟ್ಟರ್, ಜಿಲ್ಲಾಧಿಕಾರಿ ಮಹಮ್ಮೋದ ರೋಶನ್, ಬೆಳಗಾವಿ ವಿಮಾನ ನಿಲ್ದಾಣದ ನಿರ್ದೇಶಕರಾದ ಎಸ್.ತ್ಯಾಗರಾಜನ್, ಗೌರವಾನ್ವಿತ ಅಥಿತಿಗಳು, ವಿಮಾನ ನಿಲ್ದಾಣದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಭೂ ಪರಿವರ್ತನೆ ಆದೇಶ ರದ್ದುಪಡಿಸಲು ಆಗ್ರಹಿಸಿ ಮನವಿ

**ವಿಜಯಪುರ:** ಡೋಣಿ ನದಿ ಪ್ರವಾಹ ಪೀಡಿತ ವಿಜಯಪುರ ಜಿಲ್ಲೆಯ ಬಬಲೇಶ್ವರ ತಾಲೂಕಿನ ಸಾರವಾಡ ಗ್ರಾಮದ ರಿ.ಸ.ನಂ. 613/*/1 ಸೇರಿದಂತೆ ಪ್ರವಾಹ ಪೀಡಿತ ಎಲ್ಲ ಜಮೀನುಗಳಿಗೆ ನೀಡಿರುವ ಭೂ ಪರಿವರ್ತನೆ ಆದೇಶವನ್ನು ತಕ್ಷಣವೇ ರದ್ದುಪಡಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಒತ್ತಾಯಿಸಿ ಅಖಂಡ ಕರ್ನಾಟಕ ರೈತ ಸಂಘದ ವತಿಯಿಂದ ಆನಂದ ಕೆ. ಅವರ ಮೂಲಕ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ವಿಜಯಪುರ ಜಿಲ್ಲೆಯ ಬಬಲೇಶ್ವರ ತಾಲೂಕಿನ ಡೋಣಿ ನದಿ ಪ್ರವಾಹ ಪೀಡಿತ ಸಾರವಾಡ ಗ್ರಾಮದ ರಿ.ಸ.ನಂ. 613/*/1 ಸೇರಿದಂತೆ ಪ್ರವಾಹ ಪೀಡಿತ ಎಲ್ಲ ಜಮೀನುಗಳಿಗೆ ವಸತಿ ಉದ್ದೇಶಕ್ಕಾಗಿ ಭೂ ಪರಿವರ್ತನೆಗೆ ನೀಡಿದ ಅನುಮತಿಯನ್ನು ರದ್ದುಪಡಿಸುವಂತೆ ಮಾನ್ಯ ವಿಜಯಪುರ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದು ಇರುತ್ತದೆ.

ಸದರಿ ಜಿಲ್ಲಾಧಿಕಾರಿಗಳು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ವಿಜಯಪುರ ಇವರಿಗೆ ಸದರಿ ವಿಷಯದ ಕುರಿತು ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿದ್ದು ಇರುತ್ತದೆ. ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಸಹಾಯಕ ನಿರ್ದೇಶಕರವರು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲನೆ ಮಾಡಿ ದಿನಾಂಕ : 25–07–2025 (ಉಲ್ಲೇಖ 5 ) ರಂದು ಪ್ರವಾಹ ಪೀಡಿತ ಎಲ್ಲ ಜಮೀನುಗಳಿಗೆ ನೀಡಿದ ಭೂ ಪರಿವರ್ತನೆ ಅನುಮತಿಯನ್ನು ಪಡಿಸಲು ಮಾನ್ಯ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದು ಇರುತ್ತದೆ. ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಸಹಾಯಕ ನಿರ್ದೇಶಕರವರು ಹಣದ ಆಸೆ, ರಾಜಕೀಯ ವಸೀಲಿ



ಒತ್ತಡಕ್ಕೆ ಮಣಿದು ಮತ್ತೊಮ್ಮೆ ದಿನಾಂಕ: 31–07–2025 (ಉಲ್ಲೇಖ 6) ರಂದು ಸದರಿ ಪ್ರವಾಹ ಪೀಡಿತ ಪ್ರದೇಶದ ಜಮೀನುಗಳ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಗಳಿಗೆ ಸುಳ್ಳು ವರದಿ ನೀಡಿ ಸಾರವಾಡ ಗ್ರಾಮದ ಪ್ರವಾಹ ಪೀಡಿತ ಪ್ರದೇಶದ ಜನರ ಜೀವದ ಜೊತೆ ಚೆಲ್ಲಾಟವಾಡುತ್ತಿರುವುದು ವಿಷಾದನೀಯ. ಈಗಾಗಲೇ ನಾವು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಸಹಾಕಯ ನಿರ್ದೇಶಕರು ಸುಳ್ಳು ವರದಿ ನೀಡಿರುವ ಬಗ್ಗೆ (ಉಲ್ಲೇಖ 5) ರಂತೆ ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗಿದೆ.

ದಿನಾಂಕ : 05–08–2025 ರಂದು ಸಂಜೆ ಹಾಗೂ 06–08–2025 ರಂದು ಸುರಿದ ಮಳೆಗೆ ಸಾರವಾಡ ಗ್ರಾಮದಲ್ಲಿ ಡೋಣಿ ನದಿ ಪ್ರವಾಹ ಉಂಟಾಗಿ ಸದರಿ ರಿ.ಸ.ನಂ. 613/*/1 ಸೇರಿದಂತೆ ಇತರ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು ಇರುತ್ತದೆ. ಸದರಿ ಪ್ರವಾಹದ ವಿಷಯ ರಾಜ್ಯದ ದೃಶ್ಯ ಮತ್ತು ಪತ್ರಿಕಾ ಮಾಧ್ಯಮದಲ್ಲಿ ಪ್ರಸಾರವಾಗಿದ್ದು ಇರುತ್ತದೆ. ಸದರಿ ಪ್ರವಾಹ ಪೀಡಿತ ಪ್ರದೇಶಕ್ಕೆ ದಿನಾಂಕ : 06–08–2025 ರಂದು ಬಬಲೇಶ್ವರ ತಹಶೀಲ್ದಾರ ಹಾಗೂ ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡಿ ವೀಕ್ಷಿಸಿದ್ದು ಇರುತ್ತದೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಗ್ರಾಮಸ್ಥರು ಪ್ರವಾಹ ಪೀಡಿತ ಪ್ರದೇಶದಲ್ಲಿ ನೀಡಿದ ಭೂ ಪರಿವರ್ತನೆ ಅನುಮತಿಯನ್ನು ರದ್ದುಪಡಿಸಬೇಕೆಂದು ವಿಜಯಪುರ ಜಮಖಂಡಿ ರಾಜ್ಯ ಹೆದ್ದಾರಿ ರಸ್ತೆ ತಡೆದು ಪ್ರತಿಭಟನೆ ಮಾಡಿ ಭೂಪರಿವರ್ತನೆ ರದ್ದುಪಡಿಸುವಂತೆ ಒತ್ತಾಯಿಸಿದ್ದು ಇರುತ್ತದೆ. ಸದರಿ ಪ್ರವಾಹ ಪೀಡಿತ ವಿಷಯದ ಗಂಭೀರತೆಯ ಬಗ್ಗೆ ಜಿಲ್ಲಾಧಿಕಾರಿಗಳು, ತಹಶೀಲ್ದಾರ ಸೇರಿದಂತೆ ಎಲ್ಲ ಅಧಿಕಾರಿಗಳ ಗಮನದಲ್ಲಿ ಇರುತ್ತದೆ.

ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ಸಾರವಾಡ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ತಾವು ಮಾಡುವ ಕಾನೂನು ಬಾಹೀರ ಚಟುವಟಿಕೆಯಿಂದ ಸಾರವಾಡ ಗ್ರಾಮದ ಪ್ರವಾಹ ಪೀಡಿತ ಪ್ರದೇಶದಲ್ಲಿ ಮುಂದೆ ಆಗುವ ಸಾರ್ವಜನಿಕರ ಜೀವ, ಜಾನುವಾರುಗಳು, ಆಸ್ತಿ, ಪಾಸ್ತಿ ಹಾನಿಗೆ ನೀವೆ ನೇರ ಹೊಣೆ ಹೊರಬೇಕಾಗುತ್ತದೆ. ಕೂಡಲೇ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಉತಾರಿ, ನಕ್ಷೆ ಹಕ್ಕು ಪತ್ರ ತಯಾರು ಮಾಡುವ ಕಾರ್ಯವನ್ನು ಕೈ ಬಿಟ್ಟು ಗ್ರಾಮದ ಜನರ ಜೀವ ಆಸ್ತಿ, ಪಾಸ್ತಿ ರಕ್ಷಣೆ ಮಾಡಬೇಕೆಂದು ಅಖಂಡ ಕರ್ನಾಟಕ ರೈತ ಸಂಘ ಒತ್ತಾಯಿಸುತ್ತದೆ.

ಈ ಸಂದರ್ಭದಲ್ಲಿ ಹುಣಶ್ಯಾಳದ ಸಂಗನ ಬಸವ ಮಹಾಸ್ವಾಮಿಗಳು, ತಾಳಿಕೋಟಿ ತಾಲೂಕಾಧ್ಯಕ್ಷ ಬಾಲಪ್ಪಗೌಡ ಲಿಂಗದಳ್ಳಿ, ವಿಠ್ಠಲ ಬಿರಾದಾರ, ರೈತ ಹೋರಾಟಗಾರ ಮಲ್ಲಿಕಾರ್ಜುನ ಬಟಗಿ, ಜಿಲ್ಲಾ ಸಂಚಾಲಕ ಪಾಂಡು ಹ್ಯಾಟಿ, ಬಸವರಾಜ ಮಸರಕಲ್ಲ, ಗುರುರಾಜ ಪಡಶೆಟ್ಟಿ, ಲಾಲಸಾಬ ಹಳ್ಳೂರ, ಮಲಿಗೆಪ್ಪ ಸಾಸಲಗಿ, ಗುರಲಿಂಗಪ್ಪ ಪಡಸಲಗಿ, ರ್ಯಾವಪ್ಪಗೌಡ ಪುಲೇಶಿ, ಮಲ್ಲಪ್ಪ ಪಡಸಲಗಿ, ಗುರುಲಿಂಗಪ್ಪ ಪಡಸಲಗಿ, ಶ್ರೀಶೈಲ, ಬಸವರಾಜ ಹೊಸಳ್ಳಿ, ರಾಮನಗೌಡ ಹಾದಿಮನಿ, ಬಸನಗೌಡ ಬನ್ನಟ್ಟಿ, ಮೈಬೂಬ ಅವಟಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

**ಬನಹಟ್ಟಿಯ ಪ್ರಸಿದ್ಧ ಶ್ರೀ ಕಾಡಸಿದ್ಧೇಶ್ವರ ಜಾತ್ರೆ**

## 3ಟ್ರ್ಯಾಲಿಯಷ್ಟು ಸುಟ್ಟ ಪಟಾಕಿ ಕಾಗದ ಚೂರುಗಳು

**ವರದಿ ಮಲ್ಲಿಕಾರ್ಜುನ ತುಂಗಳ**

**ರಬಕವಿ–ಬನಹಟ್ಟಿ:** ಬನಹಟ್ಟಿ ಕಾಡಸಿದ್ಧೇಶ್ವರ ಜಾತ್ರೆಯ ನಿಮಿತ್ಯ ಸೆ.24 ರಂದು ಬನಹಟ್ಟಿ ಮಂಗಳವಾರ ಪೇಟೆ ರಸ್ತೆಯಲ್ಲಿ ಮಧ್ಯಾಹ್ನ 3 ಗಂಟೆಯಿಂದ ರಾತ್ರಿ 12ರವರೆಗೂ ಸಾವಿರಾರು ಭಕ್ತರು ಒಂದು ಕೋಟಿಗೂ ಅಧಿಕ ಬೆಲೆಯ ಮದ್ದು ಸುಟ್ಟರು. ಇದು ಶತಮಾನಗಳಿಂದ ನಡೆದು ಬಂದ ವಾಡಿಕೆ. ಆದರೆ ಇದರಿಂದ ನಿಧಾನವಾಗಿ ಮಾಲಿನ್ಯ ಹಾಳಾಗುತ್ತಿರುವುದು ಮಾತ್ರ ಖಚಿತವೆಂದು ಪ್ರಜ್ಞಾವಂತರ ಅಭಿಪ್ರಾಯವಾಗಿದೆ.



ದೇವಾಲಯ ಆವರಣ ಹಾಗೂ ಮಂಗಳವಾರ ಪೇಟೆಯ ವೃತ್ತದಿಂದ ಗಾಂಧಿವೃತ್ತ, ವೀರಭದ್ರೇಶ್ವರ ಲೇನ್‌ದವರೆಗೆ ವಾಸಿಸುವ ಅನೇಕ ಕುಟುಂಬಗಳು ಈ ಪಟಾಕಿಯ ಸದ್ದು ಹಾಗೂ ಹೊಗೆಯಿಂದ ಬೇಸತ್ತು ತಮ್ಮ ತಮ್ಮ ಮನೆ ಬಾಗಿಲ ಹಾಕಿರುತ್ತಾರೆ. ಹೊರಗಡೆ ನಡೆಯುವ ಜಾತ್ರೆಯ ಸಂಭ್ರಮ ಇವರ ಪಾಲಿಗೆ ಬರೀ ಹೊಗೆ.

ಅನೇಕ ಅಧಿಕಾರಿಗಳು ಈ ಪಟಾಕಿ



ಸುಡುವುದನ್ನು ನಿಲ್ಲಸಬೇಕೆಂದು ಸಾಕಷ್ಟು ಪ್ರಯತ್ನ ಮಾಡಿದ್ದಾರೆ. ಆದರೆ ಭಕ್ತರು ತಮ್ಮ ಇಷ್ಟಾರ್ಥಕ್ಕಾಗಿ ಪಟಾಕಿ ಸಿಡಿಸುವುದು ವಾಡಿಕೆಯಾಗಿದೆ. ಧಾರ್ಮಿಕತೆಗೆ ದಕ್ಕೆ ಬಾರದಿರಲಿ ಎಂಬ ಸದುದ್ದೇಶದಿಂದ ಕೆಲವು ಅಧಿಕಾರಿಗಳು ಮೌನರಾಗಿದ್ದಾರೆಂದು ಹೇಳಲಾಗುತ್ತಿದೆ.

ಪಟಾಕಿ ಸುಡುವ ಸಂದರ್ಭದಲ್ಲಿ ಅನೇಕರಿಗೆ ಗಾಯಗಳಾಗುತ್ತಿವೆ. ಕೆಲವೊಂದು ಅಂಗಡಿಗಳಿಗೆ ಬೆಂಕಿ ಕೂಡಾ ಹತ್ತಿ ಸುಡುವ ಹಂತದಲ್ಲಿದ್ದ ಘಟನೆಗಳು ಜರುಗಿವೆ. ಆದರೆ ಜಾತ್ರಾ ಕಮೀಟಿಯವರು, ಪೊಲೀಸರು. ಅಗ್ನಿಶಾಮಕ ದಳದವರು ಅನೇಕ ಪೂರ್ವ ಸಿದ್ದತೆ ಮಾಡಿಕೊಂಡು ಹಾನಿಗಳಾಗದಂತೆ ಎಚ್ಚರಿಕೆ ವಹಿಸುತ್ತಾರೆ.

**3 ಟ್ರ್ಯಾಲಿ ಕಾಗದ:** ಸುಟ್ಟ ಪಟಾಕಿಗಳ ಮದ್ದಿನ ಕಾಗದದ ಚೂರುಗಳು 3 ಟ್ರ್ಯಾಕ್ಟರ್‌ನ ಟ್ರ್ಯಾಲಿಗಳಷ್ಟು ರಸ್ತೆ ಮೇಲೆ ಬಿದ್ದಿರುವದನ್ನು ಸ್ವತಃ ಪೌರಾಯುಕ್ತ ಜಗದೀಶ ಈಟಿ ರಸ್ತೆಗಳಿದು ನೂರಾರು ಸಿಬ್ಬಂದಿಗಳಿಂದ ಸ್ವಚ್ಛತೆಯಲ್ಲಿ ಭಾಗಿಯಾಗಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :191, Postal Reg No. PMG/KA/NK/BM/135/25-27 / POST AT Vantamury Colony Post Office